ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 264
17-4-2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 264

## ಕಾರ್ಮಿಕರ ಕನಿಷ್ಠ ವೇತನ ಹೆಚ್ಚಳ

**ಬೆಂಗಳೂರು:** ವಿವಿಧ ಕೌಶಲ ಸಹಿತ ಮತ್ತು ಕೌಶಲ ರಹಿತ ಕಾರ್ಮಿಕರ ಕನಿಷ್ಠ ವೇತನಕ್ಕೆ ಸಂಬಂಧಿಸಿದಂತೆ ಕಾರ್ಮಿಕರ ಇಲಾಖೆ ಪರಿಷ್ಕೃತ ಅಧಿಸೂಚನೆ ಹೊರಡಿಸಿದೆ. ಪರಿಷ್ಕೃತ ಅಧಿಸೂಚನೆ ಪ್ರಕಾರ, ಶೌಚಾಲಯ, ಸ್ನಾನಗೃಹಗಳು, ಒಳ ಚರಂಡಿಗಳನ್ನು ಶುಚಿ ಮಾಡುವ ಕೆಲಸಗಾರರಿಗೆ ತಿಂಗಳಿಗೆ ರೂ. 21,251 ಕನಿಷ್ಠ ವೇತನ ನಿಗದಿಪಡಿಸಲಾಗಿದೆ. ಅತಿ ಕುಶಲ ಎಲೆಕ್ಟ್ರಿಷಿಯನ್ಗಳಿಗೆ ರೂ. 34,225 ಆಗಿದೆ. ನುರಿತ ಎಲೆಕ್ಟ್ರಿಷಿಯನ್ಗಳಿಗೆ ತಿಂಗಳಿಗೆ 31,114 ರೂಪಾಯಿ, ಅರೆ ಕುಶಲ ಕಾರ್ಮಿಕರಿಗೆ ತಿಂಗಳಿಗೆ 28,285 ರೂ ನಿಗದಿಪಡಿಸಲಾಗಿದೆ.

## ಜಾತಿಗಣತಿಯಲ್ಲಿ 1,01,60,000 ಜನರು ಭಾಗಿ: ಶೇ. 95 ರಷ್ಟು ನಿಖರ!

**ಬೆಂಗಳೂರು:** ರಾಜ್ಯದಲ್ಲಿ ಜಾತಿ ಗಣತಿ ವರದಿ ಬಗ್ಗೆ ತೀವ್ರವಾಗಿ ಚರ್ಚೆಯಾಗುತ್ತಿರುವಂತೆಯೇ, ವೈಜ್ಞಾನಿಕ ಹಾಗೂ ಸಮರ್ಪಕವಾಗಿ ಜಾತಿಗಣತಿ ನಡೆಸಲಾಗಿದ್ದು, ಇದರಲ್ಲಿ 1,01,60,000 ಜನರು ಭಾಗಿಯಾಗಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ, ಶೇ. 95 ರಷ್ಟು ನಿಖರವಾಗಿ ಸಮೀಕ್ಷೆ ನಡೆಸಲಾಗಿದೆ. ಶೇ. 98 ರಷ್ಟು ಗ್ರಾಮಾಂತರ ಹಾಗೂ ಶೇ.96 ರಷ್ಟುನಗರ ಪ್ರದೇಶಗಳಲ್ಲಿ ನಡೆದ ಸಮೀಕ್ಷೆಯಲ್ಲಿ 1,01,60,000 ಜನರು ಈ ಸಮೀಕ್ಷೆಯಲ್ಲಿ ಭಾಗಿಯಾಗಿದ್ದು, ಸುಮಾರು 1,36,000 ಜನ ಶಿಕ್ಷಕರಿದ್ದರು. ಶಿಕ್ಷಕರಲ್ಲಿ ಹೆಚ್ಚಿನವರು ಸಾಮಾನ್ಯ ವರ್ಗದವರೇ ಆಗಿದ್ದಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.ಸಮೀಕ್ಷೆಯನ್ನು ವೈಜ್ಞಾನಿಕವಾಗಿ ನಡೆಸಲಾಗಿದೆ. ಜಾತಿಗಣತಿಯ ವರದಿಯನ್ನು ಸಚಿವ ಸಂಪುಟದಲ್ಲಿ ಚರ್ಚಿಸಿದ ನಂತರವಷ್ಟೇ ವಿಧಾನಸಭೆಯಲ್ಲಿ ಮಂಡಿಸಲು ಸಾಧ್ಯ ಎಂದು ತಿಳಿಸಿದ್ದಾರೆ. ಜಾತಿಗಣತಿಯನ್ನು ಸಮರ್ಪಕವಾಗಿ ನಡೆಸಲಾಗಿಲ್ಲ ಎಂಬ ಬಿಜೆಪಿ ಆರೋಪ ರಾಜಕೀಯ ಲಾಭ ನಷ್ಟದ ಲೆಕ್ಕಾಚಾರದಿಂದ ಕೂಡಿದೆ. ಜಗದೀಶ್ ಶೆಟ್ಟರ್ ಅವರು ಮುಖ್ಯಮಂತ್ರಿಯಾಗಿ, ವಿರೋಧ ಪಕ್ಷದ ನಾಯಕರಾಗಿಯೂ ಅಸಮರ್ಥರಾಗಿದ್ದರು. ಕಾಂಗ್ರೆಸ್ ಪಕ್ಷಕ್ಕೆ ವಲಸೆ ಬಂದಾಗ ಬಿಜೆಪಿಯವರ ವಿರುದ್ಧವೇ ಹಲವು ಹೇಳಿಕೆಗಳನ್ನು ನೀಡಿದ್ದರು. ಜಾತಿಗಣತಿ ಜಾರಿಗೆ ತರಬೇಕೆಂಬುದು ಕಾಂಗ್ರೆಸ್ ನ ಭರವಸೆಯಾಗಿದೆ. ಒಂದು ಕುಟುಂಬದ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಪರಿಸ್ಥಿತಿಯ ಬಗ್ಗೆ ಮಾಹಿತಿ ತಿಳಿಯುವುದು ಸರ್ಕಾರವಾಗಿ ಅವಶ್ಯಕ. ಸ್ವಾತಂತ್ರ್ಯ ನಂತರ ಜಾತಿಗಣತಿ ನಡೆದಿಲ್ಲ, ಹಲವು ಸಂದರ್ಭಗಳಲ್ಲಿ ನ್ಯಾಯಾಲಯಗಳಲ್ಲಿ ಈ ಬಗ್ಗೆ ಮಾಹಿತಿ ಕೇಳಲಾಗಿತ್ತು. ಆದ್ದರಿಂದ ಜಾತಿಗಣತಿ ಮಾಡಬೇಕಾದ ಅನಿವಾರ್ಯತೆಯಿತ್ತು ಎಂದು ಅವರು ತಿಳಿಸಿದ್ದಾರೆ. ಒಳಮೀಸಲಾತಿ ಜಾರಿಗೆ ತರಲು ಜಸ್ಟೀಸ್ ನಾಗಮೋಹನ್ ದಾಸ್ ಅವರ ಆಯೋಗ ರಚಿಸಿ, ಎರಡು ತಿಂಗಳಲ್ಲಿ ವರದಿ ನೀಡಲು ಸೂಚನೆ ನೀಡಲಾಗಿದೆ. ರಾಜ್ಯದಲ್ಲಿ ಆದಿ ದ್ರಾವಿಡ, ಆದಿ ಆಂದ್ರ, ಆದಿ ಕರ್ನಾಟಕ, ಎಸ್.ಸಿ ಗಳು ಸೇರಿದಂತೆ 102 ಜಾತಿಗಳಿವೆ. ಇವರಲ್ಲಿ ಯಾರು ಯಾವ ಜಾತಿಗೆ ಸೇರಿದ್ದಾರೆಂಬ ಬಗ್ಗೆ ಸ್ಪಷ್ಟತೆ ಸಿಗಬೇಕೆಂಬ ಕಾರಣಕ್ಕೆ ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

## ಬಿಬಿಎಂಪಿ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆಗೆ ಶುಲ್ಕ: ಬಿಎನ್ ಪಿಯಿಂದ ಸಹಿ ಸಂಗ್ರಹ ಅಭಿಯಾನ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಮತ್ತು ರಸ್ತೆ ಬದಿ ಪಾರ್ಕಿಂಗ್ ವೆಚ್ಚ ಸಂಗ್ರಹಿಸಲು ನಿರ್ಧರಿಸಿರುವ ಸರ್ಕಾರದ ನಡೆ ವಿರುದ್ಧ ನಾಗರಿಕರು ಸಹಿ ಅಭಿಯಾನ ಆರಂಭಿಸಿದ್ದಾರೆ. ಬೆಂಗಳೂರು ನವನಿರ್ಮಾಣ ಪಕ್ಷ (ಃಓಕ) ಈ ಸಹಿ ಸಂಗ್ರಹ ಅಭಿಯಾನವನ್ನು ಆರಂಭಿಸಿದ್ದು, ಈಗಾಗಲೇ ಸುಮಾರು 1400 ಮಂದಿ ಈ ಅಭಿಯಾನದಲ್ಲಿ ಪಾಲ್ಗೊಂಡು ಸಹಿ ಹಾಕಿದ್ದಾರೆ. ಬೆಂಗಳೂರಿನ ವಿವಿಧ ಪ್ರದೇಶಗಳ 1,000 ಕ್ಕೂ ಹೆಚ್ಚು ಜನರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪರಿಚಯಿಸಿದ ಘನತ್ಯಾಜ್ಯ ನಿರ್ವಹಣಾ ಬಳಕೆದಾರ ಶುಲ್ಕ ಮತ್ತು ಖಾಸಗಿ ಸ್ಥಳಗಳಲ್ಲಿ ಪಾರ್ಕಿಂಗ್ ಶುಲ್ಕದಂತಹ ಹೆಚ್ಚುವರಿ ತೆರಿಗೆಗಳನ್ನು ಪಾವತಿಸುವುದಿಲ್ಲ ಎಂದು ಆನ್ಲೈನ್ನಲ್ಲಿ ಪ್ರತಿಜ್ಞೆ ಮಾಡಿದ್ದಾರೆ. ಬಿಎನ್ ಪಿ ಪಕ್ಷ ಹೆಚ್ಚುವರಿ ತೆರಿಗೆಯ ವಿಷಯಕ್ಕೆ ಸಂಬಂಧಿಸಿದಂತೆ 'ನಾನು ಹೊಸ ಶುಲ್ಕಗಳನ್ನು ಪಾವತಿಸುವುದಿಲ್ಲ.

# ಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟಲು ವ್ಯಾಪಕ ಅರಿವು ಕಾರ್ಯಕ್ರಮಗಳು ನಡೆಯಲಿ : ಡಾ. ನಾಗಲಕ್ಷ್ಮೀ ಚೌಧರಿ

**ದಾವಣಗೆರೆ:** ಮಹಿಳೆ ಹಾಗೂ ಮಕ್ಕಳ ಮೇಲಿನ ಅತ್ಯಾಚಾರಕ್ಕೆ ಕಡಿವಾಣ ಹಾಕಲು ಶಾಲಾ, ಕಾಲೇಜುಗಳಲ್ಲಿ ಆತ್ಮ ರಕ್ಷಣಾ ಕಲೆ, ಕೌಶಲ್ಯತೆ ಮತ್ತು ತುರ್ತು ಸಹಾಯವಾಣಿಗಳ ಬಗ್ಗೆ ವ್ಯಾಪಕ ಅರಿವು ಮೂಡಿಸುವ ಅಗತ್ಯವಿದೆ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ; ನಾಗಲಕ್ಷ್ಮೀ ಚೌಧರಿ ತಿಳಿಸಿದರು.



ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳೆಯರ ಸಬಲೀಕರಣದ ಕುರಿತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ಇಲಾಖೆಯಿಂದ ಸರ್ಕಾರಿ ಶಾಲಾ, ಕಾಲೇಜು, ಹಾಸ್ಟೆಲ್‌ಗಳಲ್ಲಿನ ಹೆಣ್ಣು ಮಕ್ಕಳಿಗೆ ಆತ್ಮ ರಕ್ಷಣೆಯ ಬಗ್ಗೆ ಅರಿವು ಮೂಡಿಸಿದ್ದು ಇದೇ ರೀತಿ ಖಾಸಗಿಯ ಎಲ್ಲಾ ಶಾಲಾ, ಕಾಲೇಜು ಮತ್ತು ಹಾಸ್ಟೆಲ್‌ಗಳಲ್ಲಿಯು ಬಾಲಕಿಯರು ಹಾಗೂ ಹೆಣ್ಣು ಮಕ್ಕಳ ರಕ್ಷಣೆ, ದೌರ್ಜನ್ಯ ತಡೆ ಕುರಿತು ವ್ಯಾಪಕ ಅರಿವು ಮೂಡಿಸುವುದರಿಂದ ಪೋಕ್ಸೋ, ಲೈಂಗಿಕ ದೌರ್ಜನ್ಯ ಪ್ರಕರಣಗಳು ಕಡಿಮೆಯಾಗಲಿವೆ. ಕೆಲವು ಶಾಲಾ, ಕಾಲೇಜುಗಳಲ್ಲಿ ಶಿಕ್ಷಕರಿಂದಲೇ ಲೈಂಗಿಕ ಕಿರುಕುಳ ಪ್ರಕರಣಗಳನ್ನು ನೋಡಲಾಗಿದೆ. ಆದ್ದರಿಂದ ಹೆಣ್ಣು ಮಕ್ಕಳು ದೌರ್ಜನ್ಯಕ್ಕೆ ಒಳಗಾದಾಗ ಧೈರ್ಯವಾಗಿ ದೂರುಗಳನ್ನು ನೀಡುವ ನಿಟ್ಟಿನಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸವನ್ನು ವ್ಯಾಪಕವಾಗಿ ಮಾಡಬೇಕಾಗಿದೆ ಎಂದರು.

ಸಿಸಿಟಿವಿ ಹೆಚ್ಚಳಕ್ಕೆ ಸೂಚನೆ; ನಗರ ಹಾಗೂ ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿಯು ಸಿಸಿ ಕ್ಯಾಮೆರಾಗಳನ್ನು ಹೆಚ್ಚಿಸಬೇಕು. ಮೊನ್ನೆ ನಡೆದ ಹುಬ್ಬಳಿ ಪ್ರಕರಣದಲ್ಲಿ ಸಿಸಿಟಿವಿಯಿಂದ ತುರ್ತಾಗಿ ಅಪರಾಧಿಯನ್ನು ಪತ್ತೆ ಮಾಡಲು ಸಾಧ್ಯವಾಯಿತು. ಎಲ್ಲಾ ಶಾಲಾ, ಕಾಲೇಜುಗಳಲ್ಲಿ ಸಂಪೂರ್ಣ ನಿಗಾ ವಹಿಸಲು ತಿಳಿಸಿದರು.

ದೌರ್ಜನ್ಯ ಸೇರಿದಂತೆ ವಿವಿಧ ಕಾರಣಗಳಿಂದ ಮಹಿಳೆಯರ ಕೊಲೆ ಪ್ರಕರಣಗಳು ವರದಿಯಾಗಿದ್ದು ಮಹಿಳೆಯರ ಮೇಲಿನ ಯಾವುದೇ ದೌರ್ಜನ್ಯ ಪ್ರಕರಣಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಬೇಕಾಗಿದೆ. 2023 ರಿಂದ 2025 ರ ವರೆಗೆ 19 ಮಹಿಳಾ ಕೊಲೆ ಪ್ರಕರಣ, 15 ವರದಕ್ಷಿಣ ಸಾವು, ಅನೈತಿಕ ಸಾಗಣೆ ತಡೆ ಐಟಿಪಿ ಕಾಯಿದೆಯಡಿ 14 ಪ್ರಕರಣ, ಕಿರುಕುಳ ಪ್ರಕರಣದಡಿ 152, ಡಿಪಿ ಕಾಯಿದೆಯಡಿ 183, ಮಹಿಳಾ ಕಿರುಕುಳದಡಿ 475 ಪ್ರಕರಣಗಳು ದಾಖಲಾಗಿವೆ. ಮಹಿಳೆ ಕಾಣೆಯಡಿ 1370 ಮಹಿಳೆಯರು ಹಾಗೂ 170 ಹುಡುಗಿಯರು ಕಾಣೆಯಾದ ಪ್ರಕರಣ ದಾಖಲಿಸಿದ್ದು ಹಲವು ಪ್ರಕರಣಗಳಲ್ಲಿ ಪತ್ತೆಹಚ್ಚಲಾಗಿದೆ. ಮತ್ತು ಕೆಲವು ಪ್ರಕರಣಗಳು ತನಿಖೆ ಹಂತದಲ್ಲಿವೆ.

ಮಹಿಳೆಯರ ಮೇಲಿನ ದೌರ್ಜನ್ಯ ಸೇರಿ ಅಪರಾಧ ಪ್ರಕರಣಗಳನ್ನು ಕಡಿಮೆ ಮಾಡಲು ಮಹಿಳಾ ಕೌನ್ಸಿಲಿಂಗ್ ಕೇಂದ್ರವನ್ನು ಆರಂಭಿಸಲು ರಾಷ್ಟ್ರೀಯ ಮಹಿಳಾ ಆಯೋಗ ನಿರ್ಧರಿಸಿದ್ದು ರಾಜ್ಯದಲ್ಲಿಯು ಈ ಕೇಂದ್ರವನ್ನು ಆರಂಭಿಸಲು ಉದ್ದೇಶಿಸಲಾಗಿದೆ. ಮಹಿಳಾ ದೌರ್ಜನ್ಯ ಪ್ರಕರಣಗಳನ್ನು ಕಡಿಮೆ ಮಾಡಲು ದಾವಣಗೆರೆಯಲ್ಲಿ ಹೊಸದಾಗಿ ಮಹಿಳೆಯರ ಕೌನ್ಸಿಲಿಂಗ್ ಕೇಂದ್ರವನ್ನು ಆದಷ್ಟು ಶೀಘ್ರದಲ್ಲಿಯೇ ಆರಂಭಿಸಲಾಗುತ್ತದೆ ಎಂದರು.

ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಿ; ಅನೇಕ ಗ್ರಾಮಾಂತರ ಪ್ರದೇಶದಲ್ಲಿ ಅಕ್ರಮವಾಗಿ ಅಂಗಡಿ, ಮನೆಗಳಲ್ಲಿ ಮದ್ಯವನ್ನು ಮಾರಾಟ ಮಾಡುವುದರಿಂದ ಕುಟುಂಬಗಳು ಹಾಳಾಗಿವೆ ಎಂದು ಮಹಿಳೆಯರ ದೂರುಗಳಾಗಿವೆ. ಯಾವುದೇ ಕಾರಣಕ್ಕೂ ಅಕ್ರಮ ಮದ್ಯ ಮಾರಾಟಕ್ಕೆ ಅವಕಾಶ ಮಾಡಿಕೊಡಬಾರದೆಂದರು. ಮೂಲಭೂತ ಸೌಕರ್ಯ ಕಲ್ಪಿಸಿ; ಪಂಚಾಯಿತಿಗಳಿಂದ ಗ್ರಾಮಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಕೆಲಸ ಮಾಡಬೇಕಾಗಿದೆ. ಜಗಳೂರು ತಾ; ಹನುಮಂತಪುರ ಗೊಲ್ಲರಹಟ್ಟಿಯಲ್ಲಿ ಕನಿಷ್ಠ ಮೂಲಭೂತ ಸೌಕರ್ಯದ ಕೊರತೆ ಇದ್ದು ಇಲ್ಲಿ ಸರಿಯಾದ ರಸ್ತೆ, ಆರ್.ಓ, ಬಸ್ ಸೌಕರ್ಯಗಳಿಲ್ಲ. ಇಲ್ಲಿ ತುರ್ತಾಗಿ ಕೆಎಸ್‌ಆರ್‌ಟಿಸಿ ಬಸ್ ನೀಡಲು ಮತ್ತು ವಿದ್ಯುತ್ ಪರಿವರ್ತಕ ಹಾಕಿ ನಿರಂತರ ವಿದ್ಯುತ್ ನೀಡಲು ತಿಳಿಸಿದರು.

ಗ್ರಾಮಸಭೆ; ಗ್ರಾಮ ಪಂಚಾಯಿತಿಗಳಲ್ಲಿ ನಿಯಮಿತವಾಗಿ ಗ್ರಾಮಸಭೆಗಳು ನಡೆಯುವಂತೆ ನೋಡಿಕೊಳ್ಳಬೇಕು. ಗ್ರಾಮಸಭೆಗಳಲ್ಲಿ ಮಹಿಳೆಯರು ಬಂದು ತಮಗೆ ಬೇಕಾದ ಅನುಕೂಲತೆಗಳ ಬಗ್ಗೆ ಕೇಳುವರು, ಇದರಿಂದ ಅನೇಕ ಮಹಿಳೆಯರಿಗೆ ಅನುಕೂಲವಾಗಲಿದೆ ಎಂದ ಅವರು ಆಸ್ಪತ್ರೆಗಳಲ್ಲಿ ಸ್ವಚ್ಚತೆ, ಔಷಧಗಳ ದಾಸ್ತಾನು, ಹೊರಗುತ್ತಿಗೆಯಡಿ ಕಾರ್ಮಿಕರಿಗೆ ಆಗುತ್ತಿರುವ ಶೋಷಣೆ ತಪ್ಪಿಸಲು ಆದಷ್ಟು ಬೇಗ ಜಿಲ್ಲಾ ಕಾರ್ಮಿಕರ ಸೊಸೈಟಿ ಆರಂಭಿಸಲು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೇಂದ್ರ ಸರ್ಕಾರದ ಸೇಡಿನ ರಾಜಕಾರಣ ಖಂಡಿಸಿ ಬ್ಲಾಕ್ ಕಾಂಗ್ರೆಸ್ ಪ್ರತಿಭಟನೆ

**ಚಿಕ್ಕಮಗಳೂರು:** ಭಾರತ ದೇಶದಲ್ಲಿ ಸ್ವಾತಂತ್ರ್ಯದ ಬಳಿಕ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ಇವರು ಇಡಿ ದುರುಪಯೋಗಪಡಿಸಿಕೊಂಡು ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಯವರ ವಿರುದ್ಧ ಚಾರ್ಜ್‌ಶೀಟ್ ಹಾಕುವ ಮೂಲಕ ಸೇಡಿನ ರಾಜಕಾರಣ ಮಾಡಿ ದೇಶಕ್ಕೆ ತ್ಯಾಗ ಮಾಡಿದವರಿಗೆ ಅಪಮಾನ ಮಾಡಿದ್ದಾರೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ ಮಂಜೇಗೌಡ ಆರೋಪಿಸಿದರು.



ಅವರು ಇಂದು ನಗರದ ಆಜಾದ್ ವೃತ್ತದಲ್ಲಿ ಸಮಾವೇಶಗೊಂಡು ಬ್ಲಾಕ್ ಕಾಂಗ್ರೆಸ್ ವತಿಯಿಂದ ಆಯೋಜಿಸಲಾಗಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರು.

ಇಂದು ಸ್ಪಷ್ಟ ಬಹುಮತದಿಂದ ಅಧಿಕಾರವನ್ನು ಕೇಂದ್ರಸರ್ಕಾರ ನಡೆಸುತ್ತಿಲ್ಲ, ಇನ್ನು ಕೆಲವೇ ದಿನಗಳಲ್ಲಿ ನಿಮ್ಮ ಪಾಪದ ಕೊಡ ತುಂಬಲಿದೆ. ಸರ್ಕಾರ ಪಥನವಾಗಲಿದೆ ಎಂದು ಭವಿಷ್ಯ ನುಡಿದರು.

ಜಾತಿ ಜಾತಿಗಳ ಮಧ್ಯೆ ವಿಷಬೀಜ ಬಿತ್ತಿ ಬಿಜೆಪಿ ಒಡೆದು ಹಾಳುವ ನೀತಿ ಅನುಸರಿಸುತ್ತಿದೆ ಎಂದು ದೂರಿದ ಅವರು, ಮುಂಬರುವ 2029 ರಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದು ತಕ್ಕ ಪಾಠ ಕಲಿಸಲಿದೆ ಎಂದು ಎಚ್ಚರಿಸಿದರು.

ಬಿಜೆಪಿ ಮುಖಂಡರ ಮನೆಯಲ್ಲಿ ಕೋಟ್ಯಾಂತರ ರೂ ಬೆಂಕಿಗಾಹುತಿಯಾದರೂ ತನಿಖೆ ಕೈಗೊಳ್ಳದ ಇಡಿಯವರ ವಿಪಕ್ಷ ನಾಯಕರಾದ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿಯವರ ಮೇಲೆ ಚಾರ್ಜ್‌ಶೀಟ್ ಸಲ್ಲಿಸಿ ಅಧಿಕಾರ ದುರ್ಬಳಕೆ ಮಾಡಿಕೊಂಡಿದೆ ಎಂದು ಆರೋಪಿಸಿದರು.

ಅಮಿತ್ ಷಾ ಅವರು ಗುಜರಾತ್‌ನಲ್ಲಿ ನಡೆದ ನರಮೇದದಲ್ಲಿ ಭಾಗಿಯಾಗಿದ್ದಾರೆಂಬ ಕಾರಣಕ್ಕೆ ಜೈಲಿಗೆ ಕಳಿಸಿದ್ದ ಸೇಡನ್ನು ತೀರಿಸಿಕೊಳ್ಳುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಬಿಜೆಪಿಗೆ ಕಾಂಗ್ರೆಸ್ ಪಕ್ಷ ತಕ್ಕ ಪಾಠ ಕಲಿಸುತ್ತದೆ ಎಂದು ಹೇಳಿದರು.

ದೇಶದ ಸುಭದ್ರತೆಗೆ, ಐಕ್ಯತೆಗಾಗಿ 4 ಸಾವಿರ ಕಿ.ಮೀಗಳ ಪಾದಯಾತ್ರೆ ನಡೆಸಿದ ರಾಹುಲ್ ಗಾಂಧಿಯವರು ದೇಶದ ಎಲ್ಲಾ ವರ್ಗದ ಬಡವರನ್ನು ಪ್ರೀತಿಯಿಂದ ಕಾಣುವ ಏಕೈಕ ನಾಯಕನಿಗೆ ಚಾರ್ಜ್‌ಶೀಟ್ ಹಾಕುವ ಮೂಲಕ ಅಪಮಾನ ಮಾಡಿ ಸೇಡಿನ ರಾಜಕಾರಣ ಮಾಡುತ್ತಿದ್ದಾರೆಂದು ಟೀಕಿಸಿದರು.

ಪ್ರತಿಭಟನೆಯಲ್ಲಿ ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್ ಅಹಮದ್, ಸದಸ್ಯರಾದ ರಘು, ಸೋಮಶೇಖರ್, ನಗರಸಭೆ ಸದಸ್ಯರಾದ ಮುನೀರ್, ಪರಮೇಶ್, ಜಿಲ್ಲಾ ಕಾಂಗ್ರೆಸ್ ಮುಖಂಡರಾದ ಹಿರೇಮಗಳೂರು ರಾಮಚಂದ್ರ, ಇಂದಾವರ ಲೋಕೇಶ್, ಪ್ರಕಾಶ್, ಸೋಮಶೇಖರ್, ರಾಘವೇಂದ್ರ, ಕೆ. ಭರತ್, ರಾಜೇಶ್, ಪುನೀತ್, ಲಕ್ಯಾ ಸಂತೋಷ್ ಮತ್ತಿತರರು ಭಾಗವಹಿಸಿದ್ದರು.

## ಇಂದು ಯುಬಿಡಿಟಿಯಲ್ಲಿ ಎಥ್ನಿಕ್ ಡೇ

**ದಾವಣಗೆರೆ:** ನಗರದ ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಏ.17 ರಂದು ಸಾಂಪ್ರದಾಯಿಕ ಉಡುಗೆ ದಿನ (ಎಥ್ನಿಕ್ ಡೇ) ಮತ್ತು ಚೈತ್ರ-25 ಕಾರ್ಯಕ್ರಮವನ್ನು ಬೆಳಿಗ್ಗೆ 9 ಗಂಟೆಗೆ ಯುಬಿಡಿಟಿ ಕಾಲೇಜಿನ ಪ್ಲಾಟಿನಂ ಭವನದ ಬಳಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಬೆಳಗಾವಿಯ ವಿಟಿಯು ಕುಲಸಚಿವ ಡಾ. ಬಿ. ಇ. ರಂಗಸ್ವಾಮಿ, ಉದ್ಘಾಟಿಸಲಿದ್ದು, ಕಾಲೇಜಿನ ಹಳೆಯ ವಿದ್ಯಾರ್ಥಿ ಡಾ. ವಿಶ್ವೇಶ್ವರ್ ಭಟ್, ಝುಂಬ ತರಬೇತುದಾರರು ಮತ್ತು ನೃತ್ಯಗಾರರಾದ ನಿರೀಕ್ಷಾ ಗೌಡ, ಯೂಟ್ಯೂಬರ್ ಅಶ್ವಿನಿ ಗೌಡ, ರಂಗಭೂಮಿ ಕಲಾವಿದ ಎಸ್. ಸಿದ್ದರಾಜು ಮುಖ್ಯ ಅತಿಥಿಗಳಾಗಿ ಹಾಗೂ ಕಾರ್ಯಕ್ರಮದ ತೀರ್ಪುಗಾರರಾಗಿ ಭಾಗವಹಿಸುತ್ತಿದ್ದಾರೆ. ಕಾಲೇಜಿನ ಪ್ರಾಚಾರ್ಯರಾದ ಡಾ. ಡಿ.ಪಿ. ನಾಗರಾಜಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

# ಬ್ಯಾಂಕು-ಎಟಿಎಂ ಗಳಲ್ಲಿ ಅಗತ್ಯ ಸುರಕ್ಷತಾ ಕ್ರಮ ಅಳವಡಿಸಿರಿ : ಗುರುದತ್ತ ಹೆಗಡೆ

**ಶಿವಮೊಗ್ಗ :** ಜಿಲ್ಲೆಯ ಎಲ್ಲ ಬ್ಯಾಂಕುಗಳಲ್ಲಿ ಸಿಸಿಟಿವಿ, ಎಚ್ಚರಿಕೆ ಗಂಟೆಗಳ ಅಳವಡಿಕೆ, ಭದ್ರತಾ ಸಿಬ್ಬಂದಿ ನಿಯೋಜನೆ, ಪೊಲೀಸ್ ಗಸ್ತು ಸೇರಿದಂತೆ ಅಗತ್ಯವಾದ ಎಲ್ಲ ರೀತಿಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದರು.



ಜಿಲ್ಲಾಡಳಿತ ಕಚೇರಿಯಲ್ಲಿ ಬುಧವಾರ ಜಿಲ್ಲೆಯ ಬ್ಯಾಂಕುಗಳ ಅಧಿಕಾರಿಗಳೊಂದಿಗೆ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಸುರಕ್ಷತಾ ಸಮಿತಿ(ಡಿಎಲ್‌ಎಸ್‌ಸಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 358 ಬ್ಯಾಂಕುಗಳು, 435 ಎಟಿಎಂ ಗಳು, 05 ಕರೆನ್ಸಿ ಚೆಸ್ಟ್ಗಳು ಇದ್ದು, ಆರ್‌ಬಿಐ ಮಾರ್ಗಸೂಚಿಯನ್ವಯ ಬ್ಯಾಂಕುಗಳಲ್ಲಿ ಹಾಗೂ ಕರೆನ್ಸಿ ಚೆಸ್ಟ್ಗಳಲ್ಲಿ ಸಿಸಿಟಿವಿ, ಸೈರನ್, ಬೆಂಕಿ ನಂದಿಸುವ ಸಾಧನಗಳನ್ನು ಅಳವಡಿಸಬೇಕು ಹಾಗೂ ಅವುಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿವೆಯೇ ಎಂದು ಖಾತ್ರಿ ಪಡಿಸಿಕೊಳ್ಳಬೇಕು. ಎಚ್ಚರಿಕೆ ಗಂಟೆ ಮತ್ತು ಇತರೆ ಸುರಕ್ಷತಾ ಕ್ರಮಗಳೊಂದಿಗೆ ಸ್ಟ್ರಾಂಗ್ ಕೊಠಡಿ ನಿರ್ವಹಣೆ ಮಾಡಬೇಕು. ಕರನ್ಸಿ ಚೆಸ್ಟ್ಗಳಿಂದ ಹಣ ವರ್ಗಾವಣೆ ವೇಳೆ ಅಗತ್ಯ ಸುರಕ್ಷತಾ ಕ್ರಮಗಳಾದ ಪೊಲೀಸ್ ನಿಯೋಜನೆ ಸೇರಿದಂತೆ ಇತರೆ ಕ್ರಮಗಳನ್ನು ಕೈಗೊಳ್ಳಬೇಕು. ಹಾಗೂ ಹತ್ತಿರದ ಪೊಲೀಸ್ ಠಾಣೆಯೊಂದಿಗೆ ಸಂಪರ್ಕದಲ್ಲಿರಬೇಕು.

ಎಟಿಎಂ ಗಳಲ್ಲಿ ಸಿಸಿ ಟಿವಿ ಅಳವಡಿಕೆ, ಸೈರನ್ ಮತ್ತು ಬೆಂಕಿ ನಂದಿಸುವ ಸಾಧನಗಳನ್ನು ಅಳವಡಿಸಿ, ಅವು ಕಾರ್ಯ ನಿರ್ವಹಿಸುವಂತೆ ನೋಡಿಕೊಳ್ಳಬೇಕು. ನಿರ್ದಿಷ್ಟಪಡಿಸಿದ ರೀತಿಯಲ್ಲಿ ಎಟಿಎಂ ರೂಂ ಗಳು ಇರಬೇಕು. ಅಧಿಕೃತ ವ್ಯಕ್ತಿಗಳ ಎದುರು ನಗದನ್ನು ಲೋಡ್ ಮತ್ತು ಅನ್‌ಲೋಡ್ ಮಾಡಬೇಕು. ಹತ್ತಿರದ ಪೊಲೀಸ್ ಠಾಣೆಗೆ ಬ್ಯಾಂಕುಗಳ ಜವಾಬ್ದಾರಿಯುತ ವ್ಯಕ್ತಿಗಳ ಸಂಪರ್ಕದ ವಿವರವನ್ನು ನೀಡಿರಬೇಕು. ಗ್ರಾಹಕರು ವಂಚನೆಗೊಳಗಾಗದಂತೆ ಮಾಹಿತಿ ನೀಡುವಂತಹ ಫಲಕಗಳನ್ನು ಎಟಿಎಂ ಒಳಗೆ ಹಾಕಿರಬೇಕು.

ಬ್ಯಾಂಕುಗಳ ಭದ್ರತಾ ಸಿಬ್ಬಂದಿಗಳು ಮತ್ತು ನಗದು ಬೆಂಗಾವಲು ಕರ್ತವ್ಯನಿರತ ಸಿಬ್ಬಂದಿಗಳ ಗನ್ ಪರವಾನಗಿ ನವೀಕರಣ ಖಾತ್ರಿಪಡಿಸಿಕೊಳ್ಳಬೇಕು. ಭದ್ರತಾ ಸಿಬ್ಬಂದಿಗಳಿಗೆ ಸಮರ್ಪಕ ತರಬೇತಿ ನೀಡಿರಬೇಕು. ನಗದು ವರ್ಗಾವಣೆ ವೇಳೆ ಭದ್ರತಾ ಸಿಬ್ಬಂದಿ ಕೊರತೆ ಇದ್ದಲ್ಲಿ ಪೊಲೀಸ್ ಇಲಾಖೆಯ ಸಹಾಯ ಪಡೆಯಬೇಕು ಎಂದ ಅವರು ಗನ್ ಪರವಾನಗಿ ನವೀಕರಣಕ್ಕೆ ಸಂಬಂಧಿಸಿದಂತೆ ಏನಾದರೂ ಸಮಸ್ಯೆಗಳಿದ್ದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರನ್ನು ಸಂಪರ್ಕಿಸುವಂತೆ ತಿಳಿಸಿದರು.

ಸೈಬರ್ ವಿಭಾಗದ ಡಿವೈಎಸ್‌ಪಿ ಕೃಷ್ಣಮೂರ್ತಿ ಮಾತನಾಡಿ, ಸೈಬರ್ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ಅನುಕೂಲ ಮಾಡಿಕೊಡಲು ಬ್ಯಾಂಕುಗಳಲ್ಲಿ ಸಂತ್ರಸ್ತರ ಕೆವೈಸಿ ಮತ್ತು ಬ್ಯಾಂಕ್ ಸ್ಟೇಟ್‌ಮೆಂಟ್‌ನ್ನು ಕೇಳಲಾಗುತ್ತದೆ. ಆ ವೇಳೆ ಬ್ಯಾಂಕುಗಳಿಂದ ತಕ್ಷಣಕ್ಕೆಸಹಕಾರಸಿಗದೆವಿಳಂಬವಾಗುತ್ತಿರುವುದಕ್ಕೆ ಅನೇಕ ವೇಳೆ ಸಂತ್ರಸ್ತರನ್ನು ನಷ್ಟದಿಂದ ರಕ್ಷಿಸುವುದು ಕಷ್ಟವಾಗುತ್ತಿದೆ. ಆದ್ದರಿಂದ ಬ್ಯಾಂಕುಗಳು ಕ್ಷಿಪ್ರಗತಿಯಲ್ಲಿ ಸಹಕರಿಸಬೇಕು ಹಾಗೂ ಕೋರ್ಟ್ ಆದೇಶವಾದ ಪ್ರಕರಣಗಳಲ್ಲಿ ತಕ್ಷಣಕ್ಕೆ ಕ್ರಮ ವಹಿಸಬೇಕೆಂದು ಕೋರಿದರು.

ಜಿಲಾಧಿಕಾರಿಗಳು, ಸೈಬರ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಂತ್ರಸ್ತರಿಗೆ ಅನುಕೂಲವಾಗುವ ದೃಷ್ಟಿಯಿಂದ ಬ್ಯಾಂಕುಗಳು ವಿಳಂಬ ವಹಿಸದೇ ಸಹಕರಿಸಬೇಕು. ಹಾಗೂ ಸೈಬರ್ ಪೊಲೀಸ್ ಠಾಣೆಯವರು ಬ್ಯಾಂಕ್‌ವಾರು ಮುಖ್ಯ ಕಚೇರಿಗಳ ಇಮೇಲ್ ಐಡಿಯನ್ನು ಸಂಗ್ರಹಿಸಿ ಅಲ್ಲಿ ವ್ಯವಹರಿಸಿದಲ್ಲಿ ಶೀಘ್ರ ಪ್ರತಿಕ್ರಿಯೆ ಲಭಿಸುವುದು ಎಂದು ತಿಳಿಸಿದರು.

ಸಭೆಯಲ್ಲಿ ಲೀಡ್ ಬ್ಯಾಂಕ್ ಮ್ಯಾನೇಜರ್ ಚಂದ್ರಶೇಖರ್, ಎಎಸ್‌ಪಿ ಅನಿಲ್ ಕುಮಾರ್ ಭೂಮರಡ್ಡಿ, ವಿವಿಧ ಬ್ಯಾಂಕುಗಳ ಅಧಿಕಾರಿಗಳು ಹಾಜರಿದ್ದರು.

## ಮೇ.2ರಂದು ಸಾಮೂಹಿಕ ಉಪನಯನ

**ದಾವಣಗೆರೆ:** ಶ್ರೀ ಶಂಕರ ಸೇವಾ ಸಂಘದಿಂದ ಮೇ.2ರಂದು ಆದಿಗುರು ಶ್ರೀ ಶಂಕರ ಜಯಂತಿ ಅಂಗವಾಗಿ ಸಾಮೂಹಿಕ ಉಪನಯನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಆಸಕ್ತ ತ್ರಿಮತಸ್ಥ ಬ್ರಾಹ್ಮಣರು ನಗರದ ರಿಂಗ್ ರಸ್ತೆಯಲ್ಲಿರುವ ಶ್ರೀ ಶಾರದಾಂಬ ದೇವಸ್ಥಾನದಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗೆ ಮೊ: 8296408068, 9448043569 ಸಂಪರ್ಕಿಸಿ ಹೆಸರು ನೋಂದಾಯಿಸಲು ಸಂಘದ ಶ್ರೀನಿವಾಸ ಜೋಷಿ ತಿಳಿಸಿದ್ದಾರೆ.

# ಕಾಡಾನೆಗಳ ಉಪಟಳಕ್ಕೆ ಅಪಾರ ಪ್ರಮಾಣದ ಬೆಳೆಹಾನಿ

**ಮೂಡಿಗೆರೆ:** ತಾಲ್ಲೂಕಿನ ಮಾಹಿನಹಳ್ಳಿ ಗ್ರಾಮದ ಹೊರಟ್ಟಿ ಗ್ರಾಮದಲ್ಲಿ 25ಕ್ಕೂ ಹೆಚ್ಚು ಕಾಡಾನೆಗಳ ಗುಂಪು, ಮಂಜುನಾಥ್ ಎಂಬುವವರ ಕಾಫಿ ತೋಟಕ್ಕೆ ಮಗ್ಗಿ ಬೆಳೆಹಾನಿ ಮಾಡಿದೆ.

ಮಂಗಳವಾರ ನಸುಕಿನಲ್ಲಿ 25 ರಿಂದ 30 ಕಾಡಾನೆಗಳ ಗುಂಪು ಹೊಸಪುರ, ಗುಡಿ, ಚಂದ್ರಾಪುರ ಮಾರ್ಗವಾಗಿ ಹೊರಟ್ಟಿಗೆ ಬಂದಿದ್ದು, ಬೆಳಿಗ್ಗೆ 6.45 ರವರೆಗೂ ಮಂಜುನಾಥ್ ಎಂಬುವವರ ತೋಟದಲ್ಲಿಯೇ ಬೀಡು ಬಿಟ್ಟು, 2 ಎಕರೆ ಜಮೀನಿನಲ್ಲಿದ್ದ ಕಾಫಿ, ಕಾಳು ಮೆಣಸು, ಬಾಳೆ, ಅಡಿಕೆ, ಸಿಲ್ವರ್ ಮರಗಳನ್ನು ನೆಲಸಮಗೊಳಿಸಿವೆ. ತೋಟದ ಪಕ್ಕದಲ್ಲೇ ಮನೆಗಳಿದ್ದು, ಆನೆಗಳಿಗೆ ಹೆದರು ಜನರು ಮನೆಯಿಂದ ಹೊರ ಬರಲು ಹಿಂದೇಟು ಹಾಕಿದರು. ಬೆಳಕು ಹರಿಯುವವರೆಗೆ ಕಾಫಿ ತೋಟದಲ್ಲೇ ಕಾಡಾನೆಗಳು ತಿರುಗಾಡಿದೆ ಇಡೀ ತೋಟವನ್ನು ನಾಶ ಮಾಡಿವೆ ಎಂದು ಸ್ಥಳೀಯರು ಹೇಳಿದರು. ಆನೆ ಹಿಂಡು ಗ್ರಾಮದ ಪಕ್ಕದಲ್ಲಿರುವ ಅರಣ್ಯ ಸೇರಿದ್ರು, ಹೊರಟ್ಟಿ, ತುದಿಯಾಲ, ಮೂಡಸಸಿ ಸುತ್ತಮುತ್ತಲ ಗ್ರಾಮಗಳಲ್ಲಿ ಇಡೀ ದಿನ ಭಯದ ವಾತಾವರಣ ನಿರ್ಮಾಣವಾಗಿತ್ತು.

'ಎರಡು ತಿಂಗಳಿನಿಂದ ಮಾಕೋನಹಳ್ಳಿ, ನಂದೀಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲೇ ಕಾಡಾನೆಗಳು ಬೀಡು ಬಿಟ್ಟಿವೆ. ಕಾಡಾನೆಗಳು ದಾಳಿ ನಡೆಸುತ್ತಿರುವ ಪ್ರದೇಶಗಳು ಗಡಿ ಗ್ರಾಮಗಳಾಗಿದ್ದು, ಬೇಲೂರು ತಾಲ್ಲೂಕನ್ನು ಕಾಮನೆಗಳು ಪ್ರವೇಶಿಸದಂತೆ ತಡೆಯುತ್ತಿರುವುದರಿಂದ ಗಡಿ ಗ್ರಾಮಗಳಲ್ಲಿಯೇ ಕಾಡಾನೆಗಳು ಸುತ್ತಾಡುತ್ತಿದೆ. ನಿರಂತರವಾಗಿ ದಾಳಿ ನಡೆಯುತ್ತಿದ್ದರೂ ಯಾವುದೇ ಪರಿಹಾರ ಕೈಗೊಳ್ಳುತ್ತಿಲ್ಲ. ಕಾಡಾನೆಗಳಿರುವ ಬಗ್ಗೆ ಪ್ರತಿ ಗಂಟೆಗೂ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡುವ ಅರಣ್ಯ ಇಲಾಖೆಯು, ಇಲ್ಲಿನ ವಾಸ್ತವಾಂಶವನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಶಾಶ್ವತ ಪರಿಹಾರ ಕಂಡುಕೊಳ್ಳುತ್ತಿಲ್ಲ' ಎನ್ನುವುದು ಸ್ಥಳೀಯರ ದೂರು. ಕಾಡಾನೆಗಳು ಗುಂಪಾಗಿ ತಿರುಗಾಡುತ್ತಿರುವುದರಿಂದ ಸುತ್ತಲಿನ ಪ್ರದೇಶಗಳಲ್ಲಿ ಭಯದ ವಾತಾವರಣ ನಿರ್ಮಾಣವಾಗಿದ್ದು, ಜನರು ಮನೆಯಿಂದ ಹೊರಬರಲು ಹಿಂದೇಟು ಹಾಕುತ್ತಿದ್ದಾರೆ. ರಾತ್ರಿಯಾಗುತ್ತಿದ್ದಂತೆ ಗ್ರಾಮಗಳಲ್ಲಿ ಜನರು ಜೀವ ಬಿಗಿ ಹಿಡಿದು ಕೂರುವಂತಾಗಿದೆ. ಕೂಡಲೇ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು.



# ಧರ್ಮ ಒಡೆಯುವ ಕೆಲಸ ಮಾಡಬೇಡಿ ಬಿವೈವಿ ಎಚ್ಚರಿಕೆ

ಬೆಂಗಳೂರು : ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ನಿಮ್ಮ ಕುರ್ಚಿಯನ್ನು ಭದ್ರಪಡಿಸಿಕೊಳ್ಳಲು ಜಾತಿ, ಜಾತಿಗಳ ನಡುವೆ ಧರ್ಮ, ಧರ್ಮಗಳ ನಡುವೆ ಬಿರುಕು ಮೂಡಿಸುವ ಕೆಲಸವನ್ನು ಇನ್ನಾದರೂ ಕೈ ಬಿಡಿ. ಇಲ್ಲವಾದರೆ ಇಷ್ಟರಲ್ಲೇ ರಾಜ್ಯದ ಜನತೆಯೇ ದಂಗೆ ಎದ್ದು ನಿಮಗೆ ಬುದ್ಧಿ ಕಲಿಸುವ ಕಾಲ ದೂರವಿಲ್ಲ ಎಂಬುದನ್ನು ನೀವು ಮರೆಯದಿರಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಎಚ್ಚರಿಕೆ ಕೊಟ್ಟಿದ್ದಾರೆ.

ಈ ಕುರಿತು ತಮ್ಮ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಸುದೀರ್ಘ ಪೋಸ್ಟ್ ಮಾಡಿರುವ ಅವರು, ಕರ್ನಾಟಕ ರಾಜ್ಯದ ಒಟ್ಟು ಜನ ಕಲ್ಯಾಣದ ಬಗ್ಗೆ ಚಿಂತಿಸುವ ಬದಲು ಮತ ಬ್ಯಾಂಕನ್ನು ಕೇಂದ್ರೀಕರಿಸಿ, ಅಲುಗಾಡುತ್ತಿರುವ ನಿಮ್ಮ ಕುರ್ಚಿ ಉಳಿಸಿಕೊಳ್ಳಲು ಜಾತಿಗಣತಿಯ ಹೆಸರಿನಲ್ಲಿ ಗೊಂದಲಗಳನ್ನು ಸೃಷ್ಟಿಸಿ ಸಮಾಜವನ್ನು ಛಿದ್ರ ಮಾಡಲು ಹೊರಟಿರುವ ನಿಮಗೆ, ಪ್ರಧಾನಿಗಳನ್ನು ಕುರಿತು ಟೀಕಿಸುವ ಯಾವುದೇ ನೈತಿಕ ಹಕ್ಕು ಇಲ್ಲ ಎಂದು ತಿರಗೇಟು ನೀಡಿದ್ದಾರೆ.

ಕರ್ನಾಟಕದಲ್ಲಿ ಮುಸ್ಲಿಂ ಮೀಸಲಾತಿಯ ಹೆಸರಿನಲ್ಲಿ ಪರಿಶಿಷ್ಟರೂ ಸೇರಿದಂತೆ ಇತರ ಶೋಷಿತರು ಹಾಗೂ ಬಡವರ ಹಕ್ಕು ಕಸಿಯಲಾಗುತ್ತಿದೆ ಎಂದು ಪ್ರಧಾನಿಗಳು ಹೇಳಿದ್ದಾರೆ. ಮೀಸಲಾತಿ ಪ್ರಮಾಣವನ್ನು ಪರಿಶಿಷ್ಟರಿಗೆ ಶೇ.15 ರಿಂದ ಶೇ.17 ಕ್ಕೆ, ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3 ರಿಂದ ಶೇ.7 ಕ್ಕೆ ಹೆಚ್ಚಿಸಿದ್ದು ನಮ್ಮ ಬಿಜೆಪಿ ಸರ್ಕಾರದ ಆಡಳಿತ ಅವಧಿಯಲ್ಲಿಯೇ ಹೊರತು. ನಿಮ್ಮ ಆಡಳಿತ ಅವಧಿಯಲ್ಲಿ ಅಲ್ಲ ಎನ್ನುವುದು ನಿಮಗೆ ನೆನಪಿರಲಿ ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡಲು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿರುವ



ಸಂವಿಧಾನದಲ್ಲಿ ಅವಕಾಶವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ. ಕರ್ನಾಟಕದಲ್ಲಿ ಮುಸ್ಲಿಂಮರ ಕಲ್ಯಾಣಕ್ಕಿಂತ ಅವರ ಮತಬ್ಯಾಂಕ್ ಕೇಂದ್ರೀಕರಿಸಿ ನೀವು ರೂಪಿಸುತ್ತಿರುವ ನಿಯಮ ಹಾಗೂ ಯೋಜನೆಗಳನ್ನು ಪ್ರಧಾನಿಗಳು ಟೀಕಿಸಿದ್ದಾರೆ. ವಾಸ್ತವದಲ್ಲಿ ರಾಜ್ಯದಲ್ಲಿ ಧರ್ಮಗಳ ನಡುವೆ ಬಿರುಕು ಮೂಡಿಸಿ ದ್ವೇಷ ಬಿತ್ತುವ ಕೆಲಸಕ್ಕೆ ಮುಂದಾಗಿರುವುದು ನೀವು ಎಂದು ಅವರುಆರೋಪಿಸಿದ್ದಾರೆ.

ರಾಷ್ಟ್ರಕವಿ ಕುವೆಂಪು ಅವರ ಕಲ್ಪನೆಯ ಸರ್ವ ಜನಾಂಗದ ಶಾಂತಿಯ ತೋಟಕ್ಕೆ ಬೆಂಕಿ ಹೆಚ್ಚುತ್ತಿದ್ದೀರಿ. ಇದನ್ನೇ ಪ್ರಧಾನಮಂತ್ರಿಗಳು ಹೇಳಿದ್ದಾರೆ. ನೀವೊಬ್ಬ ವಕೀಲರೂ ಹೌದು ಸಂವಿಧಾನವನ್ನು ನೀವು ಓದಿಕೊಂಡಿರಬಹುದು ಎಂದು ನಾವು ಭಾವಿಸಿದ್ದೆವು. ಆದರೆ ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡುವ ಕುರಿತು ನೀವು ಹೇಳಿರುವ ಮಾತುಗಳು ಆಶ್ಚರ್ಯವೆನಿಸಿದೆ ಎಂದು ಅವರು ವ್ಯಂಗ್ಯವಾಡಿದ್ದಾರೆ.

ಸಂವಿಧಾನದ ಆರ್ಟಿಕಲ್ 15(1) ಏನು ಹೇಳುತ್ತದೆ ಎನ್ನುವುದನ್ನು ಬಹುಶಃ ನೀವು ಓದಿಕೊಂಡಂತೆ ಕಾಣುತ್ತಿಲ್ಲ. ಧರ್ಮದ ಆಧಾರದ ಮೇಲೆ ಮೀಸಲಾತಿ ಕಲ್ಪಿಸಿ ತಾರತಮ್ಯ ಮಾಡಲು ಎಲ್ಲಿಯೂ ಅವಕಾಶವಿಲ್ಲ ಎಂದು ಸ್ಪಷ್ಟವಾಗಿ ಹೇಳಲಾಗಿದೆ. ಇದನ್ನೇ ಮೋದಿ ಜೀ ಉಲ್ಲೇಖಿಸಿದ್ದಾರೆ. ಇದರಿಂದ ವಿಚಲಿತರಾಗಿರುವ ನೀವು ಮುಸ್ಲಿಂ ಓಲೈಕೆಗಾಗಿ ಭಂಡತನದ ಸಮರ್ಥನೆಗಿಳಿದಿದ್ದೀರಿ ಎಂದು ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾಷಣವನ್ನು ನೆನಪಿಸಿಕೊಂಡಿದ್ದೀರಿ. ಅಲ್ಲೆಲ್ಲೂ ಧರ್ಮಾಧಾರಿತ ಮೀಸಲಾತಿ ಬೇಡ, ಇಲ್ಲವೇ ಬೇಕು ಎನ್ನುವ ಅಭಿಪ್ರಾಯ ಅಂಬೇಡ್ಕರ್ ಅವರು ಉಲ್ಲೇಖಿಸಿರುವುದಿಲ್ಲ. ಎಂದು ಜಾಣ ತೋರಲು ಹೊರಟಿದ್ದೀರಿ. ಆದರೆ ಸರ್ವಶ್ರೇಷ್ಠ ಸಂವಿಧಾನದ ಆರ್ಟಿಕಲ್ 15 (1) ಏನು ಹೇಳುತ್ತದೆ ಎನ್ನುವುದನ್ನು ನೀವೇಕೆ ಓದಿಕೊಂಡಿಲ್ಲ? ಎಂದು ಪ್ರಶ್ನಿಸಿದ್ದಾರೆ.

ಕರ್ನಾಟಕದಲ್ಲಿ ಮುಸ್ಲಿಮರಿಗೆ ನೀವು ಮೀಸಲಾತಿ ನೀಡುತ್ತಿರುವುದು ಧರ್ಮಾಧಾರಿತವಾಗಿಯೇ ಹೊರತು, ಜಾತಿ ಆಧಾರಿತವಾಗಿ ಅಲ್ಲವೇ ಅಲ್ಲ. ಆಂಧ್ರ ಪ್ರದೇಶದಲ್ಲಿ ಈ ಹಿಂದೆ ಚಂದ್ರಬಾಬು ನಾಯ್ಡು ಅವರ ಸರ್ಕಾರ ಮುಸ್ಲಿಂ ಮೀಸಲಾತಿಯನ್ನು ರೂಪಿಸಿರುವುದು ಅತೀ ಹಿಂದುಳಿದ ಮುಸ್ಲಿಂ ಪಂಗಡಗಳಿಗೇ ಹೊರತು ಇಡಿಯಾಗಿ ಮುಸ್ಲಿಂ ಧರ್ಮೀಯರಿಗಲ್ಲ, ಆದಾಗ್ಯೂ ಇದನ್ನು ಅಲ್ಲಿನ ಉಚ್ಚ ನ್ಯಾಯಾಲಯ ರದ್ದುಪಡಿಸಿದೆ ಎಂದಿದ್ದಾರೆ.

ಈ ಸಂಬಂಧ ಸರ್ವೋಚ್ಚ ನ್ಯಾಯಾಲಯದಲ್ಲಿ ವಿಚಾರಣೆ ಮುಂದುವರೆದಿದೆ. ಸಂವಿಧಾನದ ಆಶಯದ ಪ್ರಕಾರ ಹಿಂದೂಗಳಿಗೆ ಧರ್ಮಾಧಾರಿತವಾಗಿ ಮೀಸಲಾತಿ ಕಲ್ಪಿಸಲಾಗಿಲ್ಲ. ಹಿಂದೂ ಧರ್ಮದ ಜಾತಿಗಳ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿ ಆಧಾರಿಸಿ ಮೀಸಲಾತಿ ಕಲ್ಪಿಸಲಾಗುತ್ತಿದೆ. ಇದೇ ಮಾನದಂಡ ಮುಸ್ಲಿಂಮರಿಗೆ ನೀಡಲಾಗಿರುವ ಮೀಸಲಾತಿಗೆ ಏಕೆ ಅನ್ವಯವಾಗಿಲ್ಲ ಎನ್ನುವುದೇ ನಮ್ಮ ಪ್ರಶ್ನೆಯಾಗಿದೆ ಎಂದು ಹೇಳಿದ್ದಾರೆ.

ಸದ್ಯ ಧರ್ಮ, ಜಾತಿ, ಭಾಷೆ, ಲಿಂಗ ಸಮಾನತೆಯ ತಾರತಮ್ಯ ಮಾಡಲು ಅವಕಾಶವಿಲ್ಲ ಎನ್ನುವ ಸಂವಿಧಾನದ ಪರಿಚ್ಛೇದಗಳನ್ನು ಓದುವ ಅನಿವಾರ್ಯತೆಯ ಕಷ್ಟವನ್ನು ತೆಗೆದುಕೊಳ್ಳಬೇಕಾಗಿರುವುದು ನೀವೇ ಹೊರತು ಪ್ರಧಾನಿಗಳಲ್ಲ, ಮುಸ್ಲಿಮರಲ್ಲಿ ಹಿಂದುಳಿದಿರುವಿಕೆಯ ಬಗ್ಗೆ ಮಾಹಿತಿಯನ್ನು ಎಷ್ಟು ತಿಳಿದುಕೊಳ್ಳಬೇಕೋ ಅಷ್ಟನ್ನೂ ಪ್ರಧಾನ ಮಂತ್ರಿಗಳು ತಿಳಿದುಕೊಂಡಿದ್ದಾರೆ. ಈ ಹಿನ್ನಲೆಯಲ್ಲಿಯೇ ಮುಸ್ಲಿಂ ಸಮುದಾಯದಲ್ಲಿ ಶೋಷಣೆಗೊಳಗಾಗಿರುವ ಒಳಪಂಗಡಗಳು ಹಾಗೂ ಮಹಿಳೆಯರ ಕಲ್ಯಾಣಕ್ಕಾಗಿ ಕಾನೂನು ಹಾಗೂ ಯೋಜನೆಗಳನ್ನು ರೂಪಿಸಿದ್ದಾರೆ ಎಂದು ಕೇಂದ್ರ ಸರ್ಕಾರದ ಸಾಧನೆಗಳನ್ನು ಹೊಗಳಿದ್ದಾರೆ.

ಮುಸ್ಲಿಂ ಸಮುದಾಯವನ್ನು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮೇಲೆತ್ತುವ ನಿಟ್ಟಿನಲ್ಲಿ ಸ್ವಾತಂತ್ರ ನಂತರದಲ್ಲಿ ಮೊದಲ ಬಾರಿಗೆ ಚಾರಿತ್ರಿಕ ನಿರ್ಧಾರ ತೆಗೆದುಕೊಂಡಿದ್ದು ನರೇಂದ್ರ ಮೋದಿಜೀ ಅವರ ನೇತೃತ್ವದ ಕೇಂದ್ರ ಸರ್ಕಾರ ಎನ್ನುವುದನ್ನು ನೀವು ಮರೆಯುವಂತಿಲ್ಲ. ಸಂವಿಧಾನದ ಆಶಯವನ್ನು ಎತ್ತಿ ಹಿಡಿಯುವ ನಿಟ್ಟಿನಲ್ಲಿ ತ್ರಿವಳಿ ತಲಾಕ್ ರದ್ದುಪಡಿಸಿದ್ದು, ವಕ್ಫ್ ಕಾಯ್ದೆಯ ಹೆಸರಿನಲ್ಲಿನ ಗೊಂದಲ ಹಾಗೂ ಶೋಷಣೆಯನ್ನು ತಪ್ಪಿಸುವ ತಿದ್ದುಪಡಿ ಮಸೂದೆ ಜಾರಿಗೊಳಿಸಿರುವುದು, ಸಾಮಾಜಿಕವಾಗಿ ಹಿಂದುಳಿದಿರುವ ಮುಸ್ಲಿಮರು ಹಾಗೂ ಮಹಿಳೆಯರ ಹಕ್ಕು ರಕ್ಷಿಸುವುದಕ್ಕಾಗಿಯೇ ಹೊರತು. ನಿಮ್ಮ ರೀತಿ ಮತಬ್ಯಾಂಕ್ ಕೇಂದ್ರೀಕರಿಸಿ ರಾಜಕಾರಣ ಮಾಡುವುದಕ್ಕಾಗಿ ಅಲ್ಲ ಎಂದು ವಿಜಯೇಂದ್ರ ಅವರು, ಸಿದ್ದರಾಮಯ್ಯ ಅವರ ಆರೋಪಗಳಿಗೆ ತಿರುಗೇಟು ಕೊಟ್ಟಿದ್ದಾರೆ.

## ಸುಪ್ರೀಂ ಕೋರ್ಟ್ ಮಾರ್ಗಸೂಚಿ ತಪ್ಪದೇ ಪಾಲನೆ : ಶಶಿಕುಮಾರ್

ಹುಬ್ಬಳ್ಳಿ : ಕಳೆದ ನಾಲ್ಕು ದಿನಗಳ ಹಿಂದೆ ಅಪ್ರಾಪ್ತ ಬಾಲಕಿಯನ್ನು ಅಪಹರಿಸಿ ಅತ್ಯಾಚಾರಕ್ಕೆ ಯತ್ನಿಸಿ ಕೊಲೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಎನ್ ಶಶಿಕುಮಾರ್ ಹೇಳಿದರು.

ನಗರದಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಆರೋಪಿಯನ್ನು ಬಂಧಿಸಲು ಪೊಲೀಸರು ಹೋಗಿದ್ದಾಗ, ತಪ್ಪಿಸಿಕೊಳ್ಳುವ ವೇಳೆ ಗುಂಡು ತಗುಲಿ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ. ಇಂತಹ ಪ್ರಕರಣದಲ್ಲಿ ಏನೆಲ್ಲಾ ಕ್ರಮ ಕೈಗೊಳ್ಳಬೇಕೆಂದು ಸುಪ್ರೀಂ ಕೋರ್ಟ್ ಸೂಚನೆ ಇದೆ ಅದರಂತೆ ನಡೆದಿದೆ ಎಂದರು.

ಈಗ ಮರಣೋತ್ತರ ಪರೀಕ್ಷೆ ಮುಂದುವರೆದಿದ್ದು ನ್ಯಾಯಾಗ ತನಿಖೆ ಮಾಡಬೇಕೆಂದಿತ್ತು. ಅದು ಕೂಡ ಆಗುತ್ತಿದೆ. ಆರೋಪಿಯ ಮಾಹಿತಿ ಪರಿಶೀಲನೆ



ಮಾಡಲಾಗುತ್ತಿದೆ, ಆತ ವಾಸವಿದ್ದ ಸ್ಥಳದಲ್ಲಿ ಹಾಗೂ ಆತ ಸಂಚರಿಸಿದ ಎಲ್ಲಾ ಕಡೆ ಮಾಹಿತಿ ಕಲೆ ಹಾಕಲಾಗುತ್ತಿದೆ ಎಂದು ಹೇಳಿದರು.

ಪೋಸ್ಟ್ ಮಾರ್ಟಂ ಆದ ಮೇಲೆ ಅವರಿಗೆ ಸಂಬಂಧ ಪಟ್ಟವರನ್ನ ಹುಡುಕುವ ಕೆಲಸ ಮಾಡುತ್ತಿದ್ದೆವೆ. ಎಲ್ಲಾ ಭಾಷೆಗಳಲ್ಲಿ ಆರೋಪಿಯ ವಿವರಗಳನ್ನು ಬೇರೆ ಬೇರೆ ಕಡೆ ಕಳಿಸಲಾಗಿದೆ. ಆತ ಪಾಟ್ನಾದವನಾಗಿದ್ದಾನೆ ಎಂಬ ಮಾಹಿತಿ ಇದೆ. ಆತನ ಸಂಬಂಧಿಕರು ಪತ್ತೆಯಾಗದಿದ್ದರೆ ಅಂತ್ಯಕ್ರಿಯೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಸುಪ್ರೀಂ ಕೋರ್ಟ್ ಮಾರ್ಗಸೂಚಿ ಪ್ರಕಾರ ಚಾಚೂ ತಪ್ಪದೇ ಪಾಲನೆ ಮಾಡಲಾಗುತ್ತಿದೆ. ಅವರ ಕುಟುಂಬಸ್ಥರು ಬರುವ ತನಕ ಕೋಲ್ಡ್ ಸ್ಟೋರೇಜ್ ನಲ್ಲಿ ಕೆಲವು ದಿನಗಳ ಕಾಲ ಶವ ಇರಿಸಲಾಗುತ್ತೆ.

ಇಷ್ಟಾದರೂ ಆತನ ಸಂಬಂಧಿಕರು ಬಾರದಿದ್ದರೆ ಮಣ್ಣು ಮಾಡುವ ಪ್ರಕ್ರಿಯೆಯನ್ನ ಕಾನೂನು ತಜ್ಞರ ಸಲಹೆ ಪಡೆದು ಮುಂದುವರೆಯುತ್ತೇವೆ ಸಾರ್ವಜನಿಕ ಹಿತಾಸಕ್ತಿ ಬಗ್ಗೆ ಹೆಚ್ಚಿನ ಮಾಹಿತಿ ಲಭ್ಯ ಆಗಿಲ್ಲ ಏನೇ ಕೇಳಿದ್ರು ಉತ್ತರ ನೀಡಲು ಸಿದ್ಧವಿದ್ದೇವೆ ಎಂದರು.

## ಎರಡನೇ ದಿನಕ್ಕೆ ಕಾಲಿಟ್ಟ ಲಾರಿ ಮುಷ್ಕರ

ಬೆಂಗಳೂರು : ಲಾರಿ ಚಾಲಕರ ಮುಷ್ಕರ ಎರಡನೇ ದಿನಕ್ಕೆ ಕಾಲಿಟ್ಟಿದೆ.

ಸಾರಿಗೆ ಸಚಿವರು ಹಾಗೂ ಸಿಎಂ ಜೊತೆ ನಡೆದ ಸಭೆ ವಿಫಲವಾದ ಹಿನ್ನೆಲೆಯಲ್ಲಿ ಮುಷ್ಕರ ಮುಂದುವರೆಸಲು ಲಾರಿ ಮಾಲೀಕರು ತೀರ್ಮಾನಿಸಿದ್ದಾರೆ.

ನಿನ್ನೆ ನಡೆದ ಸಭೆಯಲ್ಲಿ ಸಾರಿಗೆ ಸಚಿವರು ಆರ್‌ಟಿಓ ಚೆಕ್ ಪೋಸ್ಟ್ ಬಗ್ಗೆ ಮಹಾರಾಷ್ಟ್ರ ಸೇರಿದಂತೆ ಬೇರೆ ರಾಜ್ಯಗಳ ಬಗ್ಗೆ ಅಧ್ಯಯನ ಮಾಡ್ತವೆ ಅಂದಿದ್ದರು. ಸಿಎಂ ಜೊತೆ ಸಭೆಯಲ್ಲಿ ಡಿಸೇಲ್ ಹಾಗೂ ಟೋಲ್ ಬಗ್ಗೆ ಮನವಿ ಮಾಡಿದ್ದರೂ ಅವರು ಯಾವುದೇ ಭರವಸೆ ನೀಡದ ಹಿನ್ನೆಲೆಯಲ್ಲಿ ಮುಷ್ಕರ ಮುಂದುವರೆಸಲು ತೀರ್ಮಾನಿಸಿದ್ದೇವೆ ಎಂದು ಲಾರಿ ಅಸೋಸಿಯೇಷನ್ ಅಧ್ಯಕ್ಷ



ಷಣ್ಮುಖಪ್ಪ ತಿಳಿಸಿದ್ದಾರೆ.

ನಾವು ಹೋರಾಟದಿಂದ ಹಿಂದೆ ಹೋಗಲ್ಲ, ನಮ್ಮ ಹೋರಾಟ ಮುಂದುವರೆಯುತ್ತದೆ. ಆಟೋರಿಕ್ಷಾದಂತೆ ಲಾರಿ ಮಾಲೀಕರಿಗೆ ಬಾಡಿಗೆ ದರ ಫಿಕ್ಸ್ ಮಾಡಿ. ಡಿಸೇಲ್ ದರ ಎಷ್ಟಾದ್ರೂ ಏರಿಸಿ ಎಂದು ಷಣ್ಮುಖಪ್ಪ ಸರ್ಕಾರಕ್ಕೆ ಬೇಡಿಕೆ ಇಟ್ಟಿದ್ದಾರೆ. ಚಾಲಕರ ಈ ಪಟ್ಟಿನಿಂದ ಪೆಟ್ರೋಲ್, ಡಿಸೇಲ್ ಟ್ಯಾಂಕರ್‌ಗಳ ಸಂಚಾರ ಸ್ಥಗಿತವಾಗುವ ಸಾಧ್ಯತೆಗಳಿವೆ. ಹೊರ ರಾಜ್ಯಗಳಿಂದ ತರಕಾರಿ, ಸೊಪ್ಪು ಸೇರಿದಂತೆ ಅನೇಕ ದಿನನಿತ್ಯ ಬಳಕೆ ಪದಾರ್ಥಗಳು ಬರುವುದು ನಿಂತಿದೆ. ಇತ್ತ ಪೆಟ್ರೋಲ್ ಬಂಕ್ಗಳಲ್ಲಿ ನಾಳೆಯಿಂದ ಪೆಟ್ರೋಲ್ ಸಿಗೋದು ಡೌಟಾಗಿದೆ.

ಇನ್ನೂ ರೈತರು ಬೆಳೆದ ತರಕಾರಿಗಳು, ಹಣ್ಣು, ಹೂಗಳು ಸರಕು ಸಾಗಣೆ ವಾಹನ ಇಲ್ಲೆ ಹಳ್ಳಿಗಳಲ್ಲಿ ಕೊಳಿತ್ತಿದೆ. ಈಗಾಗಲೇ ರಾಜ್ಯದಲ್ಲಿ ಅಕಾಲಿಕ ಮಳೆ ಇದರಿಂದ ತರಕಾರಿ, ಹೂ, ಹಣ್ಣುಗಳ ಬೆಳೆ ನಾಶವಾಗುತ್ತಿದೆ. ಇತ್ತ ಬೆಳೆದ ಬೆಳೆ ಮಾರಾಟ ಮಾಡಲು ಟ್ರಾನ್ಸ್‌ಪೋಟ್ 9 ಮುಷ್ಕರ ಮುಂದುವರೆದಿರುವುದು ರೈತರನ್ನು ಕಂಗೆಡಿಸಿದೆ.

## ಬಿಗಿ ಕ್ರಮಗಳ ನಡುವೆ ಸಿಇಟಿ ಆರಂಭ

ಬೆಂಗಳೂರು : ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ 2025ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಇಂದು ಮತ್ತು ನಾಳೆ ಬಿಗಿ ಕ್ರಮಗಳ ನಡುವೆ ನಡೆಯಲಿದೆ.ನ್ನು ಕೈಗೊಳ್ಳಲಾಗಿದೆ.

ಹೊರನಾಡು ಮತ್ತು ಗಡಿನಾಡು ಕನ್ನಡಿಗರಿಗೆ ನಿನ್ನೆ ಕನ್ನಡ ಭಾಷಾ ಪರೀಕ್ಷೆ ಬೆಂಗಳೂರು, ಮಂಗಳೂರು, ವಿಜಯಪುರ ಮತ್ತು ಬೆಳಗಾವಿ ನಗರಗಳ ಒಟ್ಟು ಐದು ಕೇಂದ್ರಗಳಲ್ಲಿ ನಡೆಯಿತು.

ಇಂದು ಭೌತ ವಿಜ್ಞಾನ ಮತ್ತು ರಸಾಯನ ವಿಜ್ಞಾನ ಹಾಗೂ ನಾಳೆ ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿದ್ದು, ಹಿಂದೆಂದಿಗಿಂತ ಹೆಚ್ಚು ಬಿಗಿ ಬಂದೋಬಸ್ತ್ ಮಾಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಪರೀಕ್ಷಾ ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ಸ್ಪರ್ಧಾತ್ಮಕ ನೇಮಕಾತಿ ಪರೀಕ್ಷೆ ಮಾದರಿಯಲ್ಲೇ ಸಿಇಟಿಗೂ ಕ್ಯಾಮರಾ ಕಣ್ಗಾವಲು ಇಡಲಾಗಿದೆ. ವೆಬ್ ಕಾಸ್ಟಿಂಗ್ ಮೂಲಕ ಎಲ್ಲ 775 ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡುವ ವ್ಯವಸ್ಥೆ ಮಾಡಲಾಗಿದೆ. ಯಾವುದೇ ಅಕ್ರಮಗಳು ನಡೆಯದಂತೆ ಕಟ್ಟೆಚ್ಚರ ವಹಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ



ಕಾರ್ಯನಿರ್ವಹಣಾಧಿಕಾರಿಗಳು ಮೇಲುಸ್ತುವಾರಿ ನಡೆಸಲಿದ್ದಾರೆ ಎಂದು ವಿವರಿಸಿದ್ದಾರೆ.

ಪೊಲೀಸ್ / ಗೃಹ ರಕ್ಷಕ ದಳದ ಸಿಬ್ಬಂದಿ ಅಭ್ಯರ್ಥಿಗಳನ್ನು ತೀವ್ರ ತಪಾಸಣೆ ಮಾಡಿಯೇ ಪರೀಕ್ಷಾ ಕೇಂದ್ರದೊಳಗೆ ಬಿಡಲಿದ್ದಾರೆ. ಹೀಗಾಗಿ ಕನಿಷ್ಠ ಒಂದೂವರೆ ಗಂಟೆ ಮುಂಚೆಯೇ ಪರೀಕ್ಷಾ ಕೇಂದ್ರಕ್ಕೆ ಅಭ್ಯರ್ಥಿಗಳು ಬಂದು ತಪಾಸಣೆಗೆ ಒಳಗಾಗಬೇಕು. ಅಭ್ಯರ್ಥಿಯ ಮುಖ ಚಹರೆ ಮತ್ತು ಕ್ಯೂಆರ್ ಕೋಡ್ ವ್ಯವಸ್ಥೆ ಮೂಲಕ ಅಭ್ಯರ್ಥಿಯ ನೈಜತೆ ಪರಿಶೀಲನೆ ಮಾಡಲಾಗುತ್ತದೆ. ಯಾರದೋ ಪರೀಕ್ಷೆಯನ್ನು ಇನ್ಯಾರೊ ಬರೆಯುವುದನ್ನು ತಡೆಯುವ ಉದ್ದೇಶದಿಂದ ಈ ವ್ಯವಸ್ಥೆ ಜಾರಿ ಮಾಡಲಾಗಿದೆ.

ಸೀಟು ಹಂಚಿಕೆಯಾಗಿ ಕಾಲೇಜುಗಳಿಗೆ ಪ್ರವೇಶ ಆಗುವ ಸಂದರ್ಭದಲ್ಲಿ ಕೂಡ ಅಭ್ಯರ್ಥಿಯ ಭಾವಚಿತ್ರವನ್ನು ಹೋಲಿಕೆ ಮಾಡಿಯೇ ಪ್ರವೇಶ ನೀಡುವ ವ್ಯವಸ್ಥೆ ಮಾಡಿದ್ದು, ನಕಲಿ ಅಭ್ಯರ್ಥಿಗಳಿಗೆ ಸಂಪೂರ್ಣ ಕಡಿವಾಣ ಹಾಕಲಾಗಿದೆ ಎಂದು ಪ್ರಸನ್ನ ತಿಳಿಸಿದ್ದಾರೆ.

ಕಷ್ಟಪಟ್ಟು ಓದಿದ ಅಭ್ಯರ್ಥಿಗಳಿಗೆ ಯಾವುದೇ ರೀತಿ ಮೋಸ ಆಗಲು ಬಿಡುವುದಿಲ್ಲ. ಅತ್ಯಂತ ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಎಲ್ಲ ರೀತಿಯ ತಯಾರಿ ಮಾಡಿಕೊಳ್ಳಲಾಗಿದೆ. ನಿಶ್ಚಿತೆಯಿಂದ ಪರೀಕ್ಷೆ ಬರೆಯಬಹುದು ಎಂದು ಅವರು ಅಭಯ ನೀಡಿದ್ದಾರೆ.

ದ್ವಿತೀಯ ಪಿಯುಸಿ ಮೊದಲ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿರುವ ಅಥವಾ ಅನುತ್ತೀರ್ಣರಾಗಿರುವವರಿಗೆ ಇನ್ನೂ ಫಲಿತಾಂಶವನ್ನು ಉತ್ತಮ ಮಾಡಿಕೊಳ್ಳಲು ಅವಕಾಶ ಇರುವ ಕಾರಣ ಯಾರೂ ಸಿಇಟಿ ಬರೆಯುವುದನ್ನು ತಪ್ಪಿಸಿಕೊಳ್ಳಬಾರದು. ಯಾರೆಲ್ಲ ಶುಲ್ಕ ಪಾವತಿಸಿದ್ದಾರೋ ಅವರೆಲ್ಲರೂ ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆ ಬರೆಯಬೇಕು. ದ್ವಿತೀಯ ಪಿಯುಸಿಯ 3ನೇ ಪರೀಕ್ಷೆಯ ಅಂಕಗಳನ್ನು ಪಡೆದು ಶ್ರೇಣಿ ನಿಗದಿ ಮಾಡುವ ವ್ಯವಸ್ಥೆ ಇದ್ದು. ಯಾರೂ ಇದರಿಂದ ಅವಕಾಶ ವಂಚಿತರಾಗಬಾರದು ಎಂದು ಅವರು ಸಲಹೆ ನೀಡಿದ್ದಾರೆ.

ವಸ್ತ್ರ ಸಂಹಿತೆ:

ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಪ್ರತ್ಯೇಕ ವಸ್ತ್ರ ಸಂಹಿತೆ ಮಾಡಿದ್ದು, ಕಡ್ಡಾಯವಾಗಿ ಎಲ್ಲರೂ ಪಾಲಿಸಬೇಕು. ಪುರುಷ, ಮಹಿಳಾ ಅಭ್ಯರ್ಥಿಗಳು ಅರ್ಧ ತೋಳಿನ ಬಟ್ಟೆ ಧರಿಸಬೇಕು. ಸಾಧ್ಯವಾದಷ್ಟು ಕಾಲರ್ ಇಲ್ಲದಿರುವುದನ್ನು ಹಾಕಿಕೊಂಡು ಬಂದರೆ ಉತ್ತಮ. ಪುರುಷರು, ಜೇಬು ಇಲ್ಲದ, ಕಡಿಮೆ ಜೇಬುಗಳಿರುವ ಸರಳ ಪ್ಯಾಂಟ್ ಧರಿಸಬೇಕು. ಕುರ್ತಾ ಪೈಜಾಮ/ಜೀನ್ಸ್ ಪ್ಯಾಂಟ್‌ಗೆ ಅವಕಾಶ ಇರುವುದಿಲ್ಲ. ಶೂ ಕೂಡ ನಿಷೇಧಿಸಲಾಗಿದೆ.

ಮೊಬೈಲ್, ಪೆನ್ ಡ್ರೈವ್, ಇಯರ್ ಫೋನ್, ಮೈಕ್ರೋ ಫೋನ್ ಇತ್ಯಾದಿ ಎಲೆಕ್ಟ್ರಾನಿಕ್ ವಸ್ತುಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ. ಒಮ್ಮೆ ಕೆಇಎ ವೆಬ್ ಸೈಟ್ ನಲ್ಲಿ ಇರುವ ವಸ್ತ್ರ ಸಂಹಿತೆಯ ವಿವರಗಳನ್ನು ಓದಿಕೊಂಡು, ಆ ಪ್ರಕಾರ ಪರೀಕ್ಷೆಗೆ ಬರಬೇಕು ಎಂದು ಸಲಹೆ ನೀಡಿದ್ದಾರೆ.

## ಹಿಂದುಳಿದ ವರ್ಗಗಳ ಆಯೋಗದ ವರದಿಗೆ ಸಂಪೂರ್ಣ ಅನುಮತಿಯಿದೆ : ದಿನೇಶ್ ಗುಂಡುರಾವ್

ಬೆಂಗಳೂರು : ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷಾ ವರದಿಗೆ ನನ್ನ ಸಂಪೂರ್ಣ ಅನುಮೋದನೆಯಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಹೇಳಿದ್ದಾರೆ.



ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಚಿವ ಸಂಪುಟದಲ್ಲಿ ಈ ಸಮೀಕ್ಷಾ ವರದಿ ಮಂಡನೆಯಾಗಲಿದೆ. ಸಚಿವ ಸಂಪುಟವು ಈ ಸಮೀಕ್ಷಾ ವರದಿಯನ್ನು ಅಂಗೀಕರಿಸಿದ ಬಳಿಕ ವರದಿಯ ನ್ಯೂನತೆಗಳು ಹಾಗೂ ಪರಿಣಾಮಕಾರಿ ಅನುಷ್ಠಾನದ ಕುರಿತು ಮುಕ್ತ, ನ್ಯಾಯಯುತವಾದ ಚರ್ಚೆಗೆ ನಾಂದಿ ಹಾಡಬಹುದು ಎಂದಿದ್ದಾರೆ.

ಜಯಪ್ರಕಾಶ್ ಹೆಗ್ಡೆ ನೇತೃತ್ವದ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಆಧಾರದಲ್ಲಿ ಸಲ್ಲಿಸಿರುವ ಸಮೀಕ್ಷಾ ವರದಿಯನ್ನು ಪರಿಶೀಲಿಸಿದ್ದೇನೆ. ಸಾಮಾಜಿಕ ನ್ಯಾಯ ಮತ್ತು ಸಮಾನ ಬದುಕಿನ ಮೇಲೆ ನಮಗೆ ನಂಬಿಕೆಯಿದ್ದರೆ ಹಾಗೂ ಆ ತತ್ವಕ್ಕೆ ನಾವು ಬದ್ಧರಾಗಿದ್ದರೆ, ಈ ಸಮೀಕ್ಷಾ ವರದಿಯನ್ನು ವೈಜ್ಞಾನಿಕವಾಗಿ ವಿಶ್ಲೇಷಣೆ ಮಾಡುವುದು ಸೂಕ್ತ ಎಂಬುದು ನನ್ನ ವೈಯಕ್ತಿಕ ಅಭಿಪ್ರಾಯ. ಜೊತೆಗೆ ಈ ವರದಿಯ ತಾರ್ಕಿಕ ಅಂಶಗಳನ್ನು ಒಳಗೊಂಡಿದೆ ಎಂಬುದನ್ನು ಒತ್ತಿ ಹೇಳಲು ಬಯಸುತ್ತೇನೆ ಎಂದು ಅವರು ತಿಳಿಸಿದ್ದಾರೆ.

ಆಯೋಗ ಶಿಫಾರಸ್ಸು ಮಾಡಿರುವ ಕೆಲ ಅಂಶಗಳನ್ನು ನಾನು ಗಮನಿಸಿದ್ದೇನೆ. ಈ ಅಂಶಗಳಿಂದ ಯಾವುದೇ ಸಮುದಾಯ ಅಸಮಾಧಾನಗೊಳ್ಳುವ ಅಗತ್ಯವಿಲ್ಲ. ಈ ಅಂಶಗಳು ಯಾವುದೇ ಸಮುದಾಯವನ್ನು ಕಡೆಗಣಿಸಿಲ್ಲ ಎಂಬುದು ನನ್ನ ಭಾವನೆ.

ಕೆಲವರು ವರದಿಯನ್ನು ಓದದೆ ಜನರನ್ನು ತಪ್ಪುದಾರಿಗೆ ಎಳೆಯುವ ಯತ್ನ ಮಾಡುತ್ತಿದ್ದಾರೆ. ಹಾಗಾಗಿ ನಾನು ಜನರಲ್ಲಿ ಮನವಿ ಮಾಡಿಕೊಳ್ಳುವುದೇನೆಂದರೆ, ವರದಿಯ ಕುರಿತು ಈಗಲೇ ಅಂತಿಮ ತೀರ್ಮಾನಕ್ಕೆ ಬರುವುದು ಬೇಡ. ಅನಗತ್ಯ ಗೊಂದಲಗಳಿಗೆ ಆಸ್ಪದ ಕೊಡುವುದು ಬೇಡ. ಮೊದಲು ವರದಿಯನ್ನು ಓದೋಣ. ನಂತರ ಚರ್ಚೆಗೆ ನಮ್ಮ ಮನಸ್ಸನ್ನು ಮುಕ್ತವಾಗಿರಿಸಿಕೊಳ್ಳೋಣ. ವರದಿಯನ್ನು ಸಂಪೂರ್ಣವಾಗಿ ಓದದೆ ಅವೈಜ್ಞಾನಿಕ ಎನ್ನುವುದು ಆತುರದ ನಿರ್ಧಾರವಾಗುತ್ತದೆ ಎಂದು ಅವರು ಹೇಳಿದ್ದಾರೆ.

# ಮಹಿಳೆಯರ ಅಕೌಂಟ್ ಗೆ ಗೃಹಲಕ್ಷ್ಮೀ ಎರಡು ತಿಂಗಳ ಹಣ ಜಮಾ ಮಹತ್ವದ ಮಾಹಿತಿ ಕೊಟ್ಟ ಲಕ್ಷ್ಮಿ ಹೆಬ್ಬಾಳ್ಕರ್

ಬೆಂಗಳೂರು : ಕರ್ನಾಟಕ ಸರ್ಕಾರ ಮಹಿಳೆಯರನ್ನು ಬೆಂಬಲಿಸಲು ಮತ್ತು ಅವರ ಜೀವನೋಪಾಯವನ್ನು ಸುಧಾರಿಸುವ ಉದ್ದೇಶದಿಂದ ಗೃಹಲಕ್ಷ್ಮಿ ಯೋಜನೆಯನ್ನು ಆರಂಭಿಸಿದೆ. 2023ರ ವಿಧಾನಸಭಾ ಚುನಾವಣೆಯಲ್ಲಿ ಭರ್ಜರು ಬಹುಮತದೊಂದಿಗೆ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಗೃಹಲಕ್ಷ್ಮಿ ಯೋಜನೆ ಒಂದಾಗಿದೆ.

ರಾಜ್ಯದ ಮಹಿಳಾ ಮಣಿಯರ ಖಾತೆಗೆ ಸರ್ಕಾರ ಪ್ರತಿ ತಿಂಗಳು ಬಂದ 2000 ರೂ. ಹಣವನ್ನು ಜಮಾ ಮಾಡುತ್ತಿದೆ. ಈ ಗೃಹ ಲಕ್ಷ್ಮಿ ಹಣವನ್ನ ಕೂಡಿಟ್ಟು ಮಕ್ಕಳ ಶಿಕ್ಷಣಕ್ಕೆ, ಗೃಹ ಬಳಕೆಯ ಉಪಕರಣಗಳ ಖರೀದಿಗೆ ಬಳಕೆ ಮಾಡಿದ ಹಲವಾರು ನಿದರ್ಶನಗಳನ್ನು ನಾವು ನೋಡಿದ್ದೇವೆ. ಮಹಿಳೆಯರಲ್ಲಿ ಸ್ವಾಭಿಮಾನವನ್ನು, ಆರ್ಥಿಕ ಸ್ವಾವಲಂಬನೆಯನ್ನು ಮೂಡಿಸುವಲ್ಲಿಯೂ ಗೃಹಲಕ್ಷ್ಮಿ ಯೋಜನೆ ಯಶಸ್ವಿಯಾಗಿದೆ. ಸದ್ಯ ಗೃಹ ಲಕ್ಷ್ಮಿ ಹಣವನ್ನ ಸರ್ಕಾರ ಜಮಾ ಮಾಡುತ್ತಿದ್ದು, ಫೆಬ್ರವರಿ ಹಾಗೂ ಮಾರ್ಚ್ ತಿಂಗಳ ಗೃಹ ಲಕ್ಷ್ಮಿ ಹಣವನ್ನ ಜಮಾ ಮಾಡಬೇಕಿದೆ.

ಯುಗಾದಿ ಹಬ್ಬದ ಸಂದರ್ಭದಲ್ಲಿ ಜನವರಿ ತಿಂಗಳ ಹಣವನ್ನ ಮಹಿಳೆಯವರ ಖಾತೆಗೆ ಜಮಾ ಮಾಡಿದ್ದು, ಇದೀಗ ಫೆಬ್ರವರಿ ಹಾಗೂ ಮಾರ್ಚ್ ತಿಂಗಳ ಹಣ ಯಾವಾಗ ಜಮಾ ಆಗಲಿದೆ ಎಂದು



ಮಹಿಳೆಯರು ಸರ್ಕಾರವನ್ನ ಪ್ರಶ್ನಿಸುತ್ತಿದ್ದಾರೆ. ಕೆಲ ದಿನಗಳ ಹಿಂದೆಯಷ್ಟೇ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು, ಫೆಬ್ರವರಿ ತಿಂಗಳ ಬಳ ಏಪ್ರಿಲ್ ಎರಡನೇ ವಾರದಂದು ಮಹಿಳೆಯರ ಖಾತೆಗೆ ಜಮಾ ಆಗಲಿದೆ ಎಂದು ಹೇಳಿದ್ರು. ಇದೀಗ ಫೆಬ್ರವರಿ ಹಾಗೂ ಮಾರ್ಚ್ ತಿಂಗಳ ಹಣ ಆದಷ್ಟು ಶೀಘ್ರದಲ್ಲಿ ಮಹಿಳೆಯವರ ಖಾತೆಗೆ ಜಮಾ ಆಗಲಿದೆ ಎಂದು ತಿಳಿದು ಬಂದಿದೆ.

ರಾಜ್ಯದಲ್ಲಿ ಜಾತಿಗಣತಿ ವರದಿ ಕುರಿತು ಈಗಲೇ ಚರ್ಚೆ ಸಾಧುವಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ. ಏಪ್ರಿಲ್ 17 ರಂದು ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ವರದಿ ಮಂಡನೆಯಾಗಲಿದೆ. ತದನಂತರವಷ್ಟೇ ಅದರ ಸಾಧಕ ಬಾಧಕದ ಬಗ್ಗೆ ಚರ್ಚೆ ಮಾಡಿದರೆ ಸೂಕ್ತ. ವೀರಶೈವ ಲಿಂಗಾಯತರಲ್ಲಿ 103 ಉಪ ಪಂಗಡಗಳಿವೆ. ಅದರಲ್ಲಿ ಯಾವುದೇ ಪಂಗಡಗಳಿಗೂ ಅನ್ಯಾಯವಾಗದಂತೆ ಕ್ರಮವಹಿಸಲಾಗುವುದು. ಅನ್ಯ ಸಮುದಾಯಗಳ ಹೇಳಿಕೆಗಳಿಗೆ ಪ್ರತಿಕ್ರಿಯಿಸುವುದಿಲ್ಲ ಎಂದು ಹೇಳಿದರು.

ಧರ್ಮಾದಾರಿತ ರಾಜಕಾರಣದಲ್ಲಿ ಬೆಳೆದು ಬಂದಿದ್ದು, ನಾಡಿನ ಮಠಾಧೀಶರ ಚಿಂತನೆಗಳನ್ನು, ಬದುಕಿನಲ್ಲಿ ಅಳವಡಿಸಿಕೊಂಡು ಮುನ್ನಡೆಯುತ್ತಿದ್ದೇನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು. ಸರ್ಕಾರಕ್ಕೆ ದಿಕ್ಸೂಚಿ ಕೊಟ್ಟಿದ್ದು ನಾಡಿನ ಮಠ ಮಾನ್ಯಗಳು, ಸರ್ಕಾರಕ್ಕೆ ಅಕ್ಷರ ದಾಸೋಹ, ಅನ್ನದಾಸೋಹ ಪರಿಕಲ್ಪನೆ ನೀಡಿದ್ದು ನಾಡಿನ ಮಠಗಳು. ಈ ಕಾರ್ಯಗಳಿಂದ ಸರ್ಕಾರ ಪ್ರೇರಣೆಗೊಂಡು ತ್ರಿವಿಧ ದಾಸೋಹವನ್ನು ನಡೆಸಿಕೊಂಡು ಬರುತ್ತಿದೆ ಎಂದು ಸಚಿವರು ಹೇಳಿದರು. ನಮಗೆ ಜಾತಿ ಧರ್ಮ ಗೊತ್ತಿಲ್ಲ. ನಮಗೆ ಗೊತ್ತಿರುವುದು ಎರಡೇ ಜಾತಿ, ಒಂದು ಹೆಣ್ಣು ಮತ್ತೊಂದು ಗಂಡು ಜಾತಿ. 12ನೇ ಶತಮಾನದಲ್ಲೆ ಬಸವಣ್ಣನವರು ಮಹಿಳಾ ಸ್ವಾತಂತ್ರ್ಯದ ಬಗ್ಗೆ ಪ್ರತಿಪಾದಿಸಿದ್ದರು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ನಾನು ಅಪಘಾತಕ್ಕೀಡಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ನಾಡಿನ ಮೂಲೆ ಮೂಲೆಗಳಿಂದ ಮಠಾಧೀಶರು ಆಸ್ಪತ್ರೆಗೆ ಬಂದು ಆಶೀರ್ವದಿಸಿದರು. ಇದನ್ನು ನಾನೆಂದು ಮರೆಯುವುದಿಲ್ಲ. ನಾನೇನು ಅಂಥಹ ಸಾಧನೆ ಮಾಡಿದವಳಲ್ಲ, ಸಂಘರ್ಷದ ಹಾದಿಯಲ್ಲಿ ಬೆಳೆದು ಬಂದವಳು ನಾನು, ನನಗೆ ಮಠಾಧೀಶರು ನೀಡಿದ ಆತ್ಮ ಸ್ಥೈರ್ಯ ಮರೆಯುವಂತಿಲ್ಲ ಎಂದು ಸಚಿವರು ಸ್ಮರಿಸಿದರು. 7 ಕೋಟಿ ಜನಸಂಖ್ಯೆಯ ಕರ್ನಾಟಕದ ಸರ್ಕಾರದಲ್ಲಿ ಏಕೈಕ ಮಹಿಳಾ ಸಚಿವೆಯಾಗಿರುವೆ. 35 ಲಕ್ಷ ಮಕ್ಕಳು, ರಾಜ್ಯದ ಜನಸಂಖ್ಯೆಯ ಅರ್ಧದಷ್ಟು ಮಹಿಳೆಯರು, ವಿಕಲ ಚೇತನರು, ಹಿರಿಯ ನಾಗರಿಕರು ನನ್ನ ಇಲಾಖೆ ವ್ಯಾಪ್ತಿಯಲ್ಲಿದ್ದಾರೆ. ಅವರ ಮೊಗದಲ್ಲಿ ನಗು ತರುವ ನಿಟ್ಟಿನಲ್ಲಿ ಕೆಲಸ ಮಾಡಿಕೊಂಡು ಬರುತ್ತಿದ್ದೇನೆ. ಅದರಲ್ಲೂ 1.23 ಕೋಟಿ ಮಹಿಳೆಯರಿಗೆ ಗೃಹ ಲಕ್ಷ್ಮಿ ಯೋಜನೆಯನ್ನು ಸಮರ್ಕವಾಗಿ ತಲುಪಿಸಲಾಗುತ್ತಿದೆ ಎಂದರು.

# ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ಖಂಡಿಸಿ ಇಂದಿನಿಂದ ಬಿಜೆಪಿ ಜನಾಕ್ರೋಶ ಯಾತ್ರೆ

**ಬೆಂಗಳೂರು:** ಬೆಲೆ ಏರಿಕೆ, ಮುಸ್ಲಿಂ ಓಲೈಕೆ ಹಾಗೂ ದಲಿತರ ಹಣ ಲೂಟಿ ಖಂಡಿಸಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಇಂದಿನಿಂದ ಜನಾಕ್ರೋಶ ಯಾತ್ರೆ ಕೈಗೊಂಡಿದೆ. ಇಂದು ಮಧ್ಯಾಹ್ನ 3:15ಕ್ಕೆ ಮೈಸೂರಿನ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ನಂತರ ಬಿಜೆಪಿ ಮುಖಂಡರು ಯಾತ್ರೆ ಆರಂಭಿಸಿದರು. ಮೈಸೂರಿನ ಲಷ್ಕರ್ ಮೊಹಲ್ಲಾದ ಅಂಚೆ ಕಚೇರಿ ಬಳಿಯಿಂದ ಯಾತ್ರೆ ಆರಂಭಗೊಂಡಿದ್ದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಯಾತ್ರೆಗೆ ಚಾಲನೆ ನೀಡಿದರು. ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಮಾಜಿ ಸಿಎಂಗಳಾದ ಡಿ.ವಿ ಸದಾನಂದ ಗೌಡ, ವಿಪಕ್ಷ ನಾಯಕ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಿಟಿ ರವಿ ಸೇರಿದಂತೆ ಬಿಜೆಪಿ ಶಾಸಕರು ಕಾರ್ಯಕರ್ತರು ಯಾತ್ರೆಯಲ್ಲಿ ಭಾಗಿಯಾಗಿದ್ದಾರೆ. ಇನ್ನು ಬಿಜೆಪಿಯ ಜನಾಕ್ರೋಶ ಯಾತ್ರೆಗೆ ಸಿಎಂ ಸಿದ್ದರಾಮಯ್ಯ ಶುಭ ಕೋರಿದ್ದಾರೆ. ಅಲ್ಲದೆ ರಾಜ್ಯಾಧ್ಯಕ್ಷ ಸ್ಥಾನ ಉಳಿಸಿಕೊಳ್ಳಲು ವಿಜಯೇಂದ್ರ ಈ ಯಾತ್ರೆ ನಡೆಸುತ್ತಿದ್ದಾರೆ ಎಂದು ಟೀಕಿಸಿದರು.

# ಬೀದಿ ಬದಿ ವ್ಯಾಪಾರಿಗಳ ಕುರಿತು ರಾಹುಲ್ ಗಾಂಧಿ ಕಳವಳ

**ಬೆಂಗಳೂರು:** ಬೀದಿ ಬದಿ ವ್ಯಾಪಾರಿಗಳಿಗೆ ಉತ್ತಮ ವ್ಯಾಪಾರ ಅವಕಾಶಗಳನ್ನು ಕಲ್ಪಿಸಲು ರಾಜ್ಯ ಸರ್ಕಾರವು ವಿದ್ಯುತ್ ಚಾಲಿತ ವಾಹನಗಳನ್ನು ಒದಗಿಸುವ ಪ್ರಕ್ರಿಯೆಯಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕರ್ನಾಟಕದಲ್ಲಿ ಬೀದಿ ವ್ಯಾಪಾರಿಗಳ ಸ್ಥಿತಿಯ ಬಗ್ಗೆ ರಾಹುಲ್ ಗಾಂಧಿ ಮುಖ್ಯಮಂತ್ರಿಗೆ ಬರೆದ ಪತ್ರದ ಮೂಲಕ ಕಳವಳ ವ್ಯಕ್ತಪಡಿಸಿದ್ದರು. ಇದಕ್ಕೆ ಪ್ರತಿಯಾಗಿ ರಾಹುಲ್ ಗಾಂಧಿಗೆ ಬರೆದ ಪತ್ರದಲ್ಲಿ, ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಬೆಂಗಳೂರಿನಲ್ಲಿ 27,655 ಮಾರಾಟಗಾರರನ್ನು ನೋಂದಾಯಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ರಾಜ್ಯ ಸರ್ಕಾರ ಬೀದಿ ವ್ಯಾಪಾರಿಗಳ ಒಟ್ಟಾರೆ ಯೋಗಕ್ಷೇಮಕ್ಕೆ ಬದ್ಧವಾಗಿದೆ ಮತ್ತು ಅವರ ಸಮಗ್ರ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ ಎಂದು ಭರವಸೆ ನೀಡಿದ್ದಾರೆ.


# ನಟಿ ಸಂಜನಾಗೆ ವಂಚನೆ: ರಾಹುಲ್ ಗೆ 6 ತಿಂಗಳ ಜೈಲು ಶಿಕ್ಷೆ

**ಬೆಂಗಳೂರು:** ಕನ್ನಡದ ನಟಿ ಸಂಜನಾ ಗಲ್ರಾನಿಗೆ ಹಣ ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪರಾಧಿ ರಾಹುಲ್ ತೋನ್ಸೆಗೆ 61.50 ಲಕ್ಷ ರೂ. ದಂಡ ಮತ್ತು 6 ತಿಂಗಳು ಜೈಲು ಶಿಕ್ಷೆ ವಿಧಿಸಿ 33ನೇ ಎಸಿಎಂಎಂ ಕೋರ್ಟ್ ಆದೇಶಿಸಿದೆ. ಸಂಜನಾ ಗಲ್ರಾನಿ ಅವರ ಸ್ನೇಹಿತ ರಾಹುಲ್ ತೋನ್ಸೆ ವಿರುದ್ಧ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಯಾಧೀಶ ಪಿಎಸ್ ಸಂತೋಷ್ ಕುಮಾರ್ ದಂಡ ಮತ್ತು ಶಿಕ್ಷೆ ವಿಧಿಸಿ ಆದೇಶ ಪ್ರಕಟಿಸಿದ್ದಾರೆ. ನಿಗದಿತ ಸಮಯದಲ್ಲಿ ದಂಡ ಪಾವತಿಸಿದರೆ ಆರು ತಿಂಗಳ ಜೈಲು ಶಿಕ್ಷೆಯನ್ನು ರದ್ದು ಮಾಡುವುದಾಗಿ ನ್ಯಾಯಧೀಶರು ತಿಳಿಸಿದ್ದಾರೆ. ಇದೇ ಅಲ್ಲದೆ ಉದ್ಯಮಿಯೊಬ್ಬರಿಗೆ 25 ಕೋಟಿ ರೂಪಾಯಿ ವಂಚನೆ ಮಾಡಿದ ಆರೋಪವೂ ರಾಹುಲ್ ತೋನ್ಸೆ ಮೇಲಿದೆ.

# ಕೋರ್ಟ್ ಆವರಣದೊಳಗೆ ಪ್ರವೀಣ್ ನೆಟ್ಟಾರು ಕೊಲೆ ಆರೋಪಿ ಹಣೆಗೆ ಮುತ್ತಿಟ್ಟ ಯುವಕ!

**ಮಂಗಳೂರು:** 2022ರಲ್ಲಿ ನಡೆದಿದ್ದ ಬಿಜೆಪಿ ಯುವ ಮುಖಂಡ ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣದ ಪ್ರಮುಖ ಆರೋಪಿ ಶಾಫಿ ಬೆಳ್ಳಾರೆ ಹಣೆಗೆ ಅಪರಿಚಿತ ಯುವಕನೋರ್ವ ಮುತ್ತಿಟ್ಟಿರುವ ಘಟನೆ ಸೋಮವಾರ ನಡೆದಿದೆ.ಶಾಫಿ ಬೆಳ್ಳಾರೆಯನ್ನು ಇಲ್ಲಿನ ನ್ಯಾಯಾಲಯಕ್ಕೆ ಹಾಜರುಪಡಿಸುವ ವೇಳೆ ಈ ಘಟನೆ ನಡೆದಿದೆ. ಇಬ್ಬರು ಪೊಲೀಸರು ಬೆಂಗಾವಲಾಗಿ ನಿಂತಿದ್ದರೂ ಯುವಕ ಬೆಳ್ಳಾರೆಯ ತಲೆಯನ್ನು ಎರಡೂ ಕೈಗಳಿಂದ ಹಿಡಿದು ಹಣೆಗೆ ಮುತ್ತಿಡುವಲ್ಲಿ ಯಶಸ್ವಿಯಾಗಿದ್ದಾನೆ.ನ್ಯಾಯಾಲಯದ ಆವರಣದಲ್ಲಿ ಪೊಲೀಸರ ಸಮ್ಮುಖದಲ್ಲಿಯೇ ಬಹಿರಂಗವಾಗಿಯೇ ಈ ಘಟನೆ ನಡೆದಿದೆ.ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿರುವ ಬೆಳ್ಳಾರೆಯನ್ನು 2017 ರಲ್ಲಿ ಆರ್‌ಎಸ್‌ಎಸ್ ಮತ್ತು ಕಲ್ಲಡ್ಕ ಭಟ್ ವಿರುದ್ಧ ಮಾಡಿದ್ದ ಅವಹೇಳನಾಕಾರಿ ಭಾಷಣ ಸಂಬಂಧದ ಪ್ರತ್ಯೇಕ ಕೇಸ್ ಗಳಲ್ಲಿ ಆತನನ್ನು ಬೆಳ್ತಂಗಡಿ ನ್ಯಾಯಾಲಯಕ್ಕೆ ಕರೆತರಲಾಗಿತ್ತು.ಬೆಳ್ಳಾರೆಗೆ ಕಿಸ್ ಮಾಡಿದ ತಕ್ಷಣ ಯುವಕ ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಆತನನ್ನು ಗುರುತಿಸಿ ಬಂಧಿಸಲು ಶೋಧ ಕಾರ್ಯ ನಡೆಯುತ್ತಿದೆ.

# ಬಯಲುಸೀಮೆ ಕಲ್ಪವೃಕ್ಷ ಕೃಷಿಕನ ರಕ್ಷಕ



**ಚಳ್ಳಕೆರೆ:** ಬಯಲುಸೀಮೆಯ ಕಲ್ಪವೃಕ್ಷ ಎಂದೇ ಕರೆಸಿಕೊಳ್ಳುವ ಹುಣಸೆ ಮರಗಳು ಮೈ ತುಂಬ ಹಣ್ಣು ಹೊದ್ದು ನಿಂತು ನಾಲಿಗೆಯಲ್ಲಿ ನಿರೂರಿಸುತ್ತಿವೆ.
ನಾಲ್ಕೈದು ವರ್ಷ ನೀರುಣಿಸಿ ಬೆಳೆಸಿದ ಮರಗಳು ಎರಡು ತಲೆಮಾರುಗಳಿಗೆ ಆಗುವಷ್ಟು ಫಲ ನೀಡುತ್ತವೆ. ಕಡಿಮೆ ಮಳೆಯಾಶ್ರಿತ ಪ್ರದೇಶದಲ್ಲಿ ಕೃಷಿ ನಂಬಿಕೊಂಡು ಜೀವನ ಸಾಗಿಸುವ ಮಂದಿಗೆ ಇದು ಭರವಸೆಯ ಬೆಳೆ.
ಕಣ, ಜಮೀನಿನ ಬದು ಹೀಗೆ ಅಲ್ಲಲ್ಲಿ ಹಾಕಿದ್ದ ಮರಗಳು ಕಷ್ಟಕಾಲದಲ್ಲಿ ಕೃಷಿಕನ ಕೈ ಹಿಡಿಯುತ್ತಿವೆ. ಇನ್ನು ರಸ್ತೆ ಇಕ್ಕೆಲಗಳಲ್ಲೂ ಹುಣಸೆ ಹುಲುಸಾಗಿ ಬೆಳೆದಿದ್ದು, ಗುತ್ತಿಗೆದಾರರ ಜೇಬು ತುಂಬಿಸುತ್ತಿವೆ.
ಬಯಲುಸೀಮೆ ಮಟ್ಟಿಗೆ ಹುಣಸೆ ಪ್ರಮುಖ ಬೆಳೆಯಲ್ಲದಿದ್ದರೂ ಕೆಲ ಗ್ರಾಮಗಳಲ್ಲಿ ರೈತರು ನೂರಾರು ಮರಗಳನ್ನು ಸಲಹುತ್ತಿದ್ದಾರೆ. ಉತ್ತಮ ಫಸಲು ಇದೆ. ಬಯಲುಸೀಮೆ ಪ್ರದೇಶದ ಕೆಲವೆಡೆ ಮಳೆ ಕೊರತೆ, ವಿವಿಧ ಕಾರಣಗಳಿಂದ ಹುಣಸೆ ಇಳುವರಿ ಕುಸಿದಿದೆ.
ಬೆಲೆ ವಿಚಾರದಲ್ಲೇನೂ ರಾಜಿ ಇಲ್ಲ. ಬೆಳೆಗಾರನ ನಿರೀಕ್ಷೆಗೆ ತಕ್ಕ ಬೆಲೆ ಸಿಗುತ್ತಿದೆ. ಈ ಬಾರಿ ದುಪ್ಪಟ್ಟು ಹೆಚ್ಚಾಗಿದೆ. ರಾಜ್ಯದ ಪ್ರಮುಖ ಎಪಿಎಂಸಿ ಮಾರುಕಟ್ಟೆಗಳಲ್ಲಿ ಪ್ರಸ್ತುತ ಕ್ವಿಂಟಾಲ್‌ಗೆ 10 ಸಾವಿರದ ವರೆಗೆ ಧಾರಣೆ ಸಿಗುತ್ತಿದೆ.
ಜಿಲ್ಲೆಯಲ್ಲಿ ಬೆಳೆಗಾರರಿಗೆ ಕೊರತೆ ಇಲ್ಲ. 25 ರಿಂದ 30 ಸಾವಿರ ಜನ ಇದನ್ನು ಉಪ ಬೆಳೆಯಾಗಿಸಿಕೊಂಡಿದ್ದಾರೆ. ಬೆಳೆಗಾರರ ನಿರಾಸಕ್ತಿಯೋ, ಮಾಹಿತಿ ಕೊರತೆಯೋ ಗೊತ್ತಿಲ್ಲ. ಜಿಲ್ಲೆಯಲ್ಲಿ ಬೆಳೆದ ಹುಣಸೆ ಹಣ್ಣಿನ ಲಾಭ ನೆರೆ ಪಾವಗಡ ಹಾಗೂ ತುಮಕೂರು ಜಿಲ್ಲೆಯ ವ್ಯಾಪಾರಿಗಳ ಕೈಸೇರುವ ಪದ್ಧತಿ ಮುಂದುವರಿದಿದೆ.
ಮೊಳಕಾಲ್ಮೂರು, ಚಳ್ಳಕೆರೆ, ಹಿರಿಯೂರು, ಹೊಸದುರ್ಗ ತಾಲೂಕಿಗೆ ದೂರದ ಪಾವಗಡದ ವರ್ತಕರು ಬಂದು ಖರೀದಿಸುತ್ತಾರೆ. ಸಮೀಪದ ಹಿಂದೂಪುರದಲ್ಲಿ ಹೆಚ್ಚು ಹುಣಸೆ ಹಣ್ಣು ವಹಿವಾಟು ಜೋರಿದ್ದು, ಇಲ್ಲಿಂದ ವಿದೇಶಗಳಿಗೂ ರಫ್ತಾಗುತ್ತದೆ.
ತುಮಕೂರು ರಾಜಧಾನಿ: ಹುಣಸೆ ಮಾರುಕಟ್ಟೆಗೆ ತುಮಕೂರು ಪ್ರದೇಶವನ್ನು ರಾಜಧಾನಿ ಎನ್ನಬಹುದು. ಅಷ್ಟರ ಮಟ್ಟಿಗೆ ಇಲ್ಲಿ ವಹಿವಾಟು ಹೆಚ್ಚು ಇದೆ. ಕೃಷಿಕರು ಇದನ್ನೇ ಪ್ರಮುಖ ಬೆಳೆ ಮಾಡಿಕೊಂಡಿದ್ದಾರೆ. ಈಗಾಗಲೇ ಹಣ್ಣು ಕೀಳುವ ಪ್ರಕ್ರಿಯೆ ಆರಂಭವಾಗಿದ್ದು, ಎಪಿಎಂಸಿಗೆ ಹುಣಸೆ ಹಣ್ಣು ಲಗ್ಗೆ ಇಟ್ಟಿದ್ದು, ಇನ್ನೂ ಕೆಲ ದಿನಗಳ ಕಾಲ ಇನ್ನಷ್ಟು ಗರಿಗೆದರಲಿದೆ. ಹಿಂದಿನ ವರ್ಷ ನೂರಾರು ಕ್ವಿಂಟಾಲ್ ವಹಿವಾಟು ನಡೆದಿದೆ.
ಆರೋಗ್ಯ ದೃಷ್ಟಿಯಿಂದ ಹುಣಸೆ ಉತ್ತಮ ಆಹಾರ. ಇದಕ್ಕೆ ಹಲವು ರೋಗ ದೂರವಿಡುವ ಶಕ್ತಿ ಇದೆ. ಜತೆಗೆ ಅದರ ಸಿಪ್ಪೆ, ನಾರು ಕೂಡ ಉಪಯುಕ್ತ. ಹುಣಸೆ ಹಣ್ಣಿನಂತೆ ಅದರ ಬೀಜಗಳಿಗೂ ಬೇಡಿಕೆ ಇದೆ. ಶಿವಮೊಗ್ಗ, ಹಾಸನ, ಮೈಸೂರು ಎಪಿಎಂಸಿಗಳಲ್ಲಿ ವಹಿವಾಟು ನಡೆಯುತ್ತದೆ.

# ಕ್ರೀಡೆ ಆರೋಗ್ಯ ಕಾಪಾಡಿಕೊಳ್ಳಲು ಅತ್ಯುತ್ತಮ ಮಾರ್ಗ




ಚಿಕ್ಕಮಗಳೂರು: ಕ್ರೀಡೆ ಆರೋಗ್ಯದ ಒಂದು ಭಾಗವಾಗಿದ್ದು, ನಮ್ಮ ಆರೋಗ್ಯ ಕಾಪಾಡಿಕೊಳ್ಳಲು ಇದು ಅತ್ಯುತ್ತಮ ಮಾರ್ಗ ಎಂದು ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಹೇಳಿದರು.
ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಸಂಯುಕ್ತ ಆಶ್ರಯದಲ್ಲಿ ಸೋಮವಾರ ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.
ರಾಜ್ಯ ಸರ್ಕಾರವು ಸರ್ಕಾರಿ ನೌಕರರ ಹಿತಾಸಕ್ತಿ ಕಾಪಾಡಲು ಅನೇಕ ಉಪಯುಕ್ತ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ನೌಕರರು ಕೆಲಸದ ಒತ್ತಡದಲ್ಲಿ ತಮ್ಮ ಕೌಟುಂಬಿಕ ಜೀವನ, ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡಬಾರದು. ಪ್ರತಿದಿನ ವ್ಯಾಯಾಮ, ನಡಿಗೆ, ಯೋಗ ಮಾಡಿ, ಫಿಟ್‌ನೆಸ್ ಕಾಯ್ದುಕೊಳ್ಳಬೇಕು ಎಂದು ತಿಳಿಸಿದರು.
ಪ್ರತಿಯೊಬ್ಬರೂ ದೈಹಿಕ ಮತ್ತು ಮಾನಸಿಕ ಸದೃಢತೆಗೆ ಆರೋಗ್ಯ ಮುಖ್ಯವಾಗಿದೆ. ಉತ್ತಮವಾದ ಓದು, ವ್ಯಾಯಾಮಗಳು ಮನಸ್ಸಿಗೆ ಉಲ್ಲಾಸ, ವಿಶ್ರಾಂತಿ ನೀಡುತ್ತವೆ. ಖುಷಿಯಿಂದ ಕೆಲಸ ಮಾಡಲು ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮಗಳ ಅಗತ್ಯವಿದೆ ಎಂದು ಹೇಳಿದರು.ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ಅವರು ಮಾತನಾಡಿ, ಎಲ್ಲಾ ಇಲಾಖೆಯ ನೌಕರರನ್ನು ಒಟ್ಟುಗೂಡಿಸಿದ್ದು, ಈ ಕಾರ್ಯಕ್ರಮ ಸಮಾನತೆಯಿಂದ ಮೂಡಿಬಂದಿದೆ. ನಿರಂತರ ಯೋಗ, ವ್ಯಾಯಾಮ, ಕ್ರೀಡಾ ಚಟುವಟಿಕೆಗಳು ನಮ್ಮ ಮಾನಸಿಕ ಮತ್ತು ದೈಹಿಕ ಆರೋಗ್ಯದ ಸುಸ್ಥಿತಿ ಕಾಪಾಡಲು ಸಹಾಯ ಮಾಡುತ್ತವೆ. ಪ್ರತಿ ದಿನ ಯೋಗ, ವಾಕಿಂಗ್ ಮಾಡಬೇಕು ಎಂದು ಅವರು ಹೇಳಿದರು.
ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್ ಅವರು ಮಾತನಾಡಿ, ಕ್ರೀಡೆಯಲ್ಲಿ ಸೋಲು ಗೆಲುವು ಎಂಬುದು ಇಲ್ಲ. ಗೆಲುವು ಸಿಗುತ್ತದೆ ಅಥವಾ ಆ ಕ್ರೀಡೆಯಿಂದ ಹೊಸದನ್ನು ಕಲಿಯುತ್ತೇವೆ. ಆದ್ದರಿಂದ ಗೆಲುವು ಅಥವಾ ಕಲಿಕೆ ಮಾತ್ರ ಕ್ರೀಡೆಯಿಂದ ಸಿಗುತ್ತದೆ. ಕ್ರೀಡೆಗಳು ಪರಸ್ಪರ ವೈಯಕ್ತಿಕ ಸಂಬಂಧ, ಸೌಹಾರ್ದತೆ, ಸಹೋದರತ್ವ ಗಟ್ಟಿಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು.
ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶಿವಾನಂದ ಸ್ವಾಮಿ ಮಾತನಾಡಿ, ಕ್ರೀಡೆ ನಮ್ಮನ್ನು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢರನ್ನಾಗಿ ಮಾಡುತ್ತದೆ. ಆರೋಗ್ಯವಂತ ಜೀವನಕ್ಕೆ ಕ್ರೀಡೆ ಬಹುಮುಖ್ಯ. ಪ್ರಾಚೀನ ಕಾಲದಿಂದಲೂ ಕ್ರೀಡೆಗೆ ಮಹತ್ವವಾದ ಸ್ಥಾನವನ್ನು ನೀಡಲಾಗಿದೆ. ರಾಮಾಯಣ, ಮಹಾಭಾರತದ ಕಾಲದಲ್ಲಿ ರಾಜರು ಕ್ರೀಡಾಕೂಟಗಳನ್ನು ಏರ್ಪಡಿಸುತ್ತಿದ್ದರು. ಕುಸ್ತಿ, ಬಿಲ್ಲುಗಾರಿಕೆ ಮುಂತಾದವನ್ನು ಕಾಣಬಹುದಾಗಿದೆ ಎಂದರು.
ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ದೇವೇಂದ್ರ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು.
ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕಿ ಡಾ.ಹೆಚ್.ಪಿ. ಮಂಜುಳಾ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಕಾರ್ಯಾಧ್ಯಕ್ಷ ಬಿ.ಎನ್.ಸುಂದ್ರೇಶ್, ಕಾರ್ಯದರ್ಶಿ ಟಿ. ಪದ್ಮರಾಜ್, ಗೌರವಾಧ್ಯಕ್ಷ ಸಿ.ಎನ್.ಮಂಜುನಾಥ್, ಕೊಪ್ಪ ತಾಲ್ಲೂಕು ಅಧ್ಯಕ್ಷ ರಾಘವೇಂದ್ರ, ವಿವಿಧ ತಾಲ್ಲೂಕು ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ನೌಕರರು ಉಪಸ್ಥಿತರಿದ್ದರು.

# ರಾಜ್ಯದ ಬೀದಿ ವ್ಯಾಪಾರಿಗಳ ಕುರಿತು ಸಿಎಂ ಸಿದ್ದರಾಮಯ್ಯಗೆ ಪತ್ರದ ಮೂಲಕ ರಾಹುಲ್ ಗಾಂಧಿ ಕಳವಳ!

**ಬೆಂಗಳೂರು:** ಬೀದಿ ಬದಿ ವ್ಯಾಪಾರಿಗಳಿಗೆ ಉತ್ತಮ ವ್ಯಾಪಾರ ಅವಕಾಶಗಳನ್ನು ಕಲ್ಪಿಸಲು ರಾಜ್ಯ ಸರ್ಕಾರವು ವಿದ್ಯುತ್ ಚಾಲಿತ ವಾಹನಗಳನ್ನು ಒದಗಿಸುವ ಪ್ರಕ್ರಿಯೆಯಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕರ್ನಾಟಕದಲ್ಲಿ ಬೀದಿ ವ್ಯಾಪಾರಿಗಳ ಸ್ಥಿತಿಯ ಬಗ್ಗೆ ರಾಹುಲ್ ಗಾಂಧಿ ಮುಖ್ಯಮಂತ್ರಿಗೆ ಬರೆದ ಪತ್ರದ ಮೂಲಕ ಕಳವಳ ವ್ಯಕ್ತಪಡಿಸಿದ್ದರು. ಇದಕ್ಕೆ ಪ್ರತಿಯಾಗಿ ರಾಹುಲ್ ಗಾಂಧಿಗೆ ಬರೆದ ಪತ್ರದಲ್ಲಿ, ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಬೆಂಗಳೂರಿನಲ್ಲಿ 27,655 ಮಾರಾಟಗಾರರನ್ನು ನೋಂದಾಯಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ರಾಜ್ಯ ಸರ್ಕಾರ ಬೀದಿ ವ್ಯಾಪಾರಿಗಳ ಒಟ್ಟಾರೆ ಯೋಗಕ್ಷೇಮಕ್ಕೆ ಬದ್ಧವಾಗಿದೆ ಮತ್ತು ಅವರ ಸಮಗ್ರ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ ಎಂದು ಸಿಎಂ ಭರವಸೆ ನೀಡಿದ್ದಾರೆ. 2013 ಮತ್ತು 2018ರ ನಡುವೆ ತಾವು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಬೀದಿ ವ್ಯಾಪಾರಿಗಳ ಪರವಾಗಿ ನಿಯಮಗಳನ್ನು ರೂಪಿಸಿದ ರಾಜ್ಯಗಳಲ್ಲಿ ಕರ್ನಾಟಕವೂ ಒಂದು ಎಂದು ಸಿದ್ದರಾಮಯ್ಯ ರಾಹುಲ್ ಗಾಂಧಿಗೆ ತಿಳಿಸಿದರು. ಕರ್ನಾಟಕದ ಹಿಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕ್ರಮವಾಗಿ 2017 ಮತ್ತು 2019ರಲ್ಲಿ ಬೀದಿ ವ್ಯಾಪಾರಿಗಳ ಸಮೀಕ್ಷೆ ಮತ್ತು ವಿವಿಧ ಪಟ್ಟಣ ಮಾರಾಟ ಸಮಿತಿಗಳಿಗೆ ಚುನಾವಣೆಗಳನ್ನು ಮೊದಲ ಬಾರಿಗೆ ನಡೆಸಲಾಗಿತ್ತು ಎಂದು ಅವರು ಎತ್ತಿ ತೋರಿಸಿದರು. 2022ರಲ್ಲಿ ಇದೇ ಪ್ರಕ್ರಿಯೆಯನ್ನು ಪುನರಾವರ್ತಿಸಬೇಕಾಗಿತ್ತು. ಆದರೆ ದುರದೃಷ್ಟವಶಾತ್ ಅದನ್ನು ಕೈಗೊಳ್ಳಲಾಗಲಿಲ್ಲ. ಆದರೆ ನಾವು ರಾಜ್ಯದಲ್ಲಿ ಅಧಿಕಾರಕ್ಕೆ ಮರಳಿದ ತಕ್ಷಣ, ಬೀದಿ ವ್ಯಾಪಾರಿಗಳ ಕಾಯ್ದೆ, 2014ರ ಪ್ರಕಾರ ಬೀದಿ ವ್ಯಾಪಾರಿಗಳ ಹೊಸ ಸಮೀಕ್ಷೆಯನ್ನು ನಡೆಸಲಾಗಿದೆ. ಪಟ್ಟಣ ಮಾರಾಟ ಸಮಿತಿಗಳಿಗೆ ಚುನಾವಣೆಗಳು ಏಪ್ರಿಲ್ 2025 ರಲ್ಲಿ ಪೂರ್ಣಗೊಳ್ಳಲಿವೆ. ಒಟ್ಟು 189 ವಿವಿಧ ರೀತಿಯ ಮಾರಾಟ ವಲಯಗಳನ್ನು ಗುರುತಿಸಲಾಗಿದೆ. ಅದರೊಳಗೆ 10,142 ಮಾರಾಟ ಸ್ಥಳಗಳನ್ನು ಮೀಸಲಿಡಲಾಗಿದೆ ಎಂದರು. ಬೀದಿ ವ್ಯಾಪಾರಿಗಳಿಗಾಗಿ ರಾಜ್ಯವು ವಿವಿಧ ಕಲ್ಯಾಣ ಯೋಜನೆಗಳನ್ನು ಪ್ರಾರಂಭಿಸಿದೆ. ಅವರ ಮಕ್ಕಳಿಗೆ ಶಿಕ್ಷಣ, ಆರೋಗ್ಯ ಸೌಲಭ್ಯಗಳು, ವಸತಿ ಮತ್ತು ಅವರ ಉದ್ಯೋಗಾವಕಾಶಗಳನ್ನು ಸುಧಾರಿಸಲು ಕೌಶಲ್ಯ ತರಬೇತಿಯಂತಹ ಪ್ರಮುಖ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸಿದೆ. ಹೆಚ್ಚುವರಿಯಾಗಿ, ಅವರ ಚಲನಶೀಲತೆಯನ್ನು ಹೆಚ್ಚಿಸಲು ಮತ್ತು ಉತ್ತಮ ವ್ಯಾಪಾರ ಅವಕಾಶಗಳನ್ನು ಸೃಷ್ಟಿಸಲು ನಾವು ಅವರಿಗೆ ವಿದ್ಯುತ್ ಮಾರಾಟ ವಾಹನಗಳನ್ನು ನೀಡುವ ಪ್ರಕ್ರಿಯೆಯಲ್ಲಿದ್ದೇವೆ. 2024-25 ರಲ್ಲಿ, ವಿವಿಧ ರೀತಿಯ ಮಾರಾಟ ವಾಹನಗಳನ್ನು ಪಡೆಯಲು 3,778 ಫಲಾನುಭವಿಗಳನ್ನು ಗುರುತಿಸಲಾಗಿದೆ ಎಂದು ಅವರು ಹೇಳಿದರು.

# ಶೃಂಗೇರಿಯಲ್ಲಿ ಸಂಭ್ರಮದ ರಾಮನವಮಿ ಆಚರಣೆ

ಶೃಂಗೇರಿ: ಶ್ರೀ ರಾಮನವಮಿಯನ್ನು ಸಂಭ್ರಮದಿಂದ ಭಾನುವಾರ ತಾಲ್ಲೂಕಿನಾದ್ಯಂತ ಆಚರರಿಸಲಾಯಿತು. ಶ್ರೀಮದ್ ಭಾಗವತ ಮತ್ತು ರಾಮಾಯಣಗಳನ್ನು ಪಠಿಸಲಾಯಿತು.ಮನೆ-ಮನೆಗಳಲ್ಲಿ ಹಬ್ಬದ ಪ್ರಯುಕ್ತ ರಂಗವಲ್ಲಿ ಚಿತ್ತಾರವ ಬಿಡಿಸಿ,ತಳಿರು ತೋರಣ ಕಟ್ಟಿ ಸಾಲಂಕೃತಗೊಂಡ ದೇವರ ಮನೆಯಲ್ಲಿ ವಿಶೇಷವಾಗಿ ಶ್ರೀರಾಮನಿಗೆ ಪೂಜೆ ಸಲ್ಲಿಸಲಾಯಿತು.ಶ್ರೀ ರಾಮನ ಭಜನೆಗಳು ಹಾಗೂ ಕೀರ್ತನೆಗಳನ್ನು ಹಾಡಿ ಸದ್ಭಕ್ತರು ಶ್ರದ್ಧಾಭಕ್ತಿ ಮೆರೆದರು.ಕೋಸಂಬರಿ,ಪಾಯಸ,ವಿವಿಧ ಖ್ಯಾದಗಳನ್ನು ಸವಿದು ಶ್ರೀ ರಾಮನ ದೇವಾಲಯಗಳಿಗೆ ಭೇಟಿ ನೀಡಿದರು.
ವಿದ್ಯಾರಣ್ಯಪುರ ಶ್ರೀ ರಾಮನಿಗೆ ರಾಮನವಮಿ ಪ್ರಯುಕ್ತ ಮಧ್ಯಾಹ್ನ ಭಜನಾ ಕಾರ್ಯಕ್ರಮ,ಸಂಜೆ ಸೀತಾರಾಮ ಕಲ್ಯಾಣ ಧಾರ್ಮಿಕ ಕಾರ್ಯಕ್ರಮ ನೆರವೇರಿತು.ಶ್ರೀಮಠದ ಕೋದಂಡರಾಮಸ್ವಾಮಿ ದೇವಾಲಯ,ಹೊಳೆಕೊಪ್ಪ ಶ್ರೀ ರಾಮದೇವಸ್ಥಾನದಲ್ಲಿ ಕೂಡಾ ಪೂಜೆ ನೆರವೇರಿತು.



# ತಾಳಿ ಕಟ್ಟುವ ಮುಂಚೆ ಮಾಡುವ ಪ್ರೀತಿಗೂ ತಾಳಿ ಕಟ್ಟಿಸಿಕೊಂಡು ಮಾಡುವ ಪ್ರೀತಿಗೂ ಬಹಳ ಅಜಗ ಜಾಂತರ

ತಾಳಿ ಕಟ್ಟುವ ಮುಂಚೆ ಮಾಡುವ ಪ್ರೀತಿಗೂ ತಾಳಿ ಕಟ್ಟಿಸಿಕೊಂಡು ಮಾಡುವ ಪ್ರೀತಿಗೂ ಬಹಳ ಅಜಾಗಾಜಾಂತರ ವಿದೆ ಆದರೂ ಎಲ್ಲಾರಿಗೂ ಮದುವೆ ಮುಂಚೆ ಮಾಡಿದ ನೆನಪುಗಳೆ ಬಹಳ ಮುದ ನೀಡುತ್ತವೆ. ಆದರೆ ಅವಳು ಮತ್ತು ಅವನ ಪ್ರೇಮ ಕಥೆ ಹಾಗಲ್ಲ. ಬಹಳ ಬಹಳ ಸ್ವಾರಸ್ಯವಾಗಿದೆ . ಹಿಂದೆ ಮುಂದೆ ನೋಡದೆ ಯೋಚನೆ ಮಾಡದೆ, ಭೂತ ಪ್ರೇತ ಯಾವುದನ್ನು ಚಿಂತಿಸದೆ ದೇವರ ಮನೆಯಲ್ಲಿ ಕುಳಿತು ಪೂಜೆ ಮಾಡಿ ಮಹಾ ಲಕ್ಷ್ಮಿ ಕೊರಳಲ್ಲಿ ಇದ್ದ ಹರಿಶಿಣ ಕೊಂಬನ್ನ ಅವಳು ಅವನ ಕೈಗೆ ನೀಡುತ್ತಾಳೆ ಅಷ್ಟೇ. ಯಾಕೆ ಎನು ಬೇಕು ಬೇಡ ಎನನ್ನು ಚಿಂತಿಸದೆ ಅವನು ಕೂಡ ಬಾಗಿ ನಿಂತ ಅವಳ ಕೊರಳಿಗೆ ಮೂರು ಗಂಟು ಹಾಕಿ ಅವಳ ಹಣೆಗೆ ಕುಂಕುಮ ಇಟ್ಟು ಒಬ್ಬರೊನ್ನಬ್ಬರು ಆಲಿಂಗಿಸಿಕೊಳ್ಳುತ್ತಾರೆ. ಅಲ್ಲಿಂದ ಅವರ ಪ್ರೇಮ ಕಥೆ ಸಾಕಷ್ಟು ಸ್ವಾರಸ್ಯಕರ ವಾಗಿ ಮೂಡಿಬರುತ್ತೆ. ನಾನ ತಿರುವುಗಳು. ನಾನ ಅಡೆತಡೆಗಳು . ಆದರೆ ಎಲ್ಲೇ ಎನೇ ಮಾಡಿದರೂ ಅವರ ಇಬ್ಬರ ನಡುವೆ ಇದ್ದ ಪ್ರೀತಿ ಮಾತ್ರ ಕಡಿಮೆ ಆಗ್ತಾನೆ ಇರಲಿಲ್ಲ. ಇನ್ನೇನು ಇಬ್ಬರ ಜೀವನ ಮುಗಿದೇ ಹೋಯ್ತು ಅನ್ನುವಾಗ ಮತ್ತೆ ಇಬ್ಬರು ಒಟ್ಟೊಟ್ಟಿಗೆ ಅವರ ಮುಂದಿನ ಭವಿಷ್ಯದ ಬಗ್ಗೆ ಮಾತಾಡ್ತಾ ಇರ್ತಾರೆ. ಇನ್ನೇನೂ ಒಬ್ಬರಿಗೊಬ್ಬರು ದೂರ ಆಗಿಯೇ ಬಿಟ್ಟರು ಎಂದು ನೆಂಟರಿಷ್ಟರು ಸ್ನೇಹಿತರು ಯೋಚನೆ ಮಾಡ್ತಾ ಇದ್ರೆ ಒಂದೇ ತಟ್ಟೆಯಲ್ಲಿ ಇಬ್ಬರು ಒಬ್ಬರಿಗೊಬ್ಬರು ತುತ್ತನ್ನ ನೀಡುತ್ತಾ ಮೌನವಾಗಿ ಊಟ ಮಾಡ್ತಾ ಇರ್ತಾರೆ. ಇದನ್ನ ನೋಡಿದ ಪ್ರತೀ ನಿತ್ಯ ಅವರ ನೆಂಟರಿಷ್ರು ಭಿಂಟಿಜಿಞುಂಟಿ ಮಾಡಿಕೊಂಡು ತಲೆಕೆಡಿಸಿಕೊಂಡು ಅಪ್ಪಿ ತಪ್ಪಿ ಯಾರು ಅವರ ನಡುವೆ ಹೋಗಬೇಡ್ರಿ ಅವ ಅವಳನ್ನ ಬಿಟ್ಟುಕೊಡಲ್ಲ ಅವಳು ಅವನನ್ನಬಿಟ್ಟು ಕೊಡಲ್ಲ ಮದ್ಯ ಹೋದವರು ಮೇಂಟಲ್ ಆಗ್ತಿರಿ ನೋಡಿ ಅಂತ ನಕ್ಕಿದ್ದು ಉಂಟು. ಇಬ್ಬರೀಗೂ ಒಂದೇ ಹಾಸಿಗೆ, ಒಂದೇ ಹೊದಿಕೆ ಒಂದೇ ಕೋಣೆ..ಒಂದೇ ತಟ್ಟೆ.. ಜಚೆಟ್ಖಿ ಚೆಟಿಜ ಜತಜಡಿಥಿ ಟಂತಜಟಜಟಿಣ ಕೂಡ ಹೊಸದು ಅವರಿಗೆ. ಒಬ್ಬರಿಗೊಬ್ಬರು ಒಂದೇ ಪ್ರಾಣ ಎರಡು ದೇಹದಂತೆ ಬದುಕಲು ಪ್ರಾರಂಭ ಮಾಡಿ ನಾಲ್ಕು ವರ್ಷಗಳು ಕಳೆದರೂ ಎನೋ ಈಗ ಅಷ್ಟೇ ಪರಿಚಯ ಆದವರ ಹಾಗೆ ಈಗಷ್ಟೇ ಪ್ರೀತಿ ಆಗಿರುವ ಹಾಗೆ..ಇರುವ ಅವರ ಪ್ರೀತಿ ಆ ದೇವರನ್ನೂ ಭಿಂಟಿಜಿಞುಂಟಿ ಮಾಡಿಸ್ತಾ ಇತ್ತು.
ನೋಡುಗರಿಗೆ ಒಂದೇ ಸೋಜಿಗ ಇದು ಯಾವ ಸೇಮೆಯ ಸೆಳೆತ ಇವರದು ಒಂದು ಆಕಾಶ ಇನ್ನೊಂದು ಭೂಮಿ ಆದರೆ...ಇಬ್ಬರೂ ಸಾಧಕರು. ಆಧ್ಯಾತ್ಮದ ಚಿಂತಯಲ್ಲಿ ಇರುವವರು, ಯಾರಿಗೂ ಬೇಸರ ಮಾಡುವವರಲ್ಲ ಯಾರಿಗೂ ಬೈಯೋಲ್ಲ ಹೊಡೆಯೋಲ್ಲ ಆದರೆ ಅವರಿಬ್ಬರೂ ಒಬ್ಬರಿಗೊಬ್ಬರು ಹೊಡೆದಾಡುತ್ತಾರೆ ಕಿತ್ತಾಡುತ್ತಾರೆ ಬೈದಾಡುತ್ತಾರೆ..ಒಬ್ಬರಿಗೊಬ್ಬರು ಜಿಗಣೆ ತರ ಅಂಟಿಕೊಂಡಿರುತ್ತಾರೆ..ಆದರೆ ಬೇರೆಯವರ ಎದುರಿಗೆ ಒಬ್ಬರಿಗೊಬ್ಬರನ್ನ ಬಿಟ್ಟುಕೊಡಲ್ಲ....ಇಂತಹ ಅತೀ ಸ್ವಾರಸ್ಯದ ಒಂದು ಕಾದಂಬರಿ ಬರ್ತಾ ಇದೆ...ಸಮಾಜದಲ್ಲಿ ಅಸಾಧಾರಣ ವಾಗಿ ಸಿಗುವ ಯುವ ಹೃದಯಗಳು ಮಿಡಿಯುವ ಹಿರಿಯ ಜೀವಗಳು ಮರುಗುವ " ಪ್ರೇಮಾಗ್ನಿ"" ಕಾದಂಬರಿ ಅದು.
ಹಳ್ಳಿಯಿಂದ ದೆಲ್ಲಿಗೆ- ದೆಲ್ಲಿಯಿಂದ ಹಳ್ಳಿಗೆ... ಕುರಿ, ಧನ ಹೊಲ, ಬೆಕ್ಕು ನಾಯಿ, ಮರ ಗಿಡ ಪ್ರತೀ ಜೀವ ಸಂಕುಲಗಳಿಗೂ ಪ್ರೀತಿಯ ಸ್ಪರ್ಷ ಗಾಂದರ್ವ ವಿವಾಹ ಹಿಂದನ ಕಾಲದಲ್ಲಿ ಇತ್ತು ಅಂತ ಸಿನಿಮಾ ನೋಡಿದ್ದೇವೆ ಕೇಳಿದ್ದೇವೆ... ಈಗಿನ ಕಾಲದಲ್ಲೂ ಇದೆ ಆದರೆ, ಆಸ್ತಿ ಮತ್ತು ಸಂಬಂಧ ಗಳ ಮೇಲೆ ಹಕ್ಕನ್ನು ಚಲಾಯಿಸುವ ಸಲುವಾಗಿ ಹತ್ತಾರು ಜನರ ಮಧ್ಯ ನಡೆಯುವ ವಿವಾಹ ವನ್ನು ಸಾವಿರಾರು ಜನರ ಆಶೀರ್ವಾದ ಪಡೆದು ಆಗಿದ್ದೇವೆ ಅಂತಾರೆ ಆದರೆ ಆ ಸಾವಿರಾರು ಜನರ ಆಶೀರ್ವಾದ ಕ್ಕಾಗಿ ಅಲ್ಲ ಜನರ ನಡುವೆ ವಿವಾಹ ಆಗುವುದು ಸಾಕ್ಷಿ ಗಾಗಿ. ಎಲ್ಲಿ ನನಗೆ ಅವನು ಮೋಸ ಮಾಡ್ತಾನೋ ಇಲ್ಲ ಇವಳು ಮೊಸ ಮಾಡಿ ಬಿಡುತ್ತಾಳೊ ಅನ್ನುವ ಆತಂಕ ಭಯ ಅಷ್ಟೇ. ಸಾಕಷ್ಟು ನೈಜ ಸಂದೇಶಗಳನ್ನ ಈಗಿನ ಸಮಾಜಕ್ಕೆ ಮಾದರಿಯಾಗಿ ಮುಂದಿನ ಪೀಳಿಗೆಗೆ ತಮ್ಮ ಬದುಕನ್ನ ಕೊಡುಗೆ ನೀಡುವ ಅಸಾಧಾರಣ ಜೀವನ ಚರಿತ್ರೆ!. ನಿಮ್ಮ ಆಶೀರ್ವಾದ ಇರಲಿ. ಕಾದು ನೋಡೋಣ ಮುಂದಿನ ಸಂಚಿಕೆಯಲ್ಲಿ
**-ಇಂತಿ ನಿಮ್ಮ ಮುದ್ದು ಭಾಗು.**



## ಭದ್ರಾ ನದಿಯಲ್ಲಿ ಸಾಲು ಸಾಲು ಅನಾಹುತ: ನದಿಗೆ ಹಾರಿ ಯುವಕ ಸಾವಿಗೆ ಶರಣು

**ಚಿಕ್ಕಮಗಳೂರು:** ಭದ್ರಾನದಿ ಸಾಲು ಸಾಲು ಅನಾಹುತಗಳ ಸರಣಿಗೆ ಕಾರಣವಾಗುತ್ತಿದೆ. ಒಂದೇ ವಾರದ ಅಂತರದಲ್ಲಿ ಜಿಲ್ಲೆಯ ಕಳಸ ತಾಲೂಕಿನ ಭದ್ರಾನದಿಯಲ್ಲಿ ಇಬ್ಬರು ಯುವಕರು ಸೇರಿ ನಾಲ್ಕು ಮೃತದೇಹ ಪತ್ತೆಯಾಗಿದೆ. ಮೂರ್ನಾಲ್ಕು ದಿನಗಳ ದಿನಗಳ ಹಿಂದೆ ಅದೇ ಭದ್ರಾ ನದಿಯಲ್ಲಿ 10ನೇ ತರಗತಿ ಬಾಲಕನ ಮೃತದೇಹ ಪತ್ತೆಯಾಗಿತ್ತು. ವಾರದ ಹಿಂದೆ ಇದೇ ನದಿಯಲ್ಲಿ ರಾಜಸ್ಥಾನದ ಇಬ್ಬರು ಸಾವನ್ನಪ್ಪಿದ್ದರು. ಇಂದು ಮತ್ತದೇ ಭದ್ರಾ ನದಿಯಲ್ಲಿ 33 ವರ್ಷದ ಸುಹಾಸ್ ಎಂಬ ಯುವಕನ ಶವ ಕೂಡ ಪತ್ತೆಯಾಗಿದೆ.ಕಳಸ ತಾಲೂಕಿನ ರುದ್ರಪಾದ ಗ್ರಾಮದ ಬಳಿ ನದಿಯಲ್ಲಿ ಶವ ತೇಲುತ್ತಿರುವುದನ್ನು ಗಮನಿಸಿದ ಸ್ಥಳೀಯರು ತಕ್ಷಣ ಕಳಸ ಠಾಣೆ ಪೊಲೀಸರಿಗೆ ಹಾಗೂ ಶೌರ್ಯ ವಿಪತ್ತು ತಂಡದ ಸದಸ್ಯರಿಗೆ ಮಾಹಿತಿ ನೀಡಿದ್ದರು. ಸ್ಥಳಕ್ಕೆ ಬಂದ ಶೌರ್ಯ ವಿಪತ್ತು ಸದಸ್ಯರು ಹಾಗೂ ಕಳಸ ಪೊಲೀಸರು ಮೃತದೇಹವನ್ನು ಮೇಲೆತ್ತಿದಾಗ ಮೃತ ಯುವಕ ಮೂಡಿಗೆರೆ ತಾಲೂಕಿನ ಬಣಕಲ್ ನಿವಾಸಿ ಸುಹಾಸ್ (33) ಎಂದು ತಿಳಿದು ಬಂದಿದೆ. ಸುಹಾಸ್ ನಾಪತ್ತೆಯಾಗಿರುವ ಕುರಿತು ಬಣಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಾಪತ್ತೆ ಯಾದ ಬಳಿಕ ಈತನ ಮೊಬೈಲ್ ಕಳಸ ಟವರ್ ವ್ಯಾಪ್ತಿಯಲ್ಲಿ ಸ್ವಿಚ್ ಆಫ್ ಆಗಿತ್ತು. ಇದೀಗ ಯುವಕ ಸುಹಾಸ್ ಶವ ಭದ್ರಾ ನದಿಯಲ್ಲಿ ಪತ್ತೆಯಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.ಭದ್ರಾನದಿಯಲ್ಲಿ ಪತ್ತೆಯಾದ ಸುಹಾಸ್ ಸಾವಿನ ಬಗ್ಗೆ ಅನುಮಾನ ವ್ಯಕ್ತವಾಗುತ್ತಿದೆ.ಆತ್ಮಹತ್ಯೆಯೋ ಅಥವ ಕೊಲೆಯೋ ಎಂಬ ಅನುಮಾನ ಉಂಟಾಗಿದೆ. ಕಳೆದವಾರ ಕೂಡ ಭದ್ರಾ ನದಿಯ ವಶಿಷ್ಠ ತೀರ್ಥದಲ್ಲಿ ರಾಜಸ್ಥಾನ್ ಮೂಲದ ಇಬ್ಬರು ಪ್ರವಾಸಿಗರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದರು. ಅಲ್ಲದೇ ಐದು ದಿನದ ಹಿಂದಷ್ಟೇ ಇದೇ ಭದ್ರಾ ನದಿಯಲ್ಲಿ ಶ್ರೇಯಸ್ ಎಂಬ 10ನೇ ತರಗತಿ ವಿದ್ಯಾರ್ಥಿಯ ಶವವೂ ಪತ್ತೆಯಾಗಿತ್ತು. ಒಂದು ವಾರದ ಅಂತರದಲ್ಲಿ ಇಬ್ಬರು ಮುಳುಗಿ ಜೀವ ಕಳೆದುಕೊಂಡರೆ, ಮತ್ತಿಬ್ಬರು ಅನುಮಾನಸ್ಪದವಾಗಿ ಭದ್ರಾ ನದಿಯಲ್ಲಿ ಶವಗಳು ಪತ್ತೆಯಾಗಿರುವುದು ಸ್ಥಳೀಯರನ್ನ ಬೆಚ್ಚಿಬೀಳಿಸಿದೆ. ಕಳಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಆರಂಭವಾಗಿದೆ.

## ಸಿದ್ದು ಸುದೀರ್ಘ ಚರ್ಚೆ

**ಬೆಂಗಳೂರು:** ರಾಜ್ಯದಲ್ಲಿ ಹನಿಟ್ರ್ಯಾಪ್ ಜಟಾಪಟಿ ಜೋರಾಗಿರುವ ಹೊತ್ತಿನಲ್ಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚಿಸಿರುವುದು ತೀವ್ರ ಕುತೂಹಲ ಕೆರಳಿಸಿದೆ. ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ ಸುದೀರ್ಘ 1 ಗಂಟೆಗೂ ಹೆಚ್ಚು ಕಾಲ ಚರ್ಚಿಸಿದ್ದಾರೆ. ಬಜೆಟ್ ಅಧಿವೇಶನದ ಕೊನೆಯ ದಿನ ಸಚಿವ ಕೆ.ಎನ್ ರಾಜಣ್ಣ ಅವರು, ತಮ್ಮ ವಿರುದ್ಧ ಹನಿಟ್ರ್ಯಾಪ್ ಯತ್ನ ನಡೆದಿರುವುದಾಗಿ ಹೇಳಿಕೆ ನೀಡಿದ್ದರು. ಇದು ಆಡಳಿತ ಪಕ್ಷ ಹಾಗೂ ವಿಪಕ್ಷಗಳ ನಡುವೆ ಜಟಾಪಟಿ ಕಾರಣವಾಗಿತ್ತು. ಇದೇ ವಿಚಾರವನ್ನು ಮುಂದಿಟ್ಟು ಕಾಂಗ್ರೆಸ್ ಗೆ ಮುಜುಗರ ಉಂಟು ಮಾಡಲು ಬಿಜೆಪಿ ಹವಣಿಸುತ್ತಿದೆ. ಹೀಗಾಗಿ ಮಧ್ಯಪ್ರವೇಶಿಸಿರುವ ಮಲ್ಲಿಕಾರ್ಜುನ ಖರ್ಗೆ, ರಾಜಣ್ಣ ದೂರು ನೀಡಿದರೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಸಿಎಂಗೆ ಸೂಚಿಸಿದ್ದಾರೆ ಎನ್ನಲಾಗಿದೆ.

## ವ್ಯಾಟ್ಸಪ್‌ನಲ್ಲಿ ಲಿಂಕ್ ಕ್ಲಿಕ್ – 10.49 ಲಕ್ಷ ರೂ. ಕಳವು

**ಚಿಕ್ಕಮಗಳೂರು:** ವ್ಯಾಟ್ಸಪ್‌ನಲ್ಲಿ ಬಂದ ಲಿಂಕನ್ನು ಕ್ಲಿಕ್ ಮಾಡಿ ಡೌನ್ ಲೋಡ್ ಮಾಡಿಕೊಂಡ ಬಳಿಕ ಬ್ಯಾಂಕ್ ಖಾತೆಯಲ್ಲಿದ್ದ 10.49 ಲಕ್ಷ ರೂ. ಕಳೆದುಕೊಂಡ ಘಟನೆ ನೆಡೆದಿದ್ದು, ಈ ಸಂಬಂಧ ಸೈಬರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ನಗರದಲ್ಲಿ ಮಾ.20ರಂದು ವ್ಯಕ್ತಿಯೊಬ್ಬರಿಗೆ ವ್ಯಾಟ್ಸಪ್ ಗ್ರೂಪ್‌ನಲ್ಲಿ ಪಿ.ಎಂ. ಕಿಸಾನ್ ಯೋಜನಾ. ಎಪಿಕೆ ಎಂಬ ಹೆಸರಿನಲ್ಲಿ ಪೋಸ್ಟ್ ಲಿಂಕ್ ಮಾಡಲಾಗಿದ್ದು, ಲಿಂಕ್ ಡೌನ್ ಲೋಡ್ ಮಾಡಿದ ಕೂಡಲೇ ವ್ಯಕ್ತಿಯ ಗಮನಕ್ಕೆ ಬರುವಷ್ಟರಲ್ಲಿ ಕೆನರಾಬ್ಯಾಂಕ್ ಖಾತೆಯಲ್ಲಿದ್ದ 10.49ಲಕ್ಷ ರೂ. ಕಡಿತಗೊಂಡಿದೆ.ನಗರದ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಮಾ.22ರಂದು ವಂಚನೆ ಪ್ರಕರಣ ದಾಖಲಾಗಿದೆ.ಸೈಬರ್ ವಂಚನೆ ಪ್ರಕರಣದಲ್ಲಿ ಎಪಿಕೆ( ಆಂಡ್ರಾಯ್ಡ್ ಪ್ಯಾಕೇಜ್ ) ಫೈಲ್ ವಂಚನೆಗಳು ಆಂಡ್ರಾಯ್ಡ್ ಮೊಬೈಲ್ ಬಳಕೆದಾರರನ್ನು ಗುರಿಯಾಗಿಸಿಕೊಂಡು ಮೋಸ ಮಾಡಲಾಗುತ್ತಿದೆ.ಆದುದರಿಂದ ವಾಟ್ಸಪ್ ಫೇಸ್ ಬುಕ್ ಮೆಸೆಂಜರ್, ಟೆಲಿಗ್ರಾಂ ಸೇರಿ ಸಾಮಾಜಿಕ ಜಾಲತಾಣದಲ್ಲಿ ಬರುವ ಈ ರೀತಿಯ ಎಪಿಕೆ ಫೈಲ್‌ಗಳನ್ನು ಡೌನ್ ಲೋಡ್ ಮಾಡಿಕೊಳ್ಳದಂತೆ ಜಿಲ್ಲಾ ಪೊಲೀಸ್ ಇಲಾಖೆ ಸಾರ್ವ ಜನಿಕರಲ್ಲಿ ವಿನಂತಿಸಿದೆ.



# ಭಗವಾನ ಶ್ರೀಪಾರ್ಶ್ವನಾಥ ಸ್ವಾಮಿಗೆ ಮಹಾಭಿಷೇಕ

**ರಿಪ್ಪನ್‌ಪೇಟೆ(ಹೊಂಬುಜ):** ತ್ರಿಕೂಟ ಜಿನಾಲಯದ ಪಾರ್ಶ್ವನಾಥ ಸ್ವಾಮಿಯ ಮಹಾಭಿಷೇಕದಿಂದ ಭಕ್ತರಿಗೆ ಆಧ್ಯಾತ್ಮ ಮನೋಧರ್ಮ ವರ್ಧಿಸುತ್ತದೆ ಎಂದು ಹೊಂಬುಜ ಶ್ರೀ ಜೈನ ಮಠದ ಜಗದ್ಗುರು ಸ್ವಸ್ತಿಶ್ರೀ ಡಾ. ದೇವೇಂದ್ರಕೀರ್ತಿ ಭಟ್ಟಾರಕ ಪಟ್ಟಾಚಾರ್ಯವರ್ಯ ಮಹಾಸ್ವಾಮಿಜಿಗಳವರ ಹೇಳಿದರು.ಸಮೀಪದ ಹೊಂಬುಜ ಶ್ರೀ ಜೈನ ಮಠದ ಭಗವಾನ ಶ್ರೀ 1008 ಪಾರ್ಶ್ವನಾಥ ಸ್ವಾಮಿ ಏಕಶಿಲಾ ಜಿನಬಿಂಬಕ್ಕೆ ಭಕ್ತವೃಂದದವರು ಮಹಾಭಿಷೇಕ ವಾರ್ಷಿಕ ಜಾತ್ರಾ ಮಹೋತ್ಸವದ ಪಂಚಮಿ ದಿನದಂದು ಹೊಂಬುಜದ ಗುಡ್ಡದ ಬಸದಿ ಎಂದೇ ಕರೆಯಲ್ಪಡುವ ತ್ರಿಕೂಟ ಜಿನಾಲಯದಲ್ಲಿ ಹೊಂಬುಜ ಮಠದ ಡಾ. ದೇವೇಂದ್ರಕೀರ್ತಿ ಭಟ್ಟಾರಕ ಪಟ್ಟಾಚಾರ್ಯವರ್ಯ ಮಹಾಸ್ವಾಮಿಜಿಗಳವರ ದಿವ್ಯ ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.ಪ್ರಾತಃ ಕಾಲದ ನಿತ್ಯವಿಧಿ ಸಹಿತ ಪೂಜಾ ವಿಧಾನಗಳ ಬಳಿಕ ಗಣಾಧಿಪತಿ ಗಣಧರಾಚಾರ್ಯ ಶ್ರೀ 108 ಕುಂಥುಸಾಗರ ಮಹಾರಾಜರ ಸಸಂಘದ ಮುನಿಶ್ರೀಗಳು ಆರ್ಯಿಕಾಯವರ ಸಾನಿಧ್ಯದಲ್ಲಿ ಶಾಸ್ತ್ರೋಕ್ತ ರೀತಿಯಲ್ಲಿ ಜಲ, ಹಾಲು, ಎಳನೀರು, ಇಕ್ಷುರಸ, ಕಲ್ಕಚೂರ್ಣ, ಕಷಾಯ, ಚಂದನ, ಅಷ್ಟಗಂಧ, ಕೇಸರಿ, ದ್ರವ್ಯಗಳಿಂದ ಅಭಿಷೇಕವನ್ನು ಭಕ್ತ ಸಮುದಾಯದವರು ಶ್ರದ್ಧಾ ಭಕ್ತಿಯಿಂದ ನೆರವೇರಿತು, ಕಂಬದಹಳ್ಳಿಯ ಸ್ವಸ್ತಿಶ್ರೀ ಭಾನುಕೀರ್ತಿ ಭಟ್ಟಾರಕ ಮಹಾಸ್ವಾಮೀಜಿ ಹಾಗೂ ಕೊಲ್ಹಾಪುರದ ಸ್ವಸ್ತಿಶ್ರೀ ಲಕ್ಷ್ಮೀಸೇನ ಭಟ್ಟಾರಕ ಮಹಾಸ್ವಾಮೀಜಿಯವರು ಉಪಸ್ಥಿತರಿದ್ದರು. ಬಾಹುಬಲಿ ಸ್ವಾಮಿ ಹಾಗೂ ಶ್ರೀ ಶಾಂತಿನಾಥ ಸ್ವಾಮಿ ಸನ್ನಿಧಿಯಲ್ಲಿಯೂ ಪೂಜೆ ಜಿನಭಜನೆ–ವಾದ್ಯಗೋಷ್ಠಿಗಳೊಂದಿಗೆ ನಡೆದ ಮಹಾಭಿಷೇಕವು ಪುಷ್ಪಾರ್ಚನೆ, ಮಂಗಳಾರತಿಯೊಂದಿಗೆ ಸಂಪನ್ನಗೊಂಡಿತು. ಶ್ರೀ ಪಾರ್ಶ್ವನಾಥ ಕೀ ಜೈ, ಶ್ರೀ ಪದ್ಮಾವತಿ ಮಾತಾಕೀ ಜೈನ, ಜೈನ ಧರ್ಮ ಕೀ ಜೈ ಜಯಕಾರಗಳು ಕೇಳಿಬಂದಿತು.



# ವಿಜೃಂಭಣೆಯಿಂದ ನಡೆದ ಯಲವಟ್ಟಿ ಆಂಜನೇಯಸ್ವಾಮಿ ರಥೋತ್ಸವ



**ಮಲೇಬೆನ್ನೂರು :** ಸಮೀಪದ ಯಲವಟ್ಟಿ ಗ್ರಾಮದಲ್ಲಿ ಆಂಜನೇಯ ಸ್ವಾಮಿ ರಥೋತ್ಸವ ಭಾನುವಾರ ಬ್ರಾಹ್ಮಿ ಮೂಹೂರ್ತದಲ್ಲಿ ಅಪಾರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು. ಬ್ರೀಟಿಷರ ಕಾಲದಿಂದಲೂ ಸಾಂಪ್ರದಾಯಿಕವಾಗಿ ಆಚರಿಸಿಕೊಂಡು ಬಂದಿದೆ. ಮುಜರಾಯಿ ವ್ಯಾಪ್ತಿಗೆ ಒಳಪಟ್ಟ ದೇವಸ್ಥಾನ ಇದಾಗಿದೆ. ಮಂಗಳವಾದ್ಯಗಳೊಂದಿಗೆ ಆಂಜನೇಯಸ್ವಾಮಿ ಉತ್ಸವ ಮೂರ್ತಿಯ ಗ್ರಾಮ ಪ್ರದಕ್ಷಿಣೆ ನಂತರ ಸಾಂಪ್ರದಾಯಿಕ ಆಚರಣೆಯಂತೆ ಜಿಗಳಿ ರಂಗನಾಥ ಸ್ವಾಮಿ ಉತ್ಸವ ಮೂರ್ತಿಯನ್ನು ಒಟ್ಟಿಗೆ ವಿವಿಧ ಮಂತ್ರ ಘೋಷಳೊಂದಿಗೆ ರಥಾರೋಹಣ ಮಾಡಲಾಯಿತು. ಅಷ್ಟ ದಿಕ್ಪಾಲಕರಿಗೆ ಬಲಿದಾನ ನೀಡಿ "ಗೋವಿಂದ ಗೋವಿಂದ" ರಾಮ ಜಯ ರಾಮ ಎನ್ನುವ ಭಕ್ತರ ಘೋಷಣೆಗಳೊಂದಿಗೆ ರಾಜ ಬೀದಿಯಲ್ಲಿ ರಥ ಜರುಗಿತು.ಭಕ್ತರು ರಥದ ಗಾಲಿಗೆ ತೆಂಗಿನಕಾಯಿ ಹೊಡೆದು ಬಾಳೆ ಹಣ್ಣು ಸಮರ್ಪಿಸಿದರು. ಮಂಡಕ್ಕಿ,ಬಾಳೆಹಣ್ಣು, ಉತ್ತತ್ತಿಗಳನ್ನು ರಥಕ್ಕೆ ತೂರುವ ಮೂಲಕ ಭಕ್ತಿ ಸಮರ್ಪಿಸಿದರು. ವಿವಿಧ ಪುಷ್ಪಗಳಿಂದ ,ಬಾಗವದ್ವಜಗಳಿಂದ ರಥ ಅಲಂಕೃತಗೊಂಡಿತ್ತು .ಡೊಳ್ಳು, ತಮಟೆ, ಭಜನೆ, ಡೋಲು, ನಾಸಿಕ್ ಮುಂತಾದುವು ಉತ್ಸವಕ್ಕೆ ಕಳೆ ತಂದವು.ಪುರುಷರು, ಮಹಿಳೆಯರು, ಮಕ್ಕಳು ದಿಂಡುರುಳು ಸಲ್ಲಿಸುವುದು ಕಂಡುಬಂತು.ರಾಜ ಬೀದಿ ಮತ್ತು ದೇವಾಲಯ ವಿದ್ಯುತ್ ದ್ವೀಪಗಳಿಂದ ಅಲಂಕೃಗೊಂಡಿತ್ತು. ಮುಖ್ಯಬೀದಿಯಲ್ಲಿ ಮಕ್ಕಳ ಆಟಿಕೆ,ಬಳೆ, ಬೆಂಡು ಬತ್ತಾಸು ಅಂಗಡಿಗಳನ್ನು ಹಾಕಿದ್ದರು. ಸಂಬ್ರಮದ ಖರೀದಿ ಕಂಡುಬಂತು.

"ಮುಳ್ಳೋತ್ಸವ": ರಥೋತ್ಸವದ ನಿಮಿತ್ತ ಸಾಂಪ್ರದಾಯದಂತೆ ಗೋಧೂಳಿ ಲಗ್ನದಲ್ಲಿ ಮುಳ್ಳು ಗದ್ದಿಗೆ ಉತ್ಸವ ನೆಡೆಯಿತು ಹರಕೆ ಹೊತ್ತ ಭಕ್ತರು ಮುಳ್ಳು ಗದ್ದಿಗೆಯ ಮೇಲೆ ನೆಡೆದು ಹರಕೆ ತೀರಿಸಿದರು. ಊರಿನ ಮುಖಂಡರು ಮತ್ತು ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರು, ಸದಸ್ಯರು ಸುತ್ತ ಮುತ್ತಲಿನ ಗ್ರಾಮಗಳ ಭಕ್ತರು ಪಾಲ್ಗೊಂಡಿದ್ದರು.

# ನೀಚಡಿಯಲ್ಲಿ ಆಲೆಮನೆಯೊಂದಿಗೆ ಕೆರೆಹಬ್ಬ ಉತ್ಸವ



**ತ್ಯಾಗರ್ತಿ:** ಕೆರೆಯನ್ನು ಪುನರುಜ್ಜೀವನಗೊಳಿಸಿದ ಸವಿನೆನಪಿಗಾಗಿ ಕಳೆದ 8 ವರ್ಷಗಳಿಂದ ಕೆರೆದಡದಲ್ಲಿ ಆಲೆಮನೆ ರೂಪದಲ್ಲಿ ಕೆರೆ ಹಬ್ಬ ಆಚರಿಸುತ್ತಿದ್ದೇವೆಂದು ಯೋಗೇಶ್ ನೀಚಡಿ ಹೇಳಿದರು. ಸಾಗರ ತಾಲ್ಲೂಕಿನ ನೀಚಡಿಯಲ್ಲಿ ಮಧ್ಯರಾತ್ರಿವರೆಗೂ ಆಲೆಮನೆ ನೆಡೆಸಿದ್ದು ಸಾವಿರಾರು ಜನರು ಕಬ್ಬಿನ ಹಾಲು, ಮಂಡಕ್ಕಿ, ಬೋಂಡಾ, ವಿವಿಧಬಗೆಯ ತಿಂಡಿತಿನಿಸುಗಳ ಸವಿಯನ್ನುಂಡರು. ಇರುವಕ್ಕಿ ವಿಶ್ವವಿಧ್ಯಾಲಯದ ಕುಲಪತಿಗಳಾದ ಡಾ.ಆರ್.ಸಿ.ಜಗದೀಶ್ ಕಬ್ಬಿನ ಹಾಲು ಸವಿದು ಮಾತನಾಡಿ ಕೃಷಿ, ಕೆರೆ, ಆಲೆಮನೆಗೆ ಹತ್ತಿರದ ನಂಟಿದೆ. ಕೆರೆ, ಕಾಡು, ನಮ್ಮ ಸಂಪ್ರದಾಯ ಸಂಸ್ಕೃತಿಗಳನ್ನು ಉಳಿಸಿ ಒಟ್ಟಾಗಿ ಜೀವಿಸಿದರೆ ಅದೇ ಸಾಮರಸ್ಯದ ಜೀವನ ಎಂದು ಹೇಳಿದರು. ಇರುವಕ್ಕಿ ವಿಶ್ವವಿಧ್ಯಾಲಯದ ಕುಲಸಚಿವರಾದ ಡಾ.ಕೆ.ಸಿ.ಶಶಿಧರ್ ಕೆರೆಹಬ್ಬದಲ್ಲಿ ಪಾಲ್ಗೊಂಡು ಮಾತನಾಡಿ ಅನ್ಯೋನ್ಯತೆಯಿಂದ ಜೀವನ ನೆಡೆಸುತ್ತಿರುವ ಈ ಗ್ರಾಮದಲ್ಲಿ ಕೆರೆ ಪುನರುಜ್ಜೀವನಗೊಳಿಸುವ ಸಂಧರ್ಭದಲ್ಲಿ ವಾರದಲ್ಲಿ 2ಬಾರಿ ಬೇಟಿ ನೀಡುತ್ತಿದ್ದು ಆಗಿನ ಸಮಸ್ಯೆಗಳನ್ನು ಸಮರ್ಪಕವಾಗಿ ನಿರ್ವಹಿಸುವುದನ್ನು ನೋಡಿದ್ದೇನೆ. ಕೆರೆಯ ಅಭಿವೃದ್ಧಿಯೊಂದಿಗೆ ಕೆರೆಯ ದಡದಲ್ಲಿ ಔಷಧಿ ಸಸ್ಯಗಳ ವನನಿರ್ಮಿಸಲು ಗಿಡಗಳ ನಿರ್ವಹಣೆ ಕಷ್ಟವಾಗುವುದರಿಂದ ಮರಗಳಾಗಿ ಔಷಧಿಗೆ ಉಪಯೋಗವಾಗುವ ಗಿಡಗಳನ್ನು ಕೊಡಿಸುತ್ತೇನೆ. ಹಾಗೂ ನಕ್ಷತ್ರವನಗಳನ್ನು ನಿರ್ಮಿಸಲು ಯೋಜನೆಗಳನ್ನು ರೂಪಿಸಿ ವಿಶೇಷವಾಗಿ ಗುರುತಿಸುವಂತಹ ಗಿಡಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಬಹುದು ಎಂದು ಹೇಳಿದರು. ಸಾವಿರಾರು ಜನ ಈ ಆಲೆಮನೆಯಲ್ಲಿ ಪಾಲ್ಗೊಂಡಿದ್ದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಅನಿತಾಕುಮಾರಿ, ಸಾಗರ ಕೃಷಿ ಇಲಾಖೆಯ ವಿನಾಯಕ ರಾವ್ ಬೇಳೂರು, ಎಪಿಎಂಸಿ ಮಾಜಿ ಅಧ್ಯಕ್ಷರಾದ ಚೇತನ್‌ರಾಜ್ ಕಣ್ಣೂರು, ಲೇಖಕ ಪ್ರಭಂಧ ಅಂಬುತೀರ್ಥ, ವಿದೂಷಿ ವಸುಧಾ ಶರ್ಮ, ಇನ್ನೂ ಹಲವಾರು ಗಣ್ಯರು ಪಾಲ್ಗೊಂಡಿದ್ದು ಶೃತಿ ಶ್ರೀನಾಥ್ ಹಾಗೂ ಅನಿತಾ ಸಂಗಡಿಗರು ವಿಶೇಷ ಸಂಗೀತ ಕಾರ್ಯಕ್ರಮ ನೆಡೆಸಿಕೊಟ್ಟರು.

# ದೇವಸ್ಥಾನದ ಕಲ್ಯಾಣ ಮಂಟಪ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ಸಹಕಾರ ನೀಡುತ್ತೇವೆ

**ಸಾಗರ :** ಸ್ಥಳೀಯವಾಗಿ ಸಂಘಟನೆ ಸದೃಢಗೊಳ್ಳಲು ಇಂತಹ ದೇವಸ್ಥಾನಗಳ ಅಗತ್ಯ ಹೆಚ್ಚು ಇದೆ. ಪರಸ್ಪರ ಚರ್ಚಿಸಿ ನಮ್ಮ ಬಡಾವಣೆ ಅಭಿವೃದ್ದಿಪಡಿಸಿಕೊಳ್ಳಲು ಇಂತಹ ಧಾರ್ಮಿಕ ಸ್ಥಳಗಳು ಸೂಕ್ತ ವೇದಿಕೆ ಕಲ್ಪಿಸುತ್ತದೆಎಂದು ಶಾಸಕ ಹಾಗೂ ಅರಣ್ಯ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು ತಿಳಿಸಿದರು.

ಇಲ್ಲಿನ ಭೀಮನಕೋಣೆ ರಸ್ತೆಯ ಗಾಂಧಿನಗರ ನಾಗರೀಕ ಸಮಿತಿ ವತಿಯಿಂದ ಏರ್ಪಡಿಸಿದ್ದ ಪ್ರಸಾದ ಗಣಪತಿ ದೇವಸ್ಥಾನದ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಪ್ರಸಾದ ಗಣಪತಿ ದೇವಸ್ಥಾನ ಅತ್ಯಂತ ಶಕ್ತಿಶಾಲಿ ಧಾರ್ಮಿಕ ಕೇಂದ್ರವಾಗಿದೆ. ದೇವಸ್ಥಾನದ ಸಮಗ್ರ ಅಭಿವೃದ್ದಿಗೆ ಅಗತ್ಯ ಸೌಲಭ್ಯ ಕಲ್ಪಿಸಲಾಗುತ್ತದೆ. ಭೀಮನಕೋಣೆ ರಸ್ತೆಯನ್ನು ಅಗಲೀಕರಣಗೊಳಿಸಲು ಸುಮಾರು 5.50 ಕೋಟಿ ರೂ. ನೀಡಿದೆ. ಅಗಲೀಕರಣ ಸಂದರ್ಭದಲ್ಲಿ ದೇವಸ್ಥಾನಕ್ಕೆ ಅಗತ್ಯ ಸೌಲಭ್ಯ ಕಲ್ಪಿಸಲಾಗುತ್ತದೆ. ಮುಂದಿನ ದಿನಗಳಲ್ಲಿ ದೇವಸ್ಥಾನದ ಕಲ್ಯಾಣ ಮಂಟಪ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಮೂಲೆಗದ್ದೆ ಸದಾನಂದ ಶಿವಯೋಗಾಶ್ರಮದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ, ಧಾರ್ಮಿಕ ಕಾರ್ಯಕ್ರಮಗಳು ಮನಸ್ಸನ್ನು ಆಧ್ಯಾತ್ಮದಲ್ಲಿ ನೆಲೆ ನಿಲ್ಲಲು ಸಹಕಾರಿಯಾಗಿದೆ. ಭಾರತದಲ್ಲಿ ನಾವು ಜನ್ಮ



ತೆಳೆದಿದ್ದೇ ಅತ್ಯಂತ ಪುಣ್ಯದ ಸಂಗತಿಯಾಗಿದೆ. ದೇವರು ಧರ್ಮ ಎಲ್ಲವೂ ಮನುಷ್ಯನ ಸನ್ಮಾರ್ಗಕ್ಕೆ ಪ್ರೇರಣೆಯಾಗಿದೆ. ನಮ್ಮೊಳಗಿನ ಮಾನವೀಯತೆಯನ್ನು ರಕ್ಷಿಸಿಕೊಳ್ಳುವ ಜೊತೆಗೆ ಪರೋಪಕಾರ ಮನೋಭಾವ ಬೆಳೆಸಿಕೊಂಡಾಗ ಮನುಷ್ಯಜನ್ಮ ಸಾರ್ಥಕವಾಗುತ್ತದೆ ಎಂದು ಹೇಳಿದರು.ಸೇವಾ ಸಮಿತಿಯ ಆನಂದ ಗೌಡ, ಬಸವರಾಜ್ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ನಗರಸಭೆ ಅಧ್ಯಕ್ಷೆ ಮೈತ್ರಿ ಪಾಟೀಲ್, ಉಪಾಧ್ಯಕ್ಷೆ ಸವಿತಾ ವಾಸು, ಸದಸ್ಯರಾದ ವಿ.ಮಹೇಶ್, ಬಿ.ಎಚ್.ಲಿಂಗರಾಜ್, ಗಣಪತಿ ಮಂಡಗಳಲೆ, ಅರವಿಂದ ರಾಯ್ಕರ್, ಪರಿಮಳ, ಬಸವರಾಜ್, ಪ್ರಶಾಂತ್ ರಾಯ್ ಇನ್ನಿತರರು ಉಪಸ್ಥಿತರಿದ್ದರು. ಪ್ರತೀಕ್ಷಾ ಪ್ರಾರ್ಥಿಸಿದರು. ತಾರಾನಾಥ ಸ್ವಾಗತಿಸಿದರು. ಮಂಜುನಾಥ ಶೇಟ್ ನಿರೂಪಿಸಿದರು.

# ಗಂಗಾಮತ ಸಂಘಟನೆ ಇನ್ನಷ್ಟು ಗಟ್ಟಿಯಾಗಬೇಕು

ಶಿವಮೊಗ್ಗ: ರಾಜ್ಯದಲ್ಲಿ ದೊಡ್ಡ ಸಮುದಾಯಗಳಲ್ಲೊಂದಾದ ಗಂಗಾಮತ ಸಮುದಾಯ ರಾಜ್ಯ ಮಟ್ಟದ ವಧು–ವರರ ಸಮಾವೇಶವನ್ನು ಆಯೋಜಿಸಿದ್ದು ಇದೊಂದು ಅದ್ಭುತವಾದ ಕಾರ್ಯಕವಾಗಿದೆ. ಗಂಗಾಮತ ಸಂಘಟನೆ ಇನ್ನಷ್ಟು ಗಟ್ಟಿಯಾಗಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದರು.

ಮಾಧವ ಮಂಗಲ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ಗಂಗಾಮತ ನೌಕರರ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು, ಶಿವಮೊಗ್ಗ ಜಿಲ್ಲಾ ಗಂಗಾಮತ ನೌಕರರ ಕ್ಷೇಮಾಭಿವೃದ್ಧಿ ಸಂಘ, ಶಿವಮೊಗ್ಗ ಜಿಲ್ಲಾ ಗಂಗಾಮತ ಸಂಘ ಹಾಗೂ ಶಿವಮೊಗ್ಗ ಜಿಲ್ಲಾ ಮೊಗವೀರ ಮಹಾಜನ ಸಂಘಗಳ ಸಂಯುಕ್ತಾಶ್ರಯದಲ್ಲಿ ಆಯೋಜನೆಗೊಂಡ ರಾಜ್ಯ ಮಟ್ಟದ ವಧು–ವರರ ಸಮಾವೇಶವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಸಂಬಂಧಗಳು ಜಾತಿ ಮೀರಿ ಹೋಗುತ್ತಿವೆ. ಇಂಥಹ ಸಮಾವೇಶಗಳನ್ನು ಹಮ್ಮಿಕೊಳ್ಳುವುದರ ಮೂಲಕ ಸಂಘಟನೆಗಳನ್ನು ಬಲಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದ ಅವರು ಸರ್ಕಾರಗಳು ಇವುಗಳಿಗೆ ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಸಹಾಯ ಮಾಡಲು ಮುಂದಾಗಬೇಕು. ಇಲ್ಲಿ ಕಂಕಣ ಬಲ ಕೂಡುವ ವಧು–ವರರಿಗೆ ಭಗವಂತ ಒಳ್ಳೆಯದನ್ನು ಮಾಡಲಿ. ಒಳ್ಳೆಯ ಸಂಬಂಧ ಬೇಳೆಯಲಿ ಎಂದು ಹಾರೈಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶಾಸಕ ಎಸ್.ಎನ್.ಚನ್ನಬಸಪ್ಪ ಮಾತನಾಡಿ, ಗಂಗಾಮತದ ಎಲ್ಲರೂ ವಧು–ವರರ ಸಮಾವೇಶ ಮಾಡುವುದರ ಮೂಲಕ ಸಮಾಜಮುಖಿ ಕಾರ್ಯ ಮಾಡುತ್ತಿದ್ದೀರಿ. ಹಿಂದೂ ಸಮಾಜವನ್ನು ಸಧೃಡಗೊಳಿಸುವಲ್ಲಿ ಇಂಥಹ ಸಮಾವೇಶಗಳು ಸಹಕಾರಿಯಾಗುತ್ತವೆ. ಅನೇಕರಿಗೆ ಜೀವನ ಕೊಡುವ ಕೆಲಸ ಇದಾಗಿದೆ ಎಂದು ಶ್ಲಾಘಿಸಿದರು. ಆಹಾರಕ್ಕೋಸ್ಕರ ಬಡಿದಾಡುತ್ತಿರುವ ಇಂದಿನ ಸಂದರ್ಭದಲ್ಲಿ ಅವೆಲ್ಲವನ್ನೂ ಮೀರಿ ಹಿಂದೂ ಸಂಘಟನೆಗೆ ಮುಂದಾಗಿರುವುದು ಪ್ರೇರೇಪಣಾದಾಯಕ ಸಂಗತಿಯಾಗಿದೆ. ಗಂಗಾಮತ ಸಮಾಜದಲ್ಲಿ ತಮ್ಮನ್ನು ತಾವು ರಾಷ್ಟ್ರಕ್ಕೆ ಸಮರ್ಪಣೆಗೊಳಸಿಕೊಂಡವರು ಅನೇಕರಿದ್ದಾರೆ. ಉದಾಹರಣೆಗೆ ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಶಿವಮೊಗ್ಗದ ಗಾಂಧಿ ಬಸಪ್ಪನವರು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿ ಸಂಘಟನೆಯಲ್ಲಿ ರಾಷ್ಟ್ರ ಮಟ್ಟದಲ್ಲಿ ಸೇವೆ ಸಲ್ಲಿಸಿ ಈಗ ಬಿಜೆಪಿ ಅವರಿಗೆ ಎಮ್.ಎಲ್.ಸಿ.ಸ್ಥಾನ ನೀಡಿದ ಎನ್.ರವಿಕುಮಾರ್ ಹೀಗೆ ಪಟ್ಟಿ ಬೆಳೆಯುತ್ತ ಹೋಗುತ್ತದೆ ಎಂದರಲ್ಲದೆ ಹಿರಿಯರು ಪರಂಪರೆ ಹಾಕಿಕೊಟ್ಟಿದ್ದಾರೆ. ಸಂಸ್ಕಾರಕ್ಕೆ ಪೂರಕವಾದ, ಪರಂಪರೆ ಉಳಿಸುವ ಕಾರ್ಯ ಗಂಗಾಮತದವರಿಂದಾಗುತ್ತಿದೆ ಎಂದು ಚನ್ನಬಸಪ್ಪ ಪ್ರಶಂಸಿಸಿದರು.

# ಚಿನ್ನದ ಬೆಲೆಯಲ್ಲಿ ಹಾವು ಏಣಿ ಆಟ– ತಲೆ ಬಿಸಿ ಮಾಡಿದ ಬಂಗಾರ

ಭಾರತದಲ್ಲಿ ಚಿನ್ನದ ಬೆಲೆ ಹಾವು ಏಣಿ ಆಟದಂತಾಗಿದೆ. ಕಳೆದ ಎರಡು ದಿನ ಕುಸಿತ ಕಂಡ ಚಿನ್ನದ ದರ ಇಂದು ಮತ್ತೆ ಹೆಚ್ಚಾಗಿದೆ. ಇದರಿಂದಾಗಿ ಚಿನ್ನಾಭರಣ ಖರೀದಿದಾರರಿಗೆ ಇಂದಿನ ಬೆಲೆ ನಿರಾಸೆಯನ್ನುಂಟು ಮಾಡಿದೆ. ಹಾಗಾದರೆ ಬೆಂಗಳೂರು ಸೇರಿದಂತೆ ಭಾರತದಾದ್ಯಂತ ಇಂದಿನ ಚಿನ್ನ ಬೆಳ್ಳಿ ದರ ಯಾವ ರೀತಿಯಾಗಿದೆ ಎಂದು ತಿಳಿಯೋಣ.

ಭಾರತದಲ್ಲಿಂದು (ಏಪ್ರಿಲ್ 16) 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,150 ರೂಪಾಯಿ ಇದೆ. ಕಳೆದ ದಿನ ಇದು 87,200 ರೂಪಾಯಿ ಇತ್ತು. ಇನ್ನೂ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,170 ಇದ್ದರೆ, ಕಳೆದ ದಿನ 95,180 ರೂಪಾಯಿ ಇತ್ತು. ಹಾಗೆಯೇ 18 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 72,130 ರೂಪಾಯಿ ಇದ್ದರೆ ಕಳೆದ ದಿನ 71,350 ರೂಪಾಯಿ ಇತ್ತು. ಬೆಳ್ಳಿ ಬೆಲೆಯೂ ಕೂಡ ಇಂದು (ಏಪ್ರಿಲ್ 16) ಒಂದು ಕಿಲೋಗ್ರಾಂ 1,00,000 ರೂಪಾಯಿ ತಲುಪಿದೆ.

ಚಿನ್ನದ ಬೆಲೆ ನಿರಂತರವಾಗಿ ಹೀಗೆ ಹೆಚ್ಚಾಗುತ್ತಿದ್ದರೆ ಲಕ್ಷ ದಾಟುವುದು ಅನುಮಾನವೇ ಇಲ್ಲ. ಇದರಿಂದಾಗಿ



ಗ್ರಾಹಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಯಾಕೆಂದರೆ ಮದುವೆ ಮತ್ತು ಶುಭ ಕಾರ್ಯಗಳಿಗೆ ಮುಂದಿನ ದಿನಗಳಲ್ಲಿ ಶುಭ ಮುಹೂರ್ತಗಳು ಆರಂಭವಾಗಲಿವೆ. ಅಲ್ಲದೆ ಇನ್ಮುಂದೆ ಹಬ್ಬಗಳೂ ಬರಲಾರಂಭಿಸುತ್ತವೆ. ಇಂತಹ ಸಮಯದಲ್ಲಿ ಚಿನ್ನದ ಬೆಲೆ ಗಗನಕ್ಕೇರುತ್ತಿರುವುದು ಗ್ರಾಹಕರನ್ನು ಚಿಂತೆಗೀಡು ಮಾಡಿದೆ.

ಬೆಂಗಳೂರಿನಲ್ಲಿಂದು (ಏಪ್ರಿಲ್ 16) 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,150 ಇದೆ. ಕಳೆದ ದಿನ ಇದು 87,200 ರೂಪಾಯಿ ಇತ್ತು. 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,170 ಇದೆ. ಕಳೆದ ದಿನ 95,180 ರೂಪಾಯಿ ಇತ್ತು. ಹಾಗೆಯೇ 18 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 72,130 ರೂಪಾಯಿ ಇದ್ದರೆ ಕಳೆದ ದಿನ 71,350 ರೂಪಾಯಿ ಇತ್ತು.

ಭಾರತದ ವಿವಿಧ ನಗರಗಳಲ್ಲಿಂದು (ಏಪ್ರಿಲ್ 16) ಚಿನ್ನದ ಬೆಲೆ:

* ದೆಹಲಿ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,320 ರೂಪಾಯಿ ಇದ್ದರೆ 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,300 ರೂಪಾಯಿ ಇದೆ.
* ಮುಂಬೈ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,170 ರೂಪಾಯಿ ಇದ್ದರೆ 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,150 ರೂಪಾಯಿ ಆಗಿದೆ.
* ಚೆನ್ನೈ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,170 ರೂಪಾಯಿ ಇದ್ದರೆ 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,150 ರೂಪಾಯಿ ಆಗಿದೆ.
* ಕೋಲ್ಕತ್ತಾ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,170 ರೂಪಾಯಿ ಇದ್ದರೆ 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,150 ರೂಪಾಯಿ ಆಗಿದೆ.
* ಹೈದರಾಬಾದ್ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,170 ರೂಪಾಯಿ ಇದ್ದರೆ 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,150 ರೂಪಾಯಿ ಇದೆ.
* ಭುವನೇಶ್ವರ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 96,170 ರೂಪಾಯಿ ಇದ್ದರೆ 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 88,150 ರೂಪಾಯಿ ಇದೆ.

# ಮೋದಿ 10 ವರ್ಷದಲ್ಲಿ 20 ಕೋಟಿ ಉದ್ಯೋಗ ಕೊಡಬೇಕಿತ್ತು, ಆದರೆ ಪರಮ ಸುಳ್ಳು ಹೇಳಿ ವಂಚನೆ: ಸಿದ್ದರಾಮಯ್ಯ ವಾಗ್ದಾಳಿ



ಕಲ್ಬುರ್ಗಿ : ವರ್ಷಕ್ಕೆ 2 ಕೋಟಿ ಉದ್ಯೋಗ ಕೊಡ್ತೇನಿ ಅಂದಿದ್ದ ಮೋದಿ 10 ವರ್ಷದಲ್ಲಿ 20 ಕೋಟಿ ಉದ್ಯೋಗ ಕೊಡಬೇಕಿತ್ತು. ಆದರೆ 20 ಲಕ್ಷ ಉದ್ಯೋಗವನ್ನೂ ಕೊಡದೆ ಪರಮ ಸುಳ್ಳು ಹೇಳಿ ಯುವ ಜನರನ್ನು ವಂಚಿಸಿದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಸಮಾಧನ ವ್ಯಕ್ತಪಡಿಸಿದರು.

ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಯುವಕ ಯುವತಿಯರಿಗೆ ಆಯೋಜಿಸಿದ್ದ ಉದ್ಯೋಗ ಮೇಳವನ್ನು ಉದ್ಘಾಟಿಸಿ ಯುವ ಪದವೀಧರರಿಗೆ ನೇಮಕಾತಿ ಪತ್ರವನ್ನು ವಿತರಿಸಿ ಮಾತನಾಡಿದ ಸಿದ್ದರಾಮಯ್ಯ ಅವರು, ನಾವು ನುಡಿದಂತೆ ನಡೆಯುತ್ತಾ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಇದರಲ್ಲಿ ಯುವ ನಿಧಿ ಕಾರ್ಯಕ್ರಮ ಕೂಡ ಸೇರಿದೆ. ಭತ್ಯೆ ಜೊತೆಗೆ ಕೌಶಲ್ಯ ತರಬೇತಿ ನೀಡಿ ಉದ್ಯೋಗವನ್ನೂ ಒದಗಿಸುತ್ತಿದ್ದೇವೆ ಎಂದರು. ಮಾರುಕಟ್ಟೆ ಆಧಾರಿತ ಕೌಶಲ್ಯ ನೀಡಿ ಉದ್ಯೋಗ ಸೃಜಿಸಲು ಸಚಿವ ಶರಣ ಪ್ರಕಾಶ್ ಅವರಿಗೆ ಸೂಚಿಸಿದ್ದೇನೆ. ಹೀಗಾಗಿ ನೋಂದಾಯಿತರಾದ ಎಲ್ಲರಿಗೂ ಉದ್ಯೋಗ ಸಿಕ್ಕೇ ಸಿಗುತ್ತದೆ ಎಂದು ಭರವಸೆ ನೀಡಿದರು.

ಉದ್ಯೋಗ ಕೊಡುವವರು, ಉದ್ಯೋಗ ಪಡೆಯುವವರನ್ನು ಒಟ್ಟಿಗೇ ಒಂದೇ ವೇದಿಕೆಯಲ್ಲಿ ತರುವ ಮೂಲಕ ಉದ್ಯೋಗಗಳನ್ನು ಒದಗಿಸುವುದಕ್ಕಾಗಿ ವಿಭಾಗಾವಾರು ಉದ್ಯೋಗಮೇಳಗಳನ್ನು ಸಂಘಟಿಸುತ್ತಿದ್ದೇವೆ ಎಂದರು.

ಕೇಂದ್ರದಲ್ಲಿ ಹಾಗೂ ರಾಜ್ಯದಲ್ಲಿ ಹೂಡಿಕೆ ಹೆಚ್ಚಾದಷ್ಟೂ ಉದ್ಯೋಗ ಸೃಷ್ಟಿ ಹೆಚ್ಚಾಗುತ್ತದೆ. ಕೇಂದ್ರ ಸರ್ಕಾರ ದೇಶದ ಯುವ ಜನತೆಯನ್ನು ಸಂಪೂರ್ಣ ನಿರ್ಲಕ್ಷಿಸುತಿದೆ. ಆದರೆ ನಮ್ಮ ಸರ್ಕಾರ ಯುವ ಜನತೆ ಕೈಗೆ ಉದ್ಯೋಗ ನೀಡಿ ಅವರ ಬದುಕು ಕಟ್ಟುವ ಕೆಲಸ ಮಾಡುತ್ತಿದೆ ಎಂದರು.

ನಿರುದ್ಯೋಗ ಸಮಸ್ಯೆ ಬಗೆಹರಿಸುವುದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜವಾಬ್ದಾರಿಯಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ಅಭಿಪ್ರಾಯ ಪಟ್ಟರು. ಪ್ರಧಾನಿ ನರೇಂದ್ರ ಮೋದಿ ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ನೀಡುತ್ತೇವೆ ಎಂದು ವಾಗ್ದಾನ ಮಾಡಿದ್ದರು. ಈ ಹತ್ತು ವರ್ಷಗಳ ಅವರ ಅಧಿಕಾವಾಧಿಯಲ್ಲಿ ಇಪ್ಪತ್ತು ಲಕ್ಷ ಉದ್ಯೋಗ ಕೊಡುವುದು ಅವರಿಗೆ ಆಗಿಲ್ಲ. ಇದು ಅವರೇ ಹೇಳಿದ ಮಾತಿದು. ಆದರೆ ಉದ್ಯೋಗ ನೀಡದೆ ಸುಳ್ಳು ಹೇಳಿದ್ದಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಐದು ಗ್ಯಾರಂಟಿ ಜಾರಿಗೊಳಿಸುವುದಾಗಿ ಭರವಸೆ ನೀಡಿದ್ದೆವು. ಯುವನಿಧಿ ಯೋಜನೆಯಡಿಯಲ್ಲಿ ಪದವಿ ನಿರುದ್ಯೋಗಿ ಯುವಕರಿಗೆ ರೂ 2000 ಹಾಗೂ ಡಿಪ್ಲೋಮಾ ಪಾಸ್ ಆದವರಿಗೆ ರೂ 1500 ಗೌರವಧನ ( ಪ್ರತಿತಿಂಗಳು) ಎರಡು ವರ್ಷದ ಅವಧಿಯವರೆಗೆ ಕೊಡುತ್ತಿದ್ದೇವೆ. ರಾಜ್ಯ ಸರ್ಕಾರ ಕೌಶಲ್ಯ ತರಬೇತಿ ನೀಡಲು ಕೌಶಲ್ಯಾ ಅಭಿವೃದ್ಧಿ ಇಲಾಖೆ ತೆರೆದು ಅದರಡಿಯಲ್ಲಿ ಮಾರುಕಟ್ಟೆಯ ಬೇಡಿಕೆ ಅನ್ವಯ ತರಬೇತಿ ನೀಡಲಾಗುತ್ತಿದೆ. ಇಂದು ಉದ್ಯೋಗ ಮೇಳದಲ್ಲಿ ಉದ್ಯೋಗ ಸಿಗದಿರುವವರು ನಿರಾಸೆರಾಗಬೇಡಿ ನಿಮಗೆ ಮುಂದೊಂದು ದಿನ ಉದ್ಯೋಗ ಕೊಡಿಸುತ್ತೇವೆ.

# ಉದ್ಯೋಗ ಮೇಳ: ಸರ್ಕಾರ 1 ಲಕ್ಷಕ್ಕೂ ಹೆಚ್ಚಿನ ಉದ್ಯೋಗ ನೀಡಲಿದೆ: ಸಿಎಂ ಸಿದ್ದರಾಮಯ್ಯ



ಕಲಬುರಗಿ : ಕಲ್ಯಾಣ ಕರ್ನಾಟಕದ ಪ್ರಮುಖ ಜಿಲ್ಲೆಯಾಗಿರುವ ಕಲಬುರಗಿಯಲ್ಲಿ ಇಂದು ಬೃಹತ್ ·ಉದ್ಯೋಗ ಮೇಳ ಆಯೋಜಿಸಲಾಗಿದೆ. ಒಂದು ಲಕ್ಷಕ್ಕೂ ಹೆಚ್ಚು ಉದ್ಯೋಗ ಅವಕಾಶಗಳು ಇಲ್ಲಿವೆ. ಕಲ್ಯಾಣ ಕರ್ನಾಟಕದ ಉದ್ಯೋಗ ಆಕಾಂಕ್ಷಿಗಳಿಗೆ ಉದ್ಯೋಗ ಕಲ್ಪಿಸಲು ಸರ್ಕಾರ ಮೇಳ ಹಮ್ಮಿಕೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿ ಮಾತನಾಡಿದರು.

ಇದಕ್ಕು ಮೊದಲು ಕಲಬುರಗಿ ಏರ್ಪೋರ್ಟ್ಗೆ ಬಂದಿಳಿದ ಸಿಎಂ ಸಿದ್ದರಾಮಯ್ಯ ಅವರು ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು. ಉದ್ಯೋಗ ಮೇಳಗಳನ್ನು ಏರ್ಪಡಿಸುವ ಮೂಲಕ ಯುವಜನತೆಗೆ ಉದ್ಯೋಗ ನೀಡುವುದು ನಮ್ಮ ಸರ್ಕಾರದ ಬದ್ಧತೆ. ವಿಭಾಗೀಯ ಮಟ್ಟದ ಉದ್ಯೋಗ ಮೇಳವನ್ನು ಕಲಬುರ್ಗಿಯಲ್ಲಿ ಇಂದು ಏರ್ಪಡಿಸಲಾಗಿದೆ. ಮೈಸೂರು ಹಾಗೂ ಹುಬ್ಬಳ್ಳಿ, ಧಾರವಾಡದಲ್ಲಿಯೂ ಉದ್ಯೋಗ ಮೇಳವನ್ನು ಏರ್ಪಡಿಸಲಾಗುತಿದೆ. ಯುವನಿಧಿ ಯೋಜನೆಯನ್ನು ಜಾರಿ ಮಾಡಿದ್ದು, ನಮಗೆ ನಿರುದ್ಯೋಗದ ಸಮಸ್ಯೆ ನಿವಾರಣೆಯ ಉದ್ದೇಶವಿದೆ. ಉದ್ಯೋಗವನ್ನು ಕೊಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕದ ಯುವಜನರ ಕೌಶಲ್ಯದ ಕೈಗಳಿಗೆ ಉದ್ಯೋಗದ ಬಲ ತುಂಬಲು ಇಂದು ಕಲಬುರಗಿಯಲ್ಲಿ ಬೃಹತ್ ಉದ್ಯೋಗ ಮೇಳವನ್ನು ಆಯೋಜನೆ ಮಾಡಲಾಗಿದೆ. ರಾಜ್ಯದ ಪ್ರತಿಷ್ಠಿತ ವಿವಿಧ ಕಂಪನಿಗಳಲ್ಲಿ 1 ಲಕ್ಷಕ್ಕೂ ಅಧಿಕ ಉದ್ಯೋಗಾವಕಾಶಗಳು ಲಭ್ಯವಿದ್ದು, ಕಲ್ಯಾಣ ಕರ್ನಾಟಕ ಭಾಗದ ಉದ್ಯೋಗಾಕಾಂಕ್ಷಿಗಳು ಈ ಅವಕಾಶದ ಸದುಪಯೋಗ ಪಡೆಯಬೇಕೆಂದು ಮುಖ್ಯಮಂತ್ರಿಗಳು ಕೋರಿದರು.

ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಮಹಾನಗರ ಪಾಲಿಕೆ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜಿವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಜಂಟಿಯಾಗಿ ಜಿಲ್ಲೆಯಲ್ಲಿ ಉದ್ಯೋಗ ಮೇಳೆ ಆಯೋಜಿಸಲಾಗಿದೆ. ಸಕಲ ವ್ಯವಸ್ಥೆಗಳನ್ನು ಇಲ್ಲಿ ಮಾಡಲಾಗಿದೆ. ಕಾರ್ಯಕ್ರಮದಲ್ಲಿ ಸಿಎಂ ಜೊತೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರ ಘನ ಉಪಸ್ಥಿತಿ ಇತ್ತು.

ಜಾತಿ ಗಣತಿ ವರದಿ ನಿರ್ಧಾರ ನಾಳೆ..

ಗುರುವಾರ ಸಾಮಾಜಿಕ, ಆರ್ಥಿಕ ಸಮೀಕ್ಷೆಯ ಕುರಿತು ಪ್ರತ್ಯೇಕವಾಗಿ ಸಚಿವ ಸಂಪುಟ ಸಭೆಯನ್ನು ಕರೆಯಲಾಗಿದ್ದು, ಈ ಬಗ್ಗೆ ಚರ್ಚೆ ಮಾಡಲಾಗುವುದು. ಶಾಸಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ನಾಳೆ ಅಂತಿಮವಾಗಿ ತೀರ್ಮಾನ ಮಾಡಲಾಗುವುದು. ಸಾಮಾಜಿಕ, ಆರ್ಥಿಕ ಸಮೀಕ್ಷೆ ಇದಾಗಿದ್ದು, ಯಾವ ಸಮುದಾಯದವರಿಗೂ ಅನ್ಯಾಯವಾಗಲು ನಾವು ಬಿಡುವುದಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

ದಾವಣಗೆರೆಯಲ್ಲಿ ಅನೈತಿಕ ಸಂಬಂಧದ ಆರೋಪದ ಮೇಲೆ ನಡುರಸ್ತೆಯಲ್ಲಿ ಮಹಿಳೆಯ ಮೇಲೆ ಹಲ್ಲೆ ನಡೆಸಿರುವುದು ಅಮಾನವೀಯ, ಅಪರಾಧ. ಯಾರೇ ತಪ್ಪು ಮಾಡಿದರೂ ಕೂಡ ಕ್ರಮ ಖಚಿತ, ಕಾನೂನು ಉಲ್ಲಂಘಿಸಿದರೆ ಯಾರು ಎಷ್ಟೇ ಪ್ರಬಲವಾಗಿದ್ದರೂ, ಬಲಿ ಹಾಕುತ್ತೇವೆ ಎಂದು ಅವರು ಗುಡುಗಿದರು.

ನ್ಯಾಷನಲ್ ಹೆರಾಲ್ಡ್ ಪ್ರಕರಣ: ಸಿಎಂ ಪ್ರತಿಕ್ರಿಯೆ

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ನಮ್ಮ ನಾಯಕಿ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿಯವರ ಮೇಲೆ ಚಾರ್ಜ್ ಶೀಟ್ ಹಾಕಲಾಗಿದೆ. ಬಿಜೆಪಿಯವರು ರಾಜಕೀಯ ಉದ್ದೇಶದಿಂದ ಇದನ್ನು ಮಾಡುತ್ತಿದ್ದಾರೆ. ನ್ಯಾಷನಲ್ ಹೆರಾಲ್ಡ್ ಪತ್ರಿಕೆ ನಿನ್ನೆ ಮೊನ್ನೆ ಪ್ರಾರಂಭವಾಗಿಲ್ಲ. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಯವರ ಆಸ್ತಿ ಮುಟ್ಟುಗೋಲು ಹಾಕುವುದು, ಚಾರ್ಜ್ ಶೀಟ್ ಹಾಕುವುದು ರಾಜಕೀಯ ದ್ವೇಷದಿಂದ ಮಾಡುತ್ತಿದ್ದಾರೆ. ಇದೊಂದು ದ್ವೇಷ ರಾಜಕೀಯ ಎಂದು ಅವರು ಹರಿಹಾಯ್ದರು.

# ಬಳ್ಳಾರಿಯಲ್ಲಿ ಡಿಸೆಂಬರ್‌ನಲ್ಲಿ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ

ಬಳ್ಳಾರಿ : ಮಂಡ್ಯದಲ್ಲಿ 87ನೇ ಅಖಿಲ ಭಾರತ 87ನೇ ಕನ್ನಡ ಸಾಹಿತ್ಯ ಸಮ್ಮೇಳನ ಅದ್ದೂರಿಯಾಗಿ, ಯಶಸ್ವಿಯಾಗಿ ನಡೆದಿತ್ತು. ಈ ಸಮ್ಮೇಳನದಲ್ಲಿಯೇ 88ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಗಡಿನಾಡು ಬಳ್ಳಾರಿಯಲ್ಲಿ ನಡೆಸಲು ತೀರ್ಮಾನ ಕೈಗೊಳ್ಳಲಾಗಿತ್ತು. ಈ ವರ್ಷದ ಡಿಸೆಂಬರ್ ತಿಂಗಳಲ್ಲಿ ಬಳ್ಳಾರಿಯಲ್ಲಿ ಅಖಿಲ ಭಾರತ 88ನೇ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜನೆ ಮಾಡಲಾಗುತ್ತದೆ ಎಂದು ಕಸಾಪ ರಾಜ್ಯಾಧ್ಯಕ್ಷ ನಾಡೋಜ ಡಾ. ಮಹೇಶ್ ಜೋಶಿ ಹೇಳಿದ್ದಾರೆ.



ಬಳ್ಳಾರಿ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಖಿಲ ಭಾರತ 88ನೇ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜನೆಯ ಕುರಿತು ಪೂರ್ವಭಾವಿ ಸಭೆಯನ್ನು ಅವರು ನಡೆಸಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಎಸ್ಪಿ ಡಾ. ವಿ. ಜೆ ಶೋಭಾರಾಣಿ, ಕನ್ನಡ ಸಾಹಿತ್ಯ ಪರಿಷತ್ತಿನ ಕೋಶಾಧ್ಯಕ್ಷ ಪಟೇಲ್ ಪಾಂಡು, ಜಿಲ್ಲಾಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಡಾ. ಮಹೇಶ್ ಜೋಶಿ ಮಾತನಾಡಿ, ವಿಬರುವ ಡಿಸೆಂಬರ್ ತಿಂಗಳಲ್ಲಿ ಬಳ್ಳಾರಿಯಲ್ಲಿ ಅಖಿಲ ಭಾರತ 88ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಲಾಗುತ್ತಿದ್ದು, ಕನ್ನಡದ ನಾಡು–ನುಡಿ, ಭಾಷಾಭಿಮಾನ, ಕನ್ನಡದ ಅಸ್ಮಿತೆಯನ್ನು ಇನ್ನಷ್ಟು ಬೆಳೆಸುವ ನಿಟ್ಟಿನಲ್ಲಿ ಕನ್ನಡದ ತೇರನ್ನು ಎಳೆಯಲು ನಾವೆಲ್ಲರೂ ಸಿದ್ಧರಾಗೋಣಹಿ ಎಂದು ಕರೆ ನೀಡಿದರು.

ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜನೆ: ವಿಕನ್ನಡ ಸಾಹಿತ್ಯ ಸಮ್ಮೇಳನ ಕನ್ನಡಿಗರಿಗೆ ಮತ್ತು ಸಾಹಿತ್ಯ ಪ್ರೇಮಿಗಳಿಗೆ ಹಬ್ಬ. ಕನ್ನಡದ ಇತಿಹಾಸವನ್ನು ಪ್ರಚುರಪಡಿಸುವುದು ಮತ್ತು ಭಾಷೆಯನ್ನು ಬೆಳೆಸುವುದು ಸಮ್ಮೇಳನದ ಮುಖ್ಯ ಉದ್ದೇಶವಾಗಿದೆ. ಮುಖ್ಯವಾಗಿ ಸಮ್ಮೇಳನಗಳಲ್ಲಿ ಕನ್ನಡ ನಾಡು ನುಡಿಗೆ ಸಂಬಂಧಿಸಿದಂತೆ, ಭಾಷೆ ಬೆಳವಣಿಗೆ, ಗಡಿ ಭಾಗದ ಶಾಲಾ ವಿಚಾರಗಳ ಸಂಬಂಧಿಸಿದಂತೆ ಹಲವು ನಿರ್ಣಯಗಳನ್ನು ತೆಗೆದುಕೊಂಡು ಸರ್ಕಾರದ ಮುಂದಿಡಲಾಗುತ್ತದೆಹಿ ಎಂದರು.

ವಿಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ಈಗಾಗಲೇ 5 ಸಾಹಿತ್ಯ ಸಮ್ಮೇಳನಗಳು ನಡೆದಿವೆ. ಈ ಹಿಂದೆ 1920ರಲ್ಲಿ ಮೊದಲ ಬಾರಿಗೆ ಅಖಂಡ ಜಿಲ್ಲೆಯ ಹೊಸಪೇಟೆಯಲ್ಲಿ ರೊದ್ದ ಶ್ರೀನಿವಾಸ ರಾವ್ ಅವರ ಅಧ್ಯಕ್ಷತೆಯಲ್ಲಿ 6ನೇ ಸಮ್ಮೇಳನ ನಡೆಯಿತು. ಎರಡನೇ ಬಾರಿಗೆ ಬಾರಿಗೆ 1926ರ ಮೇ 22 ರಿಂದ 24ರ ವರೆಗೆ ಮೂರು ದಿನಗಳ ಕಾಲ 12ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಬಳ್ಳಾರಿ ನಗರದಲ್ಲಿ ನಡೆದಿತ್ತು. ಇದರ ಅಧ್ಯಕ್ಷತೆಯನ್ನು ವಚನ ಪಿತಾಮಹ ಫಕೀರಪ್ಪ ಗುರುಬಸಪ್ಪ ಹಳಕಟ್ಟಿ ಅವರು ವಹಿಸಿದ್ದರುಹಿ ಎಂದು ಹೇಳಿದರು.

12 ವರ್ಷಗಳ ನಂತರ ಮೂರನೇ ಬಾರಿಗೆ 1938ರ ಡಿ.29 ರಿಂದ 31ರ ವರೆಗೆ 23ನೇ ಕನ್ನಡ ಸಾಹಿತ್ಯ ಸಮ್ಮೇಳನ ರಂಗನಾಥ್ ದಿವಾಕರ್ ಅವರ ಅಧ್ಯಕ್ಷತೆಯಲ್ಲಿ ನಡೆದಿತ್ತು. ನಾಲ್ಕನೇ ಬಾರಿಗೆ ಹರಪನಹಳ್ಳಿಯಲ್ಲಿ 1947 ರಲ್ಲಿ ಸಿ. ಕೆ. ವೆಂಕಟರಾಮಯ್ಯನವರ ಅಧ್ಯಕ್ಷತೆಯಲ್ಲಿ ಸಮ್ಮೇಳನ ನಡೆಯಿತು. ಬಳಿಕ 11 ವರ್ಷಗಳ ನಂತರ 1958 ರ ಜ. 18 ರಿಂದ 20 ರ ವರೆಗೆ ವಿನಾಯಕ್ ಕೃಷ್ಣ ಗೋಕಾಕ್ ಅವರ ಅಧ್ಯಕ್ಷತೆಯಲ್ಲಿ ಬಳ್ಳಾರಿ ನಗರದ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ 5ನೇ ಬಾರಿಗೆ ಸಮ್ಮೇಳನ ನಡೆಯಿತು. ಈಗ 67 ವರ್ಷದ ಬಳಿಕ ಮರಳಿ ಸಾಹಿತ್ಯ ಸಮ್ಮೇಳನದ ಆತಿಥ್ಯ ದೊರೆತಿದೆ. 2025ರ ಡಿಸೆಂಬರ್ನಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿದೆಹಿ ಎಂದು ತಿಳಿಸಿದರು.

ಡಾ. ಮಹೇಶ್ ಜೋಶಿ ಮಾತನಾಡಿ, ವಿಇಂದಿನ ಪೀಳಿಗೆಗೆ ಮತ್ತು ಯುವಸಮುದಾಯಕ್ಕೆ ಕನ್ನಡ ಸಾಹಿತ್ಯ ಬಗೆಗಿನ ಅರಿವು ಮೂಡಿಸುವ ಉದ್ದೇಶದಿಂದ ರಾಜ್ಯ ಸರ್ಕಾರ, ರಾಜ್ಯ ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾಡಳಿತ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇವರುಗಳ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್ನಲ್ಲಿ ಬಳ್ಳಾರಿಯಲ್ಲಿ ಅದ್ದೂರಿಯಾಗಿ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗುತ್ತಿದೆಹಿ ಎಂದರು.

ವಿಡಿಸೆಂಬರ್ ತಿಂಗಳಲ್ಲಿ ವಾತಾವರಣ ಮತ್ತು ಹವಮಾನವು ಚೆನ್ನಾಗಿರುವುದರಿಂದ ಆಯೋಜನೆಗೆ ಯಾವುದೇ ರೀತಿಯಲ್ಲಿ ತೊಂದರೆಯಾಗುವುದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಶಯದಂತೆ ಸಾಹಿತ್ಯ ಸಮ್ಮೇಳನದಲ್ಲಿ ವಿವಿಧ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು, ಶಾಲಾ–ಕಾಲೇಜು, ವಸತಿ ನಿಲಯಗಳ ಮಕ್ಕಳು ಸೇರಿದಂತೆ ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕುಹಿ ಎಂದು ಹೇಳಿದರು.

ಜಿಲ್ಲೆಯ ಶಾಲಾ–ಕಾಲೇಜುಗಳಿಗೆ ಭೇಟಿ ನೀಡುತ್ತಿರುವ ಪರಿಷತ್ತಿನ ಪದಾಧಿಕಾರಿಗಳು, ವಿದ್ಯಾರ್ಥಿಗಳಿಗೆ ಸಮ್ಮೇಳನ ಕುರಿತು ಮನವರಿಕೆ ಮಾಡಿಕೊಡುವ ಮೂಲಕ ಸಮ್ಮೇಳನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಬಳ್ಳಾರಿಯಲ್ಲಿ ಡಿಸೆಂಬರ್ ತಿಂಗಳಲ್ಲಿ ಆಯೋಜಿಸಲಾಗುತ್ತಿರುವ ಅಖಿಲ ಭಾರತ 88ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಬಳ್ಳಾರಿ ಜಿಲ್ಲೆಯ ಮೊದಲ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದ ಸರ್. ಥಾಮಸ್ ಮುನ್ರೋ ಅವರ ಕುಟುಂಬಸ್ಥರನ್ನು ವಿಶೇಷ ಆಹ್ವಾನಿತರನ್ನಾಗಿ ಆಹ್ವಾನಿಸಲಾಗುವುದುಹಿ ಎಂದು ಡಾ. ಮಹೇಶ್ ಜೋಶಿ ತಿಳಿಸಿದರು.

ಬಳ್ಳಾರಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಮಾತನಾಡಿ, "ಜಿಲ್ಲೆಯಲ್ಲಿ ಆಯೋಜಿಸಲಾಗುತ್ತಿರುವ ಅಖಿಲ ಭಾರತ 88ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅದ್ದೂರಿಯಾಗಿ ಮತ್ತು ಅಚ್ಚು–ಕಟ್ಟಾಗಿ ಆಯೋಜಿಸುವ ಕುರಿತು ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಚರ್ಚಿಸಲಾಗುವುದು" ಎಂದರು.

# ಬೆಂಗಳೂರಿಗಿಂತ ಹೈದರಾಬಾದ್ ಬೆಸ್ಟ್: ಸಿಎಂ ಚಂದ್ರಬಾಬು ನಾಯ್ಡು!



ಬೆಂಗಳೂರು : ಹೈದರಾಬಾದ್ ಯಾವುದು ಉತ್ತಮ ಎನ್ನುವುದು ಮತ್ತೆ ಚರ್ಚೆಯ ಮುನ್ನೆಲೆಗೆ ಬಂದಿದೆ. ಬೆಂಗಳೂರಿಗೆ ಹೋಲಿಕೆ ಮಾಡಿದರೆ ಹೈದರಾಬಾದ್ ಹಲವು ಕ್ಷೇತ್ರಗಳಲ್ಲಿ ಇದೀಗ ಮುಂಚೂಣಿಯಲ್ಲಿ ಇದೆ ಎಂದು ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರೇ ಹೇಳಿರುವುದು ಇದೀಗ ಚರ್ಚೆಗೆ ಕಾರಣವಾಗಿದೆ. ಬೆಂಗಳೂರು ಹಾಗೂ ಹೈದರಾಬಾದ್ ಎರಡೂ ನಗರಗಳು ಐಟಿ ವಿಚಾರದಲ್ಲಿ ದಶಕಗಳಿಂದ ಪೈಪೋಟಿಯಲ್ಲಿವೆ. ಬೆಂಗಳೂರು ಹೈದರಾಬಾದ್ ನಗರವನ್ನು ಬೀಟ್ ಮಾಡಿ ಮುಂಚೂಣಿಯಲ್ಲಿ ಇದೆ. ಆದರೆ ಇದೀಗ ಸಿಎಂ ಚಂದ್ರಬಾಬು ನಾಯ್ಡು ಅವರ ಟ್ವೀಟ್ ಹೊಸ ಚರ್ಚೆಗೆ ಹಾಗೂ ಕನ್ನಡಿಗರ ಅಸಮಾಧಾನಕ್ಕೂ ಕಾರಣವಾಗಿದೆ. ಅದೇನು ಎನ್ನುವ ವಿವರ ಇಲ್ಲಿದೆ.

ಭಾರತದಲ್ಲಿ ಅದರಲ್ಲೂ ದಕ್ಷಿಣ ಭಾರತದಲ್ಲಿ ಕರ್ನಾಟಕದ ರಾಜಧಾನಿ ಬೆಂಗಳೂರು ಹಾಗೂ ಆಂಧ್ರಪ್ರದೇಶ – ತೆಲಂಗಾಣದ ರಾಜಧಾನಿ ಹೈದರಾಬಾದ್ ಪರಸ್ಪರ ಪೈಪೋಟಿಯಲ್ಲಿ ಇವೆ. ಈ ಎರಡೂ ಪ್ರಮುಖ ನಗರಗಳೂ ಸಿಲಿಕಾನ್ – ಐಟಿ ಹಬ್ ವಿಚಾರದಲ್ಲಿ ಕಳೆದ ಎರಡು ದಶಕಗಳಿಂದಲೂ ಪರಸ್ಪರ ದೈತ್ಯ ಸ್ಪರ್ಧೆಯನ್ನೇ ನಡೆಸಿವೆ. ದೇಶದಲ್ಲೇ ಐಟಿ ಕ್ಷೇತ್ರಕ್ಕೆ ದಕ್ಷಿಣ ಭಾರತದಲ್ಲಿ ಭದ್ರ ಬುನಾದಿಯನ್ನು ಹಾಕಿದವರಲ್ಲಿ ಕರ್ನಾಟಕದ ಮಾಜಿ ಸಿಎಂ ಎಸ್.ಎಂ ಕೃಷ್ಣ ಹಾಗೂ ಅಖಂಡ ಆಂಧ್ರಪ್ರದೇಶದ ಸಿಎಂ ಆಗಿದ್ದ ಚಂದ್ರಬಾಬು ನಾಯ್ಡು ಅವರು ಮುಂಚೂಣಿಯಲ್ಲಿ ನಿಲ್ಲುತ್ತಾರೆ.

ಇನ್ನು ಎರಡೂ ನಗರಗಳು ಅತ್ಯಂತ ವೇಗವಾಗಿ ಬೆಳೆಯುತ್ತಿರುವುದರ ಜೊತೆ ಜೊತೆಗೆ ಪೈಪೋಟಿಯೂ ಜೋರಾಗಿದೆ. ಇದೀಗ ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ನಾವೇನು ಕಡಿಮೆ ಇಲ್ಲ. ಹೈದರಾಬಾದ್ ಎರಡನೇ ಸ್ಥಾನದಲ್ಲಿ ಇದೆ ಎಂದರೆ ಮೊದಲನೇ ಸ್ಥಾನಕ್ಕೆ ಬರುವುದಕ್ಕೆ ಅವಿರತವಾಗಿ ಶ್ರಮಿಸುತ್ತಿದೆ ಎಂದೇ ಅರ್ಥ ಎಂದು ಹೇಳಿದ್ದಾರೆ. ಇನ್ನು ಎರಡೂ ನಗರಗಳ ಬಗ್ಗೆ ಇತ್ತೀಚಿನ ದಿನಗಳಲ್ಲಿ ಸೋಷಿಯಲ್ ಮೀಡಿಯಾದಲ್ಲಿ ಭಾರೀ ಚರ್ಚೆಗಳ ನಡೆಯುವುದು ಸಾಮಾನ್ಯ. ಆದರೆ, ಇದೀಗ ಚಂದ್ರಬಾಬು ನಾಯ್ಡು ಅವರ ಟ್ವೀಟ್ ರಾಜಕೀಯ ಚರ್ಚೆಗೂ ಕಾರಣವಾಗಿದೆ.

ಚಂದ್ರಬಾಬು ನಾಯ್ಡು ಟ್ವೀಟ್ ಮಾಡಿ ಹೇಳಿದ್ದೇನು ?

ಬೆಂಗಳೂರು ಹಾಗೂ ಹೈದರಾಬಾದ್ ಚರ್ಚೆ ಮತ್ತೆ ಮುನ್ನೆಲೆಗೆ ಬರುವುದಕ್ಕೆ ಮುಖ್ಯ ಕಾರಣ ಚಂದ್ರಬಾಬು ನಾಯ್ಡು ಅವರು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಮಾಡಿರುವ ಪೋಸ್ಟ್, 1990ರ ದಶಕದಲ್ಲಿ ಆಂಧ್ರಪ್ರದೇಶದ ಮುಖ್ಯಮಂತ್ರಿಯಾಗಿ ಮೊದಲ ಬಾರಿ ಅಧಿಕಾರ ಸ್ವೀಕರಿಸಿದಾಗ ಹೈದರಾಬಾದ್ ಬೆಂಗಳೂರಿಗೆ ಪರ್ಯಾಯವಾಗಿ / ಎರಡನೇ ಸ್ಥಾನಕ್ಕೆ ಬರುವುದಕ್ಕೆ ಪ್ರಾರಂಭವಾಯಿತು ಎನ್ನುವುದು ನನಗೆ ನೆನಪಿದೆ ಎಂದು ಹೇಳಿದ್ದಾರೆ. ಮುಂದುವರಿದು ಇಂದು ಹೈದರಾಬಾದ್ ಎಲ್ಲಾ ಕ್ಷೇತ್ರ ಅಥವಾ ವಿಷಯಗಳಲ್ಲೂ (ಕಚಿಡಿಚಿಟಜಣಜಥಿ) ಭಾರತದ ನಂ. 1 ನಗರವಾಗಿದೆ ಎಂದು ಅವರು ಹೇಳಿದ್ದಾರೆ.

ನಾಯ್ಡು ಅವರು ಹೈದರಾಬಾದ್ ಎರಡನೇ ಸ್ಥಾನದಲ್ಲಿ ಇದೆ ಎನ್ನುವುದನ್ನು ಸವಾಲು ಮತ್ತು ಅವಕಾಶ ಎಂದಿದ್ದಾರೆ. ನಂ. 2 ಆಗಿರುವುದು ಎಂದರೆ ನಾವು ಹೆಚ್ಚು ಶ್ರಮಿಸಬೇಕು ಎಂದರ್ಥ ಅಂತಲೂ ಹೇಳಿದ್ದಾರೆ. ಈ ಮೂಲಕ ಬೆಂಗಳೂರಿಗೆ ಭರ್ಜರಿ ಪೈಪೋಟಿ ನೀಡುವ ಮುನ್ಸೂಚನೆಯನ್ನು ಕೊಟ್ಟಿದ್ದಾರೆ. ಬೆಂಗಳೂರಿಗೆ ಹೋಲಿಕೆ ಮಾಡಿದರೆ ಹೈದರಾಬಾದ್ ಯಾವುದರಲ್ಲೂ ಕಮ್ಮಿ ಇಲ್ಲ ಎಂದಿದ್ದಾರೆ.

ಇನ್ನು ಈಚೆಗೆ ಆರ್ಥಿಕ ದತ್ತಾಂಶದಲ್ಲಿ ಆಂಧ್ರಪ್ರದೇಶ ಎರಡನೇ ಸ್ಥಾನದಲ್ಲಿದೆ ಎನ್ನುವ ಮಾಹಿತಿಯನ್ನು ಕೇಂದ್ರ ಸರ್ಕಾರವು ಬಿಡುಗಡೆ ಮಾಡಿತ್ತು. ಇದರ ಬೆನ್ನಲ್ಲೇ ಚಂದ್ರಬಾಬು ನಾಯ್ಡು ಅವರು ಈ ಪೋಸ್ಟ್ ಮಾಡಿದ್ದಾರೆ. ಆ ರೀತಿ ನೋಡಿದರೆ 10 ವರ್ಷಗಳ ಅವಧಿಗೆ ಮಾತ್ರ ಹೈದರಾಬಾದ್ ಎರಡೂ ರಾಜ್ಯಗಳಿಗೂ ರಾಜಧಾನಿಯಾಗಿತ್ತು. ಆ ಅವಧಿ ಇದೀಗ ಮುಕ್ತಾಯವಾಗಿದೆ. ಈ ಟ್ವೀಟ್ ಬೆಂಗಳೂರು – ಹೈದರಾಬಾದ್ ಸ್ಪರ್ಧೆಗೆ ಮಾತ್ರವಲ್ಲ. ತೆಲಂಗಾಣದ ಮುಖ್ಯಮಂತ್ರಿ ರೇವಂತ ರೆಡ್ಡಿಗೂ ಟಾಂಗ್ ಕೊಟ್ಟಿರುವಂತಿದೆ.

# ಜಾತಿ ಗಣತಿ ವರದಿ ವಿರೋಧಿಸಿದ ಗದಗಿನ ತೋಂಟದಾರ್ಯ ಮಠದ ಶ್ರೀ: ಲಿಂಗಾಯತರ ಸಂಖ್ಯೆ 1.50 ಕೋಟಿ..

ಗದಗ : ರಾಜ್ಯದಲ್ಲಿ ಜಾತಿ ಗಣತಿ ವರದಿ ಮಂಡನೆ, ಜಾತಿ ಕುರಿತು ಚರ್ಚೆಗಳು ಆಗುತ್ತಿವೆ. ವಿಪಕ್ಷ ನಾಯಕರು ಮಾತ್ರವಲ್ಲದೇ ವಿವಿಧ ಸಮುದಾಯಗಳು, ಸಮಾಜಗಳು ವಿರೋಧಿಸುತ್ತಿದ್ದಾರೆ. ಈ ಸಮೀಕ್ಷೆ ಸರಿಯಲ್ಲ. ಇಷ್ಟು ಹಳೆಯ ಸಮೀಕ್ಷೆಯ ವರದಿ ಜಾರಿ ಸರಿಯಲ್ಲ ಎಂದಿದ್ದಾರೆ. ಇದೀಗ ಜಾತಿ ಗಣತಿ ವರದಿ ಕುರಿತು ಗದಗಿನ ತೋಂಟದಾರ್ಯ ಮಠದ ಡಾ. ಪೀಠಾಧಿಪತಿಗಳಾದ ತೋಂಟದ ಸಿದ್ಧರಾಮ ಶ್ರೀಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬುಧವಾರ ಮಾತನಾಡಿರುವ ಶ್ರೀಗಳು, ರಾಜ್ಯ ಸರ್ಕಾರ ಮಾಡಿರುವ ಈ ಜಾತಿ ಗಣತಿ ವರದಿಯಲ್ಲಿ ಲಿಂಗಾಯತರಿಗೆ ಅನ್ಯಾಯವಾಗಿದೆ. ಜಾತಿ ಗಣತಿಯ ವರದಿ ಸಾರ್ವಜನಿಕರಲ್ಲಿ ಸಂದೇಹ ಹುಟ್ಟು ಹಾಕಿದೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ರಾಜ್ಯ ಸರ್ಕಾರವು ಇನ್ನೊಮ್ಮೆ ಸಮೀಕ್ಷೆ ನಡೆಸಿ ಮತ್ತೊಮ್ಮೆ ಜಾತಿ ಗಣತಿ ವರದಿ ಸಿದ್ಧಪಡಿಸಬೇಕು ಎಂದು ಆಗ್ರಹಿಸಿದರು.

ಸುಮಾರು ಏಳೆಂಟು ವರ್ಷಗಳ ಹಿಂದೆ ಜಾತಿ ಗಣತಿ ಸಿದ್ಧಪಡಿಸಿದ್ದಾರೆ. ಆ ಜಾತಿ ಗಣತಿ ವರದಿ ಸಮರ್ಪಕವಾಗಿ ಇಲ್ಲ. ಆ ವರದಿಯನ್ನು ಸಿದ್ಧಪಡಿಸಿದ ವ್ಯಕ್ತಿಗಳು ಕರ್ನಾಟಕ ಪ್ರತಿಯೊಬ್ಬ ವ್ಯಕ್ತಿಯನ್ನು ಸಂಪರ್ಕಿಸಿಲ್ಲ ಎಂಬ ಆರೋಪ ಎದ್ದು ಕಾಣುತ್ತಿದೆ.

ಕರ್ನಾಟಕದಲ್ಲಿ ಲಿಂಗಾಯತರು ಬಹು ಸಂಖ್ಯಾತರೆಂಬುದು ಎಲ್ಲರಿಗೂ ತಿಳಿದಿದೆ. ನಂತರ ಒಕ್ಕಲಿಗರು ಸೇರಿದಂತೆ ವಿವಿಧ ಜಾತಿಯವರು ಇದ್ದಾರೆ.



ಆದರೆ ವರದಿಯಲ್ಲಿ ಲಿಂಗಾಯತರ ಜನಸಂಖ್ಯೆ ಗಣನೀಯವಾಗಿ ಕಡಿಮೆ ಆಗಿದೆ. ಲಿಂಗಾಯತರು ಮೀಸಲಾತಿಗಾಗಿ ಉಪಜಾತಿಯ ಹೆಸರನ್ನು ಬರೆಸಿರುವುದು ಒಂದು ಕಾರಣವಾಗಿರಬಹುದು.

ಇದೊಂದು ಆಘಾತಕಾರಿ ಸಂಗತಿ: ಶ್ರೀಗಳು

ಈ ದೋಷಪೂರಿತ ವರದಿಯನ್ನ ಸರ್ಕಾರ ಒಪ್ಪಿಕೊಳ್ಳುವದರಿಂದ ಅನೇಕ ಜನ ಸಮುದಾಯಗಳಿಗೆ ಅನ್ಯಾಯವಾಗುವ ಸಾಧ್ಯತೆ ಇದೆ. ಶಿಕ್ಷಣ, ರಾಜಕಾರಣ, ಉದ್ಯೋಗ ಹಾಗೂ ವ್ಯವಸಾಯ ಸೇರಿದಂತೆ ಅನೇಕ ಜಾತಿ ಉಪಜಾತಿಗಳಿಗೆ ಅನ್ಯಾಯ ವಾಗಬಹುದು. ನೂರಾರು ಉಪಜಾತಿಗಳನ್ನು ವರದಿಯಲ್ಲಿ ಕೈ ಬಿಟ್ಟಿರುವುದು ಅತ್ಯಂತ ಆಘಾತಕಾರಿ ಸಂಗತಿ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಲಿಂಗಾಯರ ಜನಸಂಖ್ಯೆ 1.50 ಕೋಟಿ: ಶ್ರೀಗಳು

ರಾಜ್ಯ ಸರ್ಕಾರ ನ್ಯಾ.ನಾಗಮೋಹನ್ ದಾಸ್ ಅವರ ನೇತೃತ್ವದ ಸಮಿತಿಯಿಂದ ಸ್ವೀಕಾರ ಮಾಡಿರುವ ಜಾತಿ ಗಣತಿ ವರದಿ ಸಮರ್ಪಕವಾಗಿಲ್ಲ. ಲಿಂಗಾಯತರ ಸಂಖ್ಯೆ ಅಂದಾಜಿನ ಪ್ರಕಾರ 1 ಕೋಟಿ 50 ಲಕ್ಷಕ್ಕೂ ಹೆಚ್ಚಿದೆ. ಆದರೆ ವರದಿಯಲ್ಲಿ ಲಿಂಗಾಯತ ಸಂಖ್ಯೆ ಕೇವಲ 72 ಲಕ್ಷಕ್ಕೆ ಇಳಿಸಿದ್ದು ಅತ್ಯಂತ ಆಘಾತಕಾರಿ. ಬೇರೆ ಬೇರೆ ಜಾತಿಯವರು ಮುನ್ನಲೆಗೆ ಬಂದಿದ್ದಾರೆ. ಸರ್ಕಾರ ಇನ್ನೊಮ್ಮೆ ಪರಿಶೀಲನೆ ಮಾಡಿ ನೈಜ ವರದಿ ಬಿಡುಗಡೆ ಮಾಡಬೇಕು ಎಂದು ಹೇಳಿದರು.

ವರದಿಯಿಂದ ಲಿಂಗಾಯತರಿಗೆ ಅನ್ಯಾಯ!

ಯಾರಿಗೂ ಅನ್ಯಾಯವಾಗದಂತಹ ಸರ್ಕಾರ ವರದಿಯನ್ನು ಸಿದ್ದಪಡಿಸಿ ಯೋಜನೆ ಪೂರ್ಣಗೊಳಿಸಬೇಕು. ಜಾತಿ ಗಣತಿ ಮಾಡಿರುವ ಉದ್ದೇಶ ಸ್ಪಷ್ಟವಾಗಿಲ್ಲ ಎಂದಿರು ಶ್ರೀಗಳು, ಒಳಗಡೆ ಯಾವುದೋ ಒಂದು ಉದ್ದೇಶ ಇಟ್ಟಿಕೊಂಡು ಮಾಡಿರಬಹುದು. ಜಾತಿ ಗಣತಿ ವರದಿಗೆ ಬಹುತೇಕ ಲಿಂಗಾಯತರ ವಿರೋಧವಿದೆ. ಸಚಿವ ಸಂಪುಟದಲ್ಲಿ ಇರುವಂತಹ ಕಾಂಗ್ರೆಸ್ ನ ಮಂತ್ರಿಗಳಿಂದಲೇ ಈ ವರದಿಗೆ ವಿರೋಧ ಇದೆ. ಲಿಂಗಾಯತ ಸಮುದಾಯಕ್ಕೆ ಸಂಬಂಧಿಸಿದ ವಿಚಾರದಲ್ಲಿ ಅನ್ಯಾಯವಾಗಲಿದೆ ಎಂದು ಅವರು ವಿವರಿಸಿದರು.

ಈ ಜಾತಿ ಗಣತಿ ವರದಿ ಕುರಿತು ಸಮಾಜದ ಪ್ರಮುಖರು, ಗಣ್ಯ ವ್ಯಕ್ತಿಗಳು, ಮಠಾಧೀಶರು ಸಮಾಲೋಚನೆ ಮಾಡಿ ಮುಂದಿನ ತೀರ್ಮಾನ ತಗೆದುಕೊಳ್ಳುತ್ತೇವೆ. ಯಾವ ಜಾತಿಗೂ ಅನ್ಯಾಯವಾಗಬಾರದು ಎಂಬುದೇ ತೋಂಟದಾರ್ಯ ಮಠದ ನಿಲುವಾಗಿದೆ.

ರಾಜಕೀಯ ಉದ್ದೇಶದಿಂದ ವರದಿ ಜಾರಿ..

ಸರ್ಕಾರ ಸಾಮಾಜಿಕ ನ್ಯಾಯದ ಪರ ಇರಬೇಕು. ಯಾವುದೇ ರಾಜಕೀಯ ಉದ್ದೇಶದಿಂದ ಜಾತಿ ಗಣತಿ ಜಾರಿ ತರುತ್ತಿರಬಹುದು. ಜಾತಿ ಗಣತಿಯಲ್ಲಿ ಲಿಂಗಾಯತರಿಗೆ ಹೇಗೆ ಅನ್ಯಾಯವಾಗಿದೆ?. ಅದೇ ರೀತಿ ಒಕ್ಕಲಿಗರಿಗೂ ಅನ್ಯಾಯವಾಗಿದೆ ಎಂದು ಕಾಂಗ್ರೆಸ್ ಪಕ್ಷದ ಸಚಿವ ಸಂಪುಟದ ಪ್ರಮುಖ ಸಚಿವರೇ ಹೇಳಿದ್ದಾರೆ. ಸಂಪುಟದಲ್ಲಿರುವ ಲಿಂಗಾಯತ ಹಾಗೂ ಒಕ್ಕಲಿಗ ಸಚಿವರು ಈ ವರದಿಯಲ್ಲಿ ದೋಷವಿದೆ, ವರದಿ ಸಮರ್ಪಕವಾಗಿಲ್ಲ. ವರದಿಯನ್ನು ಮರಳಿ ಪರಿಶೀಲನೆ ಮಾಡಬೇಕು ಎಂದು ಆ ಸಚಿವರು ಹೇಳಿದ್ದಾರೆ ಎಂಬುದನ್ನು ಶ್ರೀಗಳು ಸರ್ಕಾರಕ್ಕೆ ನೆನಪಿಸಿದರು.

ಈ ಜಾತಿ ಗಣತಿ ವರದಿಯ ಸಂಪುಟಗಳ ಅಧ್ಯಯನಕ್ಕೆ ಸಚಿವರಿಗೆ ನೀಡಲಾಗಿದೆ. ಬಳಿಕ ಏಪ್ರಿಲ್ 17 ರಂದು ಮಹತ್ವದ ಸಚಿವ ಸಂಪುಟ ಸಭೆ ನಡೆಸಿ ನಿರ್ಧಾರ ತಿಳಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಈ ಸಂಬಂಧ ಏಪ್ರಿಲ್ 17ರಂದು ಜರುಗಲಿರುವ ವಿಶೇಷ ಸಚಿವ ಸಂಪುಟದಲ್ಲಿ ಏನು ನಿರ್ಧಾರ ಕೈಗೊಳ್ಳುತ್ತಾರೋ ಕಾದು ನೋಡೋಣ ಎಂದು ಶ್ರೀಗಳು ಹೇಳಿದ್ದಾರೆ.

# ಅಂಗಡಿ ಮೇಲೆ ದಾಳಿ: 12.50 ಕೆಜಿ ಪ್ಲಾಸ್ಟಿಕ್ ವಶ

**ನ್ಯಾಮತಿ:** ನ್ಯಾಮತಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಿಷೇಧಿತ ಪ್ಲಾಸ್ಟಿಕ್ ಮಾರಾಟ ಮತ್ತು ಬಳಕೆ ವಿರುದ್ಧ ದಾಳಿ ನಡೆಸಿ ದಂಡ ಪ್ರಯೋಗ ಮಾಡುವ ಮೂಲಕ ಅಂತಹ ಅಂಗಡಿಯ ಮಾಲೀಕರಿಗೆ ದಂಡ ಹಾಕುವ ಮೂಲಕ ಶನಿವಾರ ಪ್ಲಾಸ್ಟಿಕ್‌ಅನ್ನು ವಶಪಡಿಸಲಾಯಿತು.ಈ ವೇಳೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪಿ.ಗಣೇಶ್ ರಾವ್ ಮಾತನಾಡಿ ನಿಷೇಧಿತ ಪ್ಲಾಸ್ಟಿಕ್ ಕವರ್ ಮತ್ತು ಕ್ಯಾರಿ ಬ್ಯಾಗ್ ಬಳಸದಂತೆ ತಿಳಿಸಿದ್ದರು, ಸಹಿತ ಬಳಸುತ್ತಿದ್ದ ಅಂಗಡಿಗಳ ಮೇಲೆ ದಾಳಿ ಮಾಡಿ ಪ್ಲಾಸ್ಟಿಕ್ ಬಳಕೆ ಮತ್ತು ಮಾರಾಟ ಅಂಗಡಿಯವರಿಗೆ ದಂಡ ವಿಧಿಸಲಾಯಿತು ಎಂದು ತಿಳಿಸಿದ್ದಾರೆ.ಪಟ್ಟಣ ಪಂಚಾಯಿತಿ ವ್ಯಾಪ್ತಿಯ ವಿವಿಧ ಅಂಗಡಿಯಿಂದ ಸುಮಾರು 12.50 ಕೆಜಿ ಪ್ಲಾಸ್ಟಿಕ್ ವಶಪಡಿಸಿಕೊಂಡಿದ್ದು ರೂ 4100 ದಂಡ ಹಾಕಲಾಗಿದ್ದು ಮತ್ತೊಮ್ಮೆ ನಿಷೇಧಿತ ಪ್ಲಾಸ್ಟಿಕ್ ಬಳಸದಂತೆ ಅಂಗಡಿಯವರಿಗೆ ತಿಳಿಸಿದ್ದಾರೆ ಎಂದರು. ಪಟ್ಟಣ ಪಂಚಾಯಿತಿ ಮನು, ಶಿವಕುಮಾರ್, ಪ್ರಶಾಂತ್ ಸೇರಿದಂತೆ ಇತರೆ ಸಿಬ್ಬಂದಿಗಳು ಇದ್ದರು.

# ಜಾಗರ ಹೋಬಳಿಗೆ 21 ಕೋಟಿ ರೂ.ಗಳ ಅನುದಾನ : ಹೆಚ್.ಡಿ. ತಮ್ಮಯ್ಯ

**ಚಿಕ್ಕಮಗಳೂರು:** ಈ ಕ್ಷೇತ್ರದ ಜಾಗರ ಹೋಬಳಿಯೊಂದಕ್ಕೆ ಅಭಿವೃದ್ಧಿ ಕಾಮಗಾರಿಗಳಿಗೆ 21 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದ್ದು, ಕಾಮಗಾರಿ ಆರಂಭವಾಗಿದೆ ಎಂದು ಚಿಕ್ಕಮಗಳೂರು ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ತಿಳಿಸಿದರು.



ಜಾಗರ ಹೋಬಳಿಯ ಶಿರವಾಸೆ ಹಾಗೂ ಮೇಲಿನ ಹುಲುವತ್ತಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ನಡೆದ ಜನಸಂಪರ್ಕ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಸಾಬ, ಲಕ್ಯಾ, ಸಖರಾಯಪಟ್ಟಣ, ದೇವನೂರು ಕ್ಷೇತ್ರಕ್ಕೆ 20 ಕೋಟಿ ರೂ.ಗಳಿಗೂ ಕಡಿಮೆ ಅನುದಾನವನ್ನು ಒದಗಿಸಲಾಗಿದೆ. ಜಾಗರ ಹೋಬಳಿಯೊಂದಕ್ಕೆ ಆದರೆ ಒಟ್ಟು 21 ಕೋಟಿ ರೂ.ಗಳಲ್ಲಿ 13 ಕೋಟಿ ರೂ.ಗಳನ್ನು ವಿಸ್ತೀರ್ಣ ದೊಡ್ಡದಾಗಿರುವ ಶಿರವಾಸೆ ಗ್ರಾ.ಪಂ.ಗೆ ನೀಡಲಾಗಿದ್ದು, ಕಡಿಮೆ ವಿಸ್ತೀರ್ಣ ವಿರುವ ಮೇಲಿನ ಹುಲುವತ್ತಿಗೂ ಉಳಿದ ಹಣ ಬಿಡುಗಡೆ ಮಾಡಲಾಗಿದ್ದು, ಈಗಾಗಲೇ ಕಾಮಗಾರಿಗಳನ್ನು ಆರಂಭಿಸಲಾಗಿದೆ. ಹೆಚ್ಚಿನ ಅವಶ್ಯಕತೆ ಇರುವಲ್ಲಿಗೆ ಪ್ರಥಮ ಆದ್ಯತೆ ನೀಡಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಹೇಳಿದರು.

ಜಾಗರದಿಂದ ನೆತ್ತಿ ಚೌಕದವರೆಗೆ ಐದು ಕೋಟಿ ರೂ.ನ ರಸ್ತೆ ಕಾಮಗಾರಿಗೆ ಇಂದು ಶಂಕು ಸ್ಥಾಪನೆ ನೆರವೇರಿಸಲಾಗಿದೆ. ಕೆಲವೇ ದಿನಗಳಲ್ಲಿ ಹೊಂಡದಕಾನ್‌ವರೆಗೆ 5 ಕೋಟಿ ರೂ. ವೆಚ್ಚದ ಪಿಡಬ್ಲ್ಯುಡಿ ರಸ್ತೆ ನಿರ್ಮಾಣವಾಗಲಿದೆ. ಹೊನ್ನಾಳದಿಂದ ಗಾಳಿಗುಡ್ಡದವರೆಗಿನ 2 ಕೋಟಿ ರೂ.ವೆಚ್ಚದ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಲಾಗಿದೆ. ಇಲ್ಲಿಂದ ಮುಂದುವರಿದ ಭಾಗಕ್ಕೂ ಒಂದೊಂದು ಕೋಟಿ ರೂ.ನ ಎರಡು ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. 25 ಲಕ್ಷ ರೂ.ಗಳ ಶಿರವಾಸೆ ಕಾಂಕ್ರಿಟ್ ರಸ್ತೆ ಈಗಾಗಲೇ ಉದ್ಘಾಟಿಸಲಾಗಿದೆ. ಮೇಲಿನ ಹುಲುವತ್ತಿ ಗ್ರಾ.ಪಂ. ವ್ಯಾಪ್ತಿಯ 40 ಲಕ್ಷ ರೂ. ವೆಚ್ಚದ ಸೇತುವೆಯನ್ನು ಉದ್ಘಾಟಿಸಲಾಗಿದೆ. ಹೊನ್ನಾಳದಿಂದ ಸಿದ್ದರಬಾನುವರೆಗಿನ ಕಾಂಕ್ರಿಟ್ ರಸ್ತೆ ಕಾಮಗಾರಿಯನ್ನು 2 ಕೋಟಿ ರೂ.ವೆಚ್ಚದಲ್ಲಿ ಕೈಗೊಳ್ಳಲಾಗಿದೆ. ಇವಲ್ಲದೆ 5, 10, 20 ಲಕ್ಷ ರೂ.ಗಳ ಸಣ್ಣ ಸಣ್ಣ ರಸ್ತೆ ಕಾಮಗಾರಿಗಳನ್ನು ಕೂಡ ಕೈಗೆತ್ತಿಕೊಳ್ಳಲಾಗಿದೆ. ಬಿಲ್ಲವ ಸಮುದಾಯದ ಸಮುದಾಯ ಭವನ ಮುಕ್ತಾಯಗೊಳಿಸಲು 10 ಲಕ್ಷ ರೂ.ಗಳನ್ನು ಒದಗಿಸಲಾಗಿದೆ. ಅಗತ್ಯವಿದ್ದಲ್ಲಿ ಇನ್ನೂ ಹೆಚ್ಚಿನ ಅನುದಾನ ನೀಡುವುದಾಗಿ ತಿಳಿಸಿದರು.

ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ಬೆನ್ನತ್ತಿ ನಗರಕ್ಕೆ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಹುಡುಕಿಕೊಂಡು ಹೋಗುವ ಪರಿಸ್ಥಿತಿ ಆಗಬಾರದು. ಹಾಗಾಗಿ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಕರೆ ತಂದು ಸಮಸ್ಯೆಗಳನ್ನು ಆಲಿಸುವ ಕೈಜೋಡಿಸಲಾಗಿದೆ. ಇಲ್ಲಿ ಗ್ರಾಮಸ್ಥರು ನೀಡುವ ಅರ್ಜಿಗಳನ್ನು ಪಡೆದುಕೊಂಡು ಆ ಸಮಸ್ಯೆಗಳನ್ನು ಸಂಬಂಧಿಸಿದ ಇಲಾಖೆಯವರು ಬಗೆಹರಿಸಬೇಕು. ಆ ಸಮಸ್ಯೆಗಳನ್ನು ತಹಸೀಲ್ದಾರರು ಹಾಗೂ ತಾ.ಪಂ. ಇಒಗಳು ತಿಂಗಳಿಗೊಮ್ಮೆ ಸಮಸ್ಯೆಗಳ ಸ್ಥಿತಿಗತಿ ಬಗ್ಗೆ ಪರಿಶೀಲಿಸಬೇಕು. ಯಾವುದೇ ಕಾರಣಕ್ಕೂ ಮತ್ತೊಮ್ಮೆ ಸಭೆಯಲ್ಲಿ ಮೊದಲು ಪ್ರಸ್ತಾಪಿಸಿದ ಸಮಸ್ಯೆಗಳು ಪುನರಾವರ್ತನೆಯಾಗಬಾರದು. ಇಲ್ಲಿ ನಡೆಸುವ ಜನ ಸಂಪರ್ಕ ಸಭೆಗಳು ಕಾಟಚಾರದ ಸಭೆಗಳಾಗಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿರುವುದಾಗಿ ತಿಳಿಸಿದರು. 2023ರಲ್ಲಿ ರಾಜ್ಯದಲ್ಲಿ ತಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ರಾಜ್ಯಮಟ್ಟದಲ್ಲಿ ಮುಖ್ಯಮಂತ್ರಿಗಳು, ಎಲ್ಲಾ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ತಮ್ಮ ಕ್ಷೇತ್ರದಲ್ಲಿ, ತಾಲ್ಲೂಕು ಮಟ್ಟದಲ್ಲಿ ಹಾಗೂ ಹೋಬಳಿ ಮಟ್ಟದಲ್ಲಿ ಶಾಸಕರು ಜನಸಂಪರ್ಕ ಸಭೆಗಳನ್ನು ನಡೆಸಬೇಕೆಂಬ ಉದ್ದೇಶದಿಂದ ಈ ಕಾರ್ಯಕ್ರಮ ಆರಂಭ ಮಾಡಲಾಯಿತು. ಸ್ಥಳೀಯ ಮಟ್ಟದಲ್ಲಿ ಸಮಸ್ಯೆ ಬಗೆಹರಿಸಿದರೆ ರಾಜ್ಯಮಟ್ಟಕ್ಕೆ ಹೋಗುವ ಪರಿಸ್ಥಿತಿ ಒದಗುವುದಿಲ್ಲ ಎಂದು ಎನ್ನುವ ಕಾರಣಕ್ಕಾಗಿ, ಅದರಂತೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಅವರು ಜಿಲ್ಲಾ ಮಟ್ಟದಲ್ಲಿ ಹಾಗೂ ತಾವು ತಾಲ್ಲೂಕು ಮಟ್ಟದಲ್ಲಿ ಈ ಸಭೆಯನ್ನು ಉದ್ಘಾಟಿಸಿದ್ದಾಗಿ ತಿಳಿಸಿದರು. ತಾಲ್ಲೂಕು ಮಟ್ಟಕ್ಕೂ ಬರಲು ಗ್ರಾಮಸ್ಥರಿಗೆ ತೊಂದರೆಯಾಗಬಹುದೆಂದು ನೇರವಾಗಿ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಕರೆದೊಯ್ದು, ಜನರ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಎರಡೆರಡು ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯ ಜನಸಂಪರ್ಕ ಸಭೆಗಳನ್ನು ನಡೆಸುವ ಕಾರ್ಯಕ್ರಮ ಆಯೋಜಿಸಿರುವುದಾಗಿ ತಿಳಿಸಿದರು.

ಶಿರವಾಸೆ ಗ್ರಾ.ಪಂ ಅಧ್ಯಕ್ಷ ರಘುನಾಥ್ ಬಿ.ಆರ್, ಮೇಲಿನ ಹುಲುವತ್ತಿ ಗ್ರಾ.ಪಂ. ಅಧ್ಯಕ್ಷೆ ಜಾನಕೀರಾಮ್, ಜಿ.ಪಂ. ಉಪಕಾರ್ಯದರ್ಶಿ ಶಂಕರ್ ಕೊರವರ್, ತಾಲ್ಲೂಕು ತಹಸೀಲ್ದಾರ್ ಸುಮಂತ್‌ಕುಮಾರ್, ತಾ.ಪಂ. ಕಾರ್ಯ ನಿರ್ವಹಣಾಧಿಕಾರಿ ವಿಜಯಕುಮಾರ್, ಶಿರವಾಸೆ ಗ್ರಾ.ಪಂ ಉಪಾಧ್ಯಕ್ಷೆ ರಾಧ, ಮೇಲಿನ ಹುಲುವತ್ತಿ ಗ್ರಾ.ಪಂ.ಉಪಾಧ್ಯಕ್ಷೆ ಕೆ.ಸಿ.ಭಾರತಿ, ಸದಸ್ಯರಾದ ಪ್ರೇಮಾಕ್ಷಿ ಎಸ್.ಅಮೀನ್, ದಾಕ್ಷಾಯಿಣಿ, ಶಿರವಾಸೆ ಗ್ರಾ.ಪಂ. ಸದಸ್ಯರಾದ ವಿಮಲಾ, ಪಾರ್ವತಿ, ಎಸ್.ಉಮಾ, ಗಣೇಶ್, ಟಿ.ಎಸ್.ರಘು, ಎನ್.ಪ್ರೀತಿ, ರವಿ ರೇವಣ್ಣ, ಮೇಲಿನ ಹುಲುವತ್ತಿ ಗ್ರಾ.ಪಂ ಸದಸ್ಯೆ ಶಾರದಾಂಬ, ಡಿಹೆಚ್ಒ ಡಾ.ಅಶ್ವತ್ಥ್ ಬಾಬು, ತಾಲ್ಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಕೇಂದ್ರ ಡೀಸೆಲ್ ಪೆಟ್ರೋಲ್ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆ ಮಾಡಿದೆ : ಸಿಎಂ ಆರೋಪ

**ಬೆಂಗಳೂರು,:** ಪ್ರಧಾನಿ ನರೇಂದ್ರ ಮೋದಿಯವರು ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ಬೆಲೆಯನ್ನು ಹೆಚ್ಚಿಸುವ ಮೂಲಕ ಜನಾಕ್ರೋಶ ಯಾತ್ರೆ ಎಂಬ ಪ್ರಹಸನವನ್ನು ಶುರುಮಾಡಿರುವ ರಾಜ್ಯದ ಬಿಜೆಪಿ ನಾಯಕರಿಗೆ ಮುಟ್ಟಿ ನೋಡಿಕೊಳ್ಳುವಂತೆ ಕಪಾಳಮೋಕ್ಷ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ

ಬೆಲೆ ಏರಿಕೆಗೆ ಕೇಂದ್ರ ಸರ್ಕಾರದ ಜನವಿರೋಧಿ ಆರ್ಥಿಕ ನೀತಿಯೇ ಕಾರಣ ಎಂದು ನಾವು ಹೇಳುತ್ತಲೇ ಬಂದಿರುವ ಸತ್ಯವನ್ನು ಪ್ರಧಾನಿ ನರೇಂದ್ರ ಮೋದಿಯವರೇ ದೇಶದ ಜನರ ಮುಂದೆ ಬಿಚ್ಚಿಟ್ಟು ಒಪ್ಪಿಕೊಂಡಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ

ಈಗ ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ತೆರಿಗೆಯನ್ನು ಎರಡು ರೂಪಾಯಿಗಳಷ್ಟು ಮತ್ತು ಅಡುಗೆ ಅನಿಲ ಸಿಲಿಂಡರ್ ಬೆಲೆಯನ್ನು 50 ರೂಪಾಯಿಯಷ್ಟು ಏರಿಕೆ ಮಾಡಿರುವ ಬಗ್ಗೆ ರಾಜ್ಯದ ಬಿಜೆಪಿ ನಾಯಕರ ಪ್ರತಿಕ್ರಿಯೆ ಏನು ಎಂಬುದನ್ನು ನಾನು ತಿಳಿದುಕೊಳ್ಳಬಯಸುತ್ತೇನೆ ಎಂದಿದ್ದಾರೆ

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಇಳಿಯುತ್ತಿದ್ದರೂ ಕೇಂದ್ರ ಸರ್ಕಾರ ಪೆಟ್ರೋಲಿಯಂ ಉತ್ಪನ್ನಗಳ ಬೆಲೆಯನ್ನು ಒಂದೇ ಸಮನೆ ಏರಿಸುತ್ತಾ ಹೋಗಲು ಕಾರಣ ಏನು ಎಂಬುದನ್ನು ಬಿಜೆಪಿ ನಾಯಕರು ರಾಜ್ಯದ ಜನರಿಗೆ ತಿಳಿಸಬೇಕು ಎಂದು ಆಗ್ರಹಿಸಿದರು

ಅಕ್ಕಿ, ಬೇಳೆ, ಮೀನು, ಮಾಂಸ, ತರಕಾರಿಯಿಂದ ಹಿಡಿದು ಹೋಟೆಲ್ ತಿಂಡಿ ವರೆಗೆ ಎಲ್ಲದರ ಬೆಲೆ ಏರಿಕೆಗೆ ಮೂಲ ಕಾರಣ ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ಬೆಲೆಯನ್ನು ಹೆಚ್ಚಿಸುತ್ತಲೇ ಇರುವ ಕೇಂದ್ರ ಸರ್ಕಾರದ ಜನವಿರೋಧೀ ನೀತಿ ಎನ್ನುವುದು ಆರ್ಥಿಕ ವ್ಯವಹಾರದ ಸಾಮಾನ್ಯ ಜ್ಞಾನ ಇದ್ದವರಿಗೆಲ್ಲ ಗೊತ್ತು. ಹೀಗಿದ್ದರೂ ಬೆಲೆ ಏರಿಕೆಯ ಪಾಪದ ಹೊರೆಯನ್ನು ನಮ್ಮ ತಲೆ ಮೇಲೆ ಕಟ್ಟಲು ಹೊರಟಿರುವ ಬಿಜೆಪಿ ನಾಯಕರ ಮುಖಕ್ಕೆ ಪ್ರಧಾನಿ ನರೇಂದ್ರ ಮೋದಿಯವರೇ ಮಸಿ ಬಳಿದಿದ್ದಾ–ರೆ ಎಂದು ಲೇವಡಿ ಮಾಡಿದ್ದಾರೆ

ಜನಾಕ್ರೋಶ ಯಾತ್ರೆ ಹೊರಟವರ ಮುಂದೆ ಈಗ ಇರುವುದು ಎರಡೇ ಎರಡು ಆಯ್ಕೆ: ಒಂದೋ ಅವರು ಪ್ರಧಾನ ಮಂತ್ರಿಯವರ ಮೇಲೆ ಒತ್ತಡ ಹೇರಿ ಕೇಂದ್ರ ಸರ್ಕಾರ ಹೆಚ್ಚಿಸಿರುವ ಬೆಲೆಯನ್ನು ಇಳಿಸುವಂತೆ ಮಾಡಬೇಕು, ಇಲ್ಲವೇ ಯಾತ್ರೆಯನ್ನು ಕೊನೆಗೊಳಿಸಿ ಗಂಟುಮೂಟೆ ಕಟ್ಟಿಕೊಂಡು ತಮ್ಮ ತಮ್ಮ ಮನೆಗೆ ಮರಳಬೇಕು. ಇದರ ಹೊರತಾಗಿ ಈ ಯಾತ್ರೆಯ ಪ್ರಹಸನವನ್ನು ಮುಂದುವರಿಸಿದರೆ ಜನರ ಆಕ್ರೋಶಕ್ಕೆ ತುತ್ತಾಗುವುದು ಖಂಡಿತ ಎಂದು ತಿಳಿಸಿದ್ದಾರೆ.

### ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ. ಕೆ.ಟಿ.ತಿಪ್ಪೇಸ್ವಾಮಿ ಸೂಚನೆ

# ತೆರೆದ ಮನೆ ಕಾರ್ಯಕ್ರಮದ ಮೂಲಕ ಮಕ್ಕಳ ರಕ್ಷಣೆ ಕುರಿತು ಜಾಗೃತಿ ಮೂಡಿಸಿ

**ಚಿತ್ರದುರ್ಗ:** ಜಿಲ್ಲೆಯ ಪ್ರತಿ ಪೊಲೀಸ್ ಠಾಣೆಗಳಲ್ಲಿ ವರ್ಷಕ್ಕೆ ಕನಿಷ್ಠ 20 ತೆರೆದ ಮನೆ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ, ಮಕ್ಕಳ ರಕ್ಷಣಾ ನೀತಿ ಕುರಿತು ಮಕ್ಕಳಿಗೆ ಜಾಗೃತಿ ಮೂಡಿಸಬೇಕು. ಕಾನೂನು ಸಂಘರ್ಷಕ್ಕೆ ಒಳಗಾದ ಮಕ್ಕಳ ಜೊತೆ ಪೊಲೀಸ್ ಅಧಿಕಾರಿಗಳು ಸಂವೇದನಾಶೀಲರಾಗಿ ವರ್ತಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಸೂಚಿಸಿದರು.

ನಗರದ ಜಿಲ್ಲಾ ಶಿಕ್ಷಕರ ತರಬೇತಿ ಕೇಂದ್ರ (ಡಯಟ್) ಸಭಾಂಗಣದಲ್ಲಿ ಸೋಮವಾರ ಮಕ್ಕಳ ವಿಶೇಷ ಪೊಲೀಸ್ ಘಟಕದ ಕಾರ್ಯವೈಖರಿ ಕುರಿತು ಪೊಲೀಸ್ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.



ಕಾನೂನು ಸಂಘರ್ಷಕ್ಕೆ ಸಿಲುಕಿದ ಮಕ್ಕಳ ಪೈಕಿ, ಹದಿ ಹರೆಯದವರು ಹೆಚ್ಚಿನ ಸಂಖ್ಯೆಯಲ್ಲಿ ಇರುವುದು ಕಳವಳಕಾರಿ ಸಂಗತಿಯಾಗಿದೆ. ಜಿಲ್ಲೆಯಾದ್ಯಂತ ಪ್ರೌಢಶಾಲೆಗಳಲ್ಲಿ ಮಾತ್ರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಆದರೆ 18 ವರ್ಷದ ಒಳಗಿನವರೆಲ್ಲರೂ ಮಕ್ಕಳು ಎಂದೇ ಪರಿಗಣಿಸಲಾಗುತ್ತದೆ. 16 ರಿಂದ 18 ವರ್ಷದ ಮಕ್ಕಳಲ್ಲಿ ದೈಹಿಕ ಹಾಗೂ ಮಾನಸಿಕ ಬದಲಾವಣೆ ಉಂಟಾಗುತ್ತಿರುತ್ತವೆ. ಈ ಸಮಯದಲ್ಲಿ ಮಕ್ಕಳು ವಿಚಲಿತರಾಗಿ ಕಾನೂನು ಸಂಘರ್ಷಕ್ಕೆ ತುತ್ತಾಗುವ ಸಂಭವಿರುತ್ತದೆ. ಆದ್ದರಿಂದ ಪೊಲೀಸ್ ಇಲಾಖೆ ಅಧಿಕಾರಿಗಳು ವರ್ಷದಲ್ಲಿ ಒಮ್ಮೆಯಾದರು ಪಿಯುಸಿ, ಐ.ಟಿ.ಐ, ಪ್ಯಾರಾ ಮೆಡಿಕಲ್, ಡಿಪ್ಲೋಮೊ, ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ತಪ್ಪದೇ ಹಮ್ಮಿಕೊಳ್ಳಬೇಕು. ಈ ವೇಳೆ ಮಕ್ಕಳು ಗಂಭೀರವಾಗಿ ವಿಷಯಗಳನ್ನು ಗ್ರಹಿಸುವಂತೆ ನೈಜ ಪ್ರಕರಣಗಳ ಹೆಸರು, ಸ್ಥಳ ಬದಲಾಯಿಸಿ ಉದಾಹರಣೆ ಸಹಿತ ಮನಮುಟ್ಟುವಂತೆ ತಿಳಿಸಬೇಕು ಎಂದರು.

ಪ್ರತಿ ಠಾಣೆಗಳಲ್ಲಿಯೂ ಮಕ್ಕಳ ವಿಶೇಷ ಪೊಲೀಸ್ ಘಟಕ ತೆರದು ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಠಾಣೆಗಳಲ್ಲಿ ಮಕ್ಕಳ ರಕ್ಷಣೆಗೆ ಸಂಬಂಧಿಸಿದ ಇಲಾಖೆಗಳ ನಾಮಫಲಕಗಳನ್ನು ಅಳವಡಿಸಬೇಕು. ಪ್ರತಿ ಗುರುವಾರ ತೆರೆದ ಮನೆ ಕಾರ್ಯಕ್ರಮ ಆಯೋಜಿಸುವಂತೆ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

# ಭೋವಿ ಅಭಿವೃದ್ಧಿ ನಿಗಮದಲ್ಲಿ 97 ಕೋಟಿ ಗುಳುಂ

**ಬೆಂಗಳೂರು** –ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಮೂಲಕ ಫಲಾನುಭವಿಗಳಿಗೆ ನೀಡಬೇಕಾದ 97 ಕೋಟಿ ರೂಪಾಯಿಗಳನ್ನು ಅಧಿಕಾರಿಗಳು ಮತ್ತು ರಾಜಕೀಯ ಮುಖಂಡರು ವ್ಯವಸ್ಥಿತವಾಗಿ ಗುಳುಂ ಮಾಡಿದ್ದಾರೆ

ಅವ್ಯವಹಾರ ಸಂಬಂಧ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇತ್ತೀಚೆಗೆ ನಡೆಸಿದ ದಾಳಿಯಲ್ಲಿ 97 ಕೋಟಿ ರೂಗಳು ದುರುಪಯೋಗ ಮಾಡಿರುವುದು ಪತ್ತೆಯಾಗಿದೆ.

ಏಜೆಂಟರ ಮೂಲಕ ನಕಲಿ ಫಲಾನುಭವಿಗಳ ಬ್ಯಾಂಕ್ ಖಾತೆಗಳನ್ನು ಪಡೆದುಕೊಂಡು ನಿಗಮದ ವಿವಿಧ ಯೋಜನೆಗಳ ಹೆಸರಿನಲ್ಲಿ ಆ ಖಾತೆಗಳಿಗೆ

ಹಣ ವರ್ಗಾವಣೆ ಮಾಡಲಾಗಿದೆ.ಬಳಿಕ ಈ ಖಾತೆಗಳಿಗೆ ಜಮಾ ಆದ ಹಣವನ್ನು ಬೇರೆಡೆಗೆ ವರ್ಗಾವಣೆ ಮಾಡಿರುವುದನ್ನು ನಿಗಮದ ಮಾಜಿ ವ್ಯವಸ್ಥಾಪಕ ನಿರ್ದೇಶಕ ಬಂಧಿತ ಬಿ. ಕೆ. ನಾಗರಾಜಪ್ಪ ವಿಚಾರಣೆ ವೇಳೆ ಬಾಯ್ಬಿಟ್ಟಿದ್ದಾರೆ.

ದಾಳಿ ವೇಳೆ ಸಂಗ್ರಹಿಸಿದ ಪುರಾವೆಗಳ ಆಧಾರದ ಮೇಲೆ ಬಂಧಿಸಿರುವ ನಾಗರಾಜಪ್ಪ, ಹಲವು ನಕಲಿ ಫಲಾನುಭವಿಗಳ ಖಾತೆಗಳನ್ನು ಬಳಸಿಕೊಂಡು ತಮ್ಮ ಸ್ನೇಹಿತರು ಮತ್ತು ಕುಟುಂಬ ಸದಸ್ಯರ ಬ್ಯಾಂಕ್ ಖಾತೆಗಳಲ್ಲಿ ಹಣ ವರ್ಗಾವಣೆ ಮಾಡಿರುವುದು ಪತ್ತೆಯಾಗಿದೆ.

ಹಗರಣದ ಸಂಬಂಧ ಬಂಧಿತ ನಾಗರಾಜಪ್ಪರನ್ನು ನಿನ್ನೆ ನ್ಯಾಯಾಲಯಕ್ಕೆ ಹಾಜರುಪಡಿಸಿ 14 ದಿನಗಳ ಕಾಲ ಕಸ್ಟಡಿಗೆ ಪಡೆದುಕೊಂಡು ಇಡಿ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆ.

### ಡಾ.ಬಿ.ಆರ್.ಅಂಬೇಡ್ಕರ್‌ರವರ ರಥಯಾತ್ರೆ ಭರಮಸಾಗರಕ್ಕೆ ಆಗಮನ

# ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಲು ಶಾಸಕರ ಮನವಿ

**ಹೊಳಲ್ಕೆರೆ:** ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ ರಥಯಾತ್ರೆ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರ ಭರಮಸಾಗರಕ್ಕೆ ಶನಿವಾರ ಆಗಮಿಸಲಿದ್ದು, ಸಿರಿಗೆರೆ ಸರ್ಕಲ್‌ನಿಂದ ರಥಯಾತ್ರೆಯನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಬೇಕಾಗಿರುವುದರಿಂದ ಕಾರ್ಯಕರ್ತರು ಹಾಗೂ ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸುವಂತೆ ಶಾಸಕ ಡಾ.ಎಂ.ಚಂದ್ರಪ್ಪ ಮನವಿ ಮಾಡಿದರು.

ಭರಮಸಾಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಶಾಸಕ ಡಾ.ಎಂ.ಚಂದ್ರಪ್ಪ ಶುಕ್ರವಾರ ಸಂಜೆ ಚಿತ್ರದುರ್ಗಕ್ಕೆ ಬರುವ ಅಂಬೇಡ್ಕರ್ ರಥಯಾತ್ರೆ ಶನಿವಾರ ಬೆಳಿಗ್ಗೆ 10–30 ಕ್ಕೆ ಸಿರಿಗೆರೆ ಸರ್ಕಲ್‌ಗೆ ಆಗಮಿಸಲಿದೆ. ನೂರಾರು ಬೈಕ್‌ಗಳಲ್ಲಿ ಕಾರ್ಯಕರ್ತರು ಆಗಮಿಸಿ ಯಾತ್ರೆಯನ್ನು ಭವ್ಯವಾಗಿ ಬರಮಾಡಿಕೊಳ್ಳಬೇಕು. ನಂತರ ಭರಮಸಾಗರದಲ್ಲಿ ಅಂಬೇಡ್ಕರ್‌ರವರ ದೊಡ್ಡ ಕಟೌಟ್‌ಗೆ ಮಾಲಾರ್ಪಣೆ ಮಾಡಲಾಗುವುದು. ಎಲ್ಲಿಯೂ ಲೋಪವಾಗದಂತೆ ಎಲ್ಲರೂ ಒಟ್ಟಾಗಿ ಸೇರಿ ಅಂಬೇಡ್ಕರ್ ರಥಯಾತ್ರೆಯನ್ನು ಸ್ವಾಗತಿಸೋಣ. ಪ್ರತಿ ಪಂಚಾಯಿತಿಯಿಂದ ನಾಲ್ವರಿಗೆ ಜವಾಬ್ದಾರಿ ನೀಡಲಾಗಿದೆ. ಭರಮಸಾಗರದಿಂದ ಎಮ್ಮೆಹಟ್ಟಿವರೆಗೆ ರಥಯಾತ್ರೆಯನ್ನು ಕಳಿಸಿಕೊಡುವುದು ನಮ್ಮ ಹೊಣೆ. ಇದಕ್ಕೆ ಕಾರ್ಯಕರ್ತರು ಸಜ್ಜಾಗಬೇಕೆಂದು ತಿಳಿಸಿದರು.

ಭರಮಸಾಗರ ಬಿಜೆಪಿ.ಮಂಡಲ ಅಧ್ಯಕ್ಷ ಶೈಲೇಶ್, ಮಂಜುನಾಥ, ಮಲ್ಲಣ್ಣ, ಬಸವರಾಜ್, ಎನ್.ಟಿ.ಬಸಣ್ಣ, ನಾರಾಯಣರಾವ್, ಸಿದ್ದಲಿಂಗಣ್ಣ ಹಾಗೂ ಪಕ್ಷದ ಹಿರಿಯ ಮುಖಂಡರುಗಳು, ಕಾರ್ಯಕರ್ತರು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.



# ಈಜಲು ತೆರಳಿದ್ದ ಯುವಕ ಮನೋಜ್ ಮೃತದೇಹ ಪತ್ತೆ

**ಕೊಪ್ಪ:** ತುಂಗಾ ನದಿಯಲ್ಲಿ ಈಜಲು ತೆರಳಿದ್ದ ಯುವಕ ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಪತ್ತೆಯಾಗಿದ್ದ ಯುವಕ ಮನೋಜ್ ಮೃತದೇಹ ಇಂದು ಪತ್ತೆಯಾಗಿದೆ.
ಭಾನುವಾರ ಮನೋಜ್ ತನ್ನ ಆರು ಜನ ಸ್ನೇಹಿತರೊಂದಿಗೆ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ನುಗ್ಗೆಮಕ್ಕಿ ಗ್ರಾಮದ ತುಂಗಾ ನದಿಯಲ್ಲಿ ಈಜಲು ತೆರಳಿದ್ದ.
ಈ ವೇಳೆ ಮನೋಜ್ ನಾಪತ್ತೆಯಾಗಿದ್ದ, ಹೀಗಾಗಿ ಅಗ್ನಿಶಾಮಕ ಸಿಬ್ಬಂದಿಗಳು ಹಾಗೂ ಸ್ಥಳೀಯರು ತೀವ್ರ ಶೋಧ ಕಾರ್ಯ ನಡೆಸಿದ್ದರು. ಆದರೆ ಇಂದು ಹರಿಹರಪುರದ ಗುರುಕುಲ ಬಳಿ ಮನೋಜ್ ಮೃತದೇಹ ಪತ್ತೆಯಾಗಿದೆ. ಸ್ಥಳಕ್ಕೆ ಹರಿಹರಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.
ಇನ್ನೇನು ಬೇಸಿಗೆ ರಜೆ ಆರಂಭಗೊಳ್ಳುತ್ತಿದ್ದು, ಮಕ್ಕಳು ಸುರಕ್ಷಿತವಲ್ಲದ ಸ್ಥಳಗಳಲ್ಲಿ ಈಜಲು ತೆರಳದಂತೆ ಪೋಷಕರು ಎಚ್ಚರ ವಹಿಸಬೇಕಿದೆ.

### ತಾಲ್ಲೂಕು ಮಟ್ಟದ ಮೆಸ್ಕಾಂ ಜನಸಂಪರ್ಕ ಸಭೆ

# ಗೃಹಜ್ಯೋತಿ ಯೋಜನೆ ಸಮರ್ಪಕ ಪೂರೈಕೆಗೆ ಸೂಚನೆ

**ಚಿಕ್ಕಮಗಳೂರು :** ಗೃಹಜ್ಯೋತಿ ಯೋಜನೆಯಡಿ ಯಾವೊಬ್ಬ ಫಲಾನುಭವಿಗೂ ಅನ್ಯಾಯವಾದದಂತೆ ಪ್ರತಿ ಕುಟುಂಬಕ್ಕೂ ಸಮರ್ಪಕ ವಿದ್ಯುತ್ ಪೂರೈಕೆ ಆಗಬೇಕೆಂದು ಮೆಸ್ಕಾಂ ಅಧಿಕಾರಿಗಳಿಗೆ ಗ್ಯಾರಂಟಿ ಪ್ರಾಧಿಕಾರದ ತಾಲೂಕು ಅಧ್ಯಕ್ಷರಾದ ಮಲ್ಲೇಶ್ ಸ್ವಾಮಿ ಸೂಚಿಸಿದರು.

ನಗರದ ಮೆಸ್ಕಾಂ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಮೆಸ್ಕಾಂ ಜನಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು ಈ ಯೋಜನೆಯು ಪ್ರತಿಯೊಬ್ಬ ಮಧ್ಯಮ ವರ್ಗದ ಹಾಗೂ ಕೆಳವರ್ಗದ ಜನರ ಸಂಜೀವಿನಿಯಾಗಿದ್ದು ಈ ಯೋಜನೆಯನ್ನು ನಮ್ಮ ರಾಜ್ಯ ಕಾಂಗ್ರೆಸ್ ಸರ್ಕಾರವು ಬಹಳ ಸದುದ್ದೇಶದಿಂದ ಸಾರ್ವಜನಿಕರ ಬಳಕೆಗೆ ರೂಪಿಸಲಾಗಿದೆ ಈ ಯೋಜನೆಯನ್ನು ಮೆಸ್ಕಾಂ ಅಧಿಕಾರಿಗಳು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಸಮರ್ಪಕವಾಗಿ ನೀಡಬೇಕು ಎಂದು ಸಲಹೆ ನೀಡಿದರು.



ಗೃಹಜ್ಯೋತಿ ಯೋಜನೆಯಲ್ಲಿ ಈವರೆಗೂ ನಮ್ಮ ತಾಲೂಕು ಉತ್ತಮ ಪ್ರಗತಿಯನ್ನು ಕಂಡಿದ್ದು ಮುಂದಿನ ದಿನಗಳಲ್ಲಿಯೂ ಸಹ ಈ ಯೋಜನೆ ವ್ಯಾಪ್ತಿಗೆ ಒಳಪಡದ ಫಲಾನುಭವಿಗಳನ್ನು ಈ ಯೋಜನೆಗೆ ಸೇರಿಸುವ ಕೆಲಸವನ್ನು ಮಾಡಲಾಗುವುದು ಮತ್ತು ಈ ಯೋಜನೆಯನ್ನು ತಾಲೂಕಿನ ಪ್ರತಿಯೊಂದು ಕುಟುಂಬವು ಸಮರ್ಪಕವಾಗಿ ಪಡೆಯುವಂತೆ ಕಾಳಜಿ ವಹಿಸಲಾಗುವುದು ಎಂದರು.

ಅಲ್ಲದೆ ತಾಲೂಕಿನ ಪ್ರತಿ ಗ್ರಾಮಕ್ಕೆ ವಿದ್ಯುತ್ ಪೂರೈಕೆ, ಬೀದಿ ದೀಪ ಅಳವಡಿಕೆ, ವಿದ್ಯುತ್ ಬಲ್ಬ್ ಅಳವಡಿಕೆ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು ಆದಷ್ಟು ಬೇಗ ಈ ಸಮಸ್ಯೆ ಬಗೆಹರಿಸಲಾಗುವುದು ಎಂಬ ಭರವಸೆ ನೀಡಿದರು.

ಜನ ಸಂಪರ್ಕ ಸಭೆಯಲ್ಲಿ ಸಾರ್ವಜನಿಕರು ಮಾತನಾಡಿ ತಮ್ಮ ತಮ್ಮ ಗ್ರಾಮಗಳಲ್ಲಿ ಅಂದರೆ ತಾಲೂಕಿನ ವ್ಯಾಪ್ತಿಗೆ ಸೇರುವ ಹಲವು ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಸವಿದ್ದು ಕೂಡಲೇ ಅಧಿಕಾರಿಗಳು ಈ ಬಗ್ಗೆ ಗಮನವಹಿಸಿ ಸಮರ್ಪಕ ವಿದ್ಯುತ್ ಪೂರೈಕೆಯನ್ನು ಮಾಡಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಪ್ರತಿಕ್ರಿಸಿದ ತಾಲೂಕು ಗ್ಯಾರೆಂಟಿ ಯೋಜನೆಯ ಪ್ರಾಧಿಕಾರದ ಉಪಾಧ್ಯಕ್ಷರಾದ ಉಪ್ಪಳ್ಳಿಯ ಅನ್ಸರ್ ಅಲಿಖಾನ್ ಅವರು ಸಮರ್ಪಕ ವಿದ್ಯುತ್ ಪೂರೈಕೆಗೆ ಅಧಿಕಾರಿಗಳಿಗೆ ಸೂಚಿಸಲಾಗಿದ್ದು ಮುಂದಿನ ದಿನಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ಲೋಪವಾಗದಂತೆ ಕ್ರಮ ವಹಿಸಲಾಗುವುದು ಎಂದು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರಿಗೆ ಭರವಸೆ ನೀಡಿ–ದರು.

ಅಧೀಕ್ಷಕ ಎಂಜಿನಿಯರ್ ಮಂಜುನಾಥ್ ಅವರು ಮಾತನಾಡಿ ಈವರೆಗೂ ತಾಲೂಕಿನಲ್ಲಿ ಗೃಹ ಜ್ಯೋತಿ ಯೋಜನೆಯನ್ನು ಸಾರ್ವಜನಿಕರು ಬಹುತೇಕ ಸಮರ್ಪಕವಾಗಿ ಬಳಸುತ್ತಿದ್ದು ಫೆಬ್ರವರಿ 2925 ರ ಅಂತ್ಯದ ವೇಳೆಗೆ 3, 30,9,928 ರೂಪಾಯಿಗಳು ಅಂದರೆ ಮೂರು ಕೋಟಿಗೂ ಹೆಚ್ಚು ಸಬ್ಸಿಡಿ ಹಣವನ್ನು ಗೃಹಜೋತಿ ಯೋಜನೆ ಮೂಲಕ ನಗರದ ಸಾರ್ವಜನಿಕರಿಗೆ ನೀಡಲಾಗಿದ್ದು ಈ ಹಣವನ್ನು ಮೆಸ್ಕಾಂ ಇಲಾಖೆಗೆ ಸರ್ಕಾರ ಬರಿಸುತ್ತದೆ ಹಾಗೂ ಮುಂದಿನ ದಿನಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಾಸವಾಗದಂತೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡುತ್ತೇವೆ ಎಂಬ ಭರವಸೆ ನೀಡಿದರು

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದಸದಸ್ಯರಾದ ಗೌಸ್ ಮಯುದ್ದೀನ ಬಾಬು, ಶ್ರೀಮತಿ ಜಯಂತಿ ಜಿ ಶಿವಾಜಿ, ಪುನೀತ್ ಕೆಂಪನಹಳ್ಳಿ, ಕೃಷ್ಣಪ್ಪ ಹಾಗೂ ಮೆಸ್ಕಾಂ ಇಲಾಖೆ ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ವಕ್ಫ್ ಪ್ರಕರಣ ಹಿಂದೂ ಟ್ರಸ್ಟ್‌ಗಳಲ್ಲಿ ಮುಸ್ಲಿಮರ ನೇಮಕಕ್ಕೆ ಅವಕಾಶ ನೀಡುತ್ತೀರಾ? ಕೇಂದ್ರಕ್ಕೆ ಸುಪ್ರೀಂ ಪ್ರಶ್ನೆ

**ನವದೆಹಲಿ:** 2025ರ ವಕ್ಫ್ (ತಿದ್ದುಪಡಿ) ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಹಲವು ಅರ್ಜಿಗಳ ವಿಚಾರಣೆಯ ಸಂದರ್ಭದಲ್ಲಿ ಮುಸ್ಲಿಮರನ್ನು ಹಿಂದೂ ಧಾರ್ಮಿಕ ಟ್ರಸ್ಟ್‌ಗಳ ಭಾಗವಾಗಲು ಅನುಮತಿ ನೀಡಲಾಗುತ್ತದೆಯೇ? ಎಂದು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದೆ.

ವಕ್ಫ್ ಮಸೂದೆ ವಿರುದ್ಧದ ಅರ್ಜಿಗಳ ವಿಚಾರಣೆ ಆರಂಭಿಸಿದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಹಾಗೂ ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ತ್ರಿಸದಸ್ಯ ಪೀಠ, ನೂತನ ವಕ್ಫ್ ತಿದ್ದುಪಡಿ ಕಾಯ್ದೆಯಲ್ಲಿನ ವಿವಿಧ ನಿಯಮಗಳು, ವಿಶೇಷವಾಗಿ ಬಳಕೆದಾರರ ಆಸ್ತಿಯನ್ನು ಬಳಸಿಕೊಳ್ಳುವ ವಕ್ಫ್‌ಗೆ ರೂಪಿಸಲಾಗಿರುವ ನಿಯಮಗಳ ಕುರಿತು ಪ್ರಶ್ನಿಸಿತು.

ಅರ್ಜಿದಾರರ ಪರ ವಾದಿಸಿದ ಹಿರಿಯ ವಕೀಲ ಕಪಿಲ್ ಸಿಬಲ್, "ವಕ್ಫ್ ಮಂಡಳಿಯಲ್ಲಿ ಮುಸ್ಲಿಮೇತರರ ನೇಮಕಕ್ಕೆ ಅವಕಾಶ ನೀಡಿರುವುದು ಸಂವಿಧಾನದ



26ನೇ ವಿಧಿಯ ಉಲ್ಲಂಘನೆ"ಯಾಗಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರ ಹಿಂದೂ ಧಾರ್ಮಿಕ ದತ್ತಿ ಮಂಡಳಿಗಳಲ್ಲಿ ಮುಸ್ಲಿಮರ ನೇಮಕಕ್ಕೆ ಅವಕಾಶ ನೀಡುತ್ತದೆಯೆ?" ಎಂದು ನ್ಯಾಯಾಲಯ ತರಾಟೆ–ಗೆ ತೆಗೆದುಕೊಂಡಿತು

"ಇನ್ನು ಮುಂದೆ ಮುಸ್ಲಿಮರನ್ನು ಹಿಂದೂ ದತ್ತಿ ಮಂಡಳಿಗಳ ಭಾಗವಾಗಲು ನೀವು ಅನುಮತಿಸುತ್ತೀರಾ? ಅನುಮತಿ ನೀಡುವುದಾದರೆ ಅದನ್ನು ಬಹಿರಂಗವಾಗಿ ಹೇಳಿ" ಎಂದು ಸುಪ್ರೀಂ ಕೋರ್ಟ್, ಕೇಂದ್ರ ಸರ್ಕಾರದ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರನ್ನು ಪ್ರಶ್ನಿಸಿತು.

100 ಅಥವಾ 200 ವರ್ಷಗಳ ಹಿಂದೆ ಸಾರ್ವಜನಿಕ ಟ್ರಸ್ಟ್ ಅನ್ನು ವಕ್ಫ್ ಎಂದು ಘೋಷಿಸಿದಾಗ, ಅದನ್ನು ವಕ್ಫ್ ಮಂಡಳಿಯು ಇದ್ದಕ್ಕಿದ್ದಂತೆ ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಇನ್ನು ವಕ್ಫ್ ಆಸ್ತಿ ಎಂದು ಘೋಷಿಸಲಾದ ಆಸ್ತಿಗಳನ್ನು ಡಿ–ನೋಟಿಫೈ ಮಾಡಲಾಗುವುದಿಲ್ಲ ಎಂದು ಆದೇಶಿಸುವ ಬಗ್ಗೆ ಸುಪ್ರೀಂ ಕೋರ್ಟ್ ಪ್ರಸ್ತಾಪ ಮಾಡಿದೆ. ಆದರೆ ಕೇಂದ್ರ ಸರ್ಕಾರ ಈ ಸಲಹೆಯನ್ನು ವಿರೋಧಿಸಿತು ಮತ್ತು ಅಂತಹ ನಿರ್ದೇಶನದ ನೀಡುವ ಮೊದಲು ವಿಚಾರಣೆ ನಡೆಸುವಂತೆ ಕೋರಿತು.

ವಕ್ಫ್ ಕಾಯ್ದೆಯ ಕುರಿತು ವಿಚಾರಣೆ ನಡೆಸುತ್ತಿರುವ ಸುಪ್ರೀಂ ಕೋರ್ಟ್ ಇಂದು ಯಾವುದೇ ಮಧ್ಯಂತರ ಆದೇಶ ನೀಡದೆ ವಿಚಾರಣೆಯನ್ನು ನಾಳೆಗೆ ಮುಂದೂಡಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**